ಸಂಪುಟ: 13 Volume | ಸಂಚಿಕೆ: 285 Issue | ಪುಟಗಳು 08 Pages | ಬುಧವಾರ 31 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಜೀವನದಮಾಧುರ್ಯಸೌಂದರ್ಯ ಬಯಸುವೆಡೆ , ಜೀವನದ ಕಹಿ ವಿಕೃತಿಗೆ ಅಂಜಬೇಕೆ?

–ಸ್ವಾಮಿ ವಿವೇಕಾನಂದ

ದುಡ್ಡು ಖರ್ಚಾದರೂ ಸಿಗದ ಶುದ್ಧ ನೀರು 6

ನೂತನ ಸ್ಕಿಲ್ ಲ್ಯಾಬ್ ಲೋಕಾರ್ಪಣೆ 7

ವಿಜಯಲಕ್ಷ್ಮೀ: ಪತ್ರಿಕೋದ್ಯಮದ ನಿರ್ಭೀತ ಧ್ವನಿ 8

## ಎಸ್ಐಆರ್ ಇಲ್ಲೂ ನಡೆಸಬೇಕು



**ಬೆಂಗಳೂರು:** ದೇಶದಾದ್ಯಂತ ಕೇಂದ್ರ ಚುನಾವಣಾ ಆಯೋಗ ಕೈಗೆತ್ತಿಕೊಂಡಿರುವ ವಿಶೇಷ ಮತದಾರರ ಪರಿಷ್ಕರಣೆ (ಎಸ್ಐಆರ್) ಯನ್ನು ಕರ್ನಾಟಕ ದಲ್ಲೂ ನಡೆಸಬೇಕೆಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ. ಈಗಾಗಲೇ ಚುನಾವಣಾ ಆಯೋಗ ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಈ ಪ್ರಕ್ರಿಯೆಯನ್ನು ಆರಂಭಿಸಿದೆ. ಕರ್ನಾಟಕದಲ್ಲೂ ಇದು ತುರ್ತಾಗಿ ನಡೆಯಬೇಕಾದ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

## ಅಂತಿಮವಾಗಿ 18,496 ಮತದಾರರು

**ಬೆಂಗಳೂರು:** ಜಿಬಿಎ ವ್ಯಾಪ್ತಿಯ ಬೆಂಗಳೂರು ಶಿಕ್ಷಕರ ಕ್ಷೇತ್ರ ಚುನಾವಣೆಗೆ ಸಂಬಂಧಿಸಿದಂತೆ ಅಂತಿಮ ಮತದಾರರ ಪಟ್ಟಿಯಲ್ಲಿ ಒಟ್ಟು 18,496 ಮತದಾರರಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇಂದಿಲ್ಲಿ ತಿಳಿಸಿದ್ದಾರೆ. ಚುನಾವಣಾ ಆಯೋಗದ ವೇಳಾಪಟ್ಟಿಯಂ 1.11.2025ಕ್ಕೆ ಅನ್ವಯವಾಗುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಪ್ರಕಟಿಸಲು ನಿರ್ದೇಶನ ನೀಡಲಾಗಿತ್ತು.

## ಡಾ.ಮುಮ್ತಾಜ ಬೇಗಂಗೆ ಚೈತನ್ಯ ಸಿರಿ



**ಗಂಗಾವತಿ,(ಕೊಪ್ಪಳ):** ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್ತು ಆಯೋಜಿಸಿರುವ 5ನೇ ರಾಜ್ಯ ಸಮ್ಮೇಳನದಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ಗಂಗಾವತಿ ಸ್ನಾತ–ಕೋತ್ತರ ಕೇಂದ್ರದ ನಿರ್ದೇಶಕಿ, ಲೇಖಕಿ ಡಾ.ಮುಮ್ತಾಜ್ ಬೇಗಂ ಅವರಿಗೆ ಚೈತನ್ಯ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಗಿರಿನಾಡು ಯಾದಗೀರ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಡಿಸೆಂಬರ್ 28,29 ಮತ್ತು 30 ಮೂರು ದಿನಗಳ ರಾಜ್ಯ ಮಟ್ಟದ ವಿಜ್ಞಾನ ಸಮ್ಮೇಳನ ಆಯೋಜಿಸಲಾಗಿತ್ತು. ಸೋಮವಾರ ನಡೆದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಡಾ. ಮುಮ್ತಾಜ್ ಬೇಗಂ ಅವರಿಗೆ ಇಸ್ರೋ ವಿಜ್ಞಾನಿ ಕಿರಣಕುಮಾರ ಅವರು ಪ್ರಶಸ್ತಿ ಪ್ರಧಾನ ಮಾಡಿದರು. ಪರಿಷತ್ತಿನ ರಾಜ್ಯಧ್ಯಕ್ಷ ಹುಲಿಕಲ್ ನಟರಾಜ, ಸಮ್ಮೇಳನದ ಸರ್ವಾಧ್ಯಕ್ಷ ವಿಶ್ವರಾಧ್ಯ ಸತ್ಯಂಪೇಟೆ, ಕರ್ನಾಟಕ ಗಡಿ ಪ್ರಾಧಿಕಾರಿದ ಮಾಜಿ ಅಧ್ಯಕ್ಷ ಸಿ. ಸೋಮಶೇಖರ್ ವೇದಿಕೆ ಮೇಲೆ ಉಪಸ್ಥಿತರಿದ್ದರು.

## 25 ಸಾವಿರ ಲಂಚ: ಲೋಕಾಯುಕ್ತ ಬಲೆಗೆ



**ಕಲಬುರಗಿ:** ಕಕ್ಷಿದಾರರೊಬ್ಬರ ಪರವಾಗಿ ಉತ್ತಮವಾಗಿವಾದ ಮಂಡಿಸಲು 50 ಸಾವಿರಕ್ಕೆ ಬೇಡಿಕೆ ಇಟ್ಟು, 25 ಸಾವಿರ ಲಂಚ ಪಡೆಯುತ್ತಿದ್ದ ನಗರದ ಎರಡನೇ ಪಿಡಿಜೆ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕ ರಾಜಮಹೇಂದ್ರ ಜಿ. ಅವರನ್ನು ಲೋಕಾಯುಕ್ತ ಪೊಲೀಸರು ಮಂಗಳವಾರ ವಶಕ್ಕೆ ಪಡೆದಿದ್ದಾರೆ. 50 ಸಾವಿರ ಲಂಚ ನೀಡುವಂತೆ ಬೇಡಿಕೆ ಇಟ್ಟಿದ್ದರು. ಈಗಾಗಲೇ 20 ಸಾವಿರ ಹಣವನ್ನೂ ಪಡೆದಿದ್ದರು. ಉಳಿದ ಹಣಕ್ಕೆ ಬೇಡಿಕೆ ಇಟ್ಟಾಗ ಬೇಸತ್ತ ನವೀನ್ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು.

## ಭಾಲ್ಕಿ ಕ್ಷೇತ್ರದಲ್ಲಿ ಅಭಿವೃದ್ಧಿಯ ಪರ್ವ



10 ಕೋಟಿ ರೂ. ಕಾಮಗಾರಿಗೆ ಇಂದು ಈಶ್ವರ ಖಂಡ್ರೆ ಚಾಲನೆ

**ಭಾಲ್ಕಿ:** ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಬಿ ಖಂಡ್ರೆ ಅವರು ತಮ್ಮ ತವರು ಕ್ಷೇತ್ರ ಭಾಲ್ಕಿಯ ಜನತೆಗೆ ಹೊಸವರ್ಷದ ಉಡುಗೊರೆ ನೀಡಿದ್ದಾರೆ. ಇಂದು ಎಸ್ಎಫ್ಸಿ ಯೋಜನೆಯಡಿ 10 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ.

2024–25ನೇ ಸಾಲಿನ ವಿಶೇಷ ಯೋಜನೆಯಡಿ 1.45 ಕೋಟಿ ರೂ. ವೆಚ್ಚದಲ್ಲಿ ಭಾಲ್ಕಿ ಪಟ್ಟಣದ ವಾರ್ಡ್ ಸಂಖ್ಯೆ 1ರಿಂದ 9ರಲ್ಲಿ ಕಾಂಕ್ರೀಟ್ ಚರಂಡಿ, ಕಾಂಕ್ರೀಟ್ ರಸ್ತೆ ನಿರ್ಮಾಣ, 2 ಕೋಟಿ ರೂ ವೆಚ್ಚದಲ್ಲಿ ವಾರ್ಡ್ 10, 11, 12, 13 ಮತ್ತು 14ರಲ್ಲಿ ಹಾಗೂ ಇಶಾನ್ ಕಾಲೋನಿ ಮತ್ತು ಮಹಾರಾಜಾ ಕಾಲೋನಿಯಲ್ಲಿ ಸಿಸಿ ಚರಂಡಿ, ಸಿಸಿ ರಸ್ತೆ ನಿರ್ಮಾಣಕ್ಕೆ ನಾಳೆ ಗುದ್ದಲಿಪೂಜೆ ನೆರವೇರಿಸಲಿದ್ದಾರೆ. ಇದಲ್ಲದೆ 40 ಲಕ್ಷ ರೂ ವೆಚ್ಚದಲ್ಲಿ ಭಾಲ್ಕಿ ಪಟ್ಟಣದ ವಾರ್ಡ್ 15, 16, 17 ಮತ್ತು 18ರಲ್ಲಿ ಹಾಗೂ 1.30 ಕೋಟಿ ರೂ. ವೆಚ್ಚದಲ್ಲಿ ವಾರ್ಡ್ 19, 20 ಮತ್ತು 21ರಲ್ಲಿ ಹಾಗೂ ಶೇಡೋಳೆ ಆಸ್ಪತ್ರೆ ಎದುರು ಮತ್ತು ಶ್ರೀವಾರಿ ಕಾಲೋನಿಯಲ್ಲಿ ಸಿಸಿ ಚರಂಡಿ ಮತ್ತು ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೂ ಶಂಕುಸ್ಥಾಪನೆ ಮಾಡಲಿದ್ದಾರೆ. ಹಳೆ ಭೀಮ್ ನಗರ ಸೇರಿದಂತೆ ವಾರ್ಡ್ 22ರಿಂದ 27ರಲ್ಲಿ 1 ಕೋಟಿ ರೂ. ವೆಚ್ಚದಲ್ಲಿ, 50 ಲಕ್ಷ ರೂ ವೆಚ್ಚದಲ್ಲಿ ವಾರ್ಡ್ 24ರ ತಾಜ್ ಕಾಲೊನಿಯಲ್ಲೂ ಕಾಂಕ್ರೀಟ್ ರಸ್ತೆ, ಕಾಂಕ್ರೀಡ್ ಚರಂಡಿಗಳ ನಿರ್ಮಾಣಕ್ಕೆ ಚಾಲನೆ

## ಶ್ರೀಗಳಿಗೆ ಶಾಸಕರಿಂದ ಪಾದಪೂಜೆ



**ಯಾದಗಿರಿ:** ಸುತ್ತೂರಿನ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳಿಗೆ ಗುರಮಠಕಲ್ ಶಾಸಕ ಶರಣಗೌಡ ಕಂದಕೂರು ತಮ್ಮ ನಿವಾಸದಲ್ಲಿ ಭಕ್ತಿಯಿಂದ ಸ್ವಾಗತಿಸಿ, ಪಾದಪೂಜೆ ನೆರವೇರಿಸಿದ್ದಾರೆ. ಬಳಿಕ ಹಿತೋಪದೇಶ ನೀಡಿದ ಶ್ರೀಗಳು, ಕಲ್ಯಾಣ ಕರ್ನಾಟಕ ಪ್ರದೇಶ ಸಂಪತ್ಭರಿತ ನಾಡಾಗಿದೆ. ಉತ್ತಮ ಮಳೆಬೆಳೆಯಾದರೆ, ಅನ್ನದಾತರು ಸಂತಸದಿಂದ ಇರಲಿದ್ದಾರೆ. ಈ ಭಾಗಕ್ಕೆ ನಾವು ಆಗಾಗ ಬೇಟಿ ನೀಡಿದ್ದು ಸಂತಸವುಂಟು ಮಾಡಿದೆ ಎಂದಿದ್ದಾರೆ. ಶಾಸಕ ಶರಣಗೌಡ ಕಂದಕೂರ ಮಾತನಾಡಿ, ಗಿರಿಜಿಲ್ಲೆಗೆ ಶ್ರೀಗಳು ಆಗಮಿಸಿ, ಆಶೀರ್ವಾದ ಮಾಡಿದ್ದು, ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದು ತಿಳಿಸಿದ್ದಾರೆ. ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಜಿಲ್ಲಾ ವಕ್ತಾರ ಮಲ್ಲನಗೌಡ ಹಳಿಮನಿ ಕೌಳೂರು, ಮಲ್ಲಿಕಾರ್ಜುನ ಅರುಣಿ, ಮಲ್ಲನಗೌಡ ಹೊಸಳ್ಳಿ, ಶಾಂತರಡ್ಡಿ ಕೋಟಗೇರಾ, ಸಾಹೇಬಗೌಡ ಗೌಡಗೇರಾ ಇದ್ದರು.

# ಸಂಪುಟಕ್ಕೆ ಸಿಗ್ನಲ್ ಸಂಕಟ

### ಸಂಪುಟ ಪುನಾರಚನೆ ಚರ್ಚೆ ಮುನ್ನೆಲೆಗೆ | ಒಪ್ಪಿಗೆ ಪಡೆಯಲು ಸಿಎಂ ಯತ್ನ | ಕೆಲವರಿಗೆ ಕೊಕ್?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಷಯ ದಿನಕ್ಕೊಂದು ತಿರುವುಪಡೆಯುತ್ತಿದೆ. ಇದರ ಬಿಸಿ ಆರುವ ಮುನ್ನವೇ ಸಂಪುಟ ಪುನಾರಚನೆ ಚರ್ಚೆ ಮುನ್ನೆಲೆಗೆ ಬರತೊಡಿದೆ. ಮುಖ್ಯಮಂತ್ರಿ ಕುರ್ಚಿ ಗಟ್ಟಿ ಎಂಬ ಭರವಸೆ ಸಿಗುತ್ತಿದ್ದಂತೆಯೇ ಸಿಎಂ ಸಿದ್ದರಾಮಯ್ಯ ಅವರು ಸದ್ದಿಲ್ಲದೆ ಸಂಪುಟ ಪುನಾರಚನೆ ಸಿದ್ದತೆ ನಡೆಸುತ್ತಿದ್ದಾರೆ.

**ಕೈ ಬಿಟ್ಟರೆ ಸಹಕರಿಸಿ:** ನಾಯಕತ್ವ ಗೊಂದಲದ ನಡುವೆಯೂ ಸಂಪುಟ ಸಹದ್ಯೋಗಿಗಳಿಗೆ ಪುನಾರಚನೆ ವಿಚಾರ ಪ್ರಸ್ತಾಪಿಸಿರುವ ಸಿಎಂ, ಯಾರನ್ನೇ ಆದರೂ ಸಂಪುಟದಿಂದ ಕೈಬಿಟ್ಟರೆ ಸಹಕರಿಸಬೇಕೆಂದು ಮನವಿ ಮಾಡಿದ್ದಾರೆ. ಅಲ್ಲದೆ, ಹೈಕಮಾಂಡ್ ಬಳಿ ಸಂಪುಟ ಪುನಾರಚನೆಗೆ ಗ್ರೀನ್ ಸಿಗ್ನಲ್ ಪಡೆಯಲು ಸಿಎಂ ಸಿದ್ದರಾಮಯ್ಯ ಪ್ರಯತ್ನ ನಡೆಸುತ್ತಿದ್ದಾರೆ.

**ಟತಸ್ಥ ವರಿಷ್ಠರು:** ಕೆಲ ತಿಂಗಳ ಹಿಂದೆಯೇ ಸಂಪುಟ ಪುನಾರಚನೆಗೆ ಅನುಮತಿ ನೀಡುವಂತೆ ಹೈಕಮಾಂಡ್ ಮುಂದೆ ಸಿದ್ದರಾಮಯ್ಯ ಮನವಿ ಮಾಡಿದ್ದರು. ಸಿಎಂ ಹಾಗೂ ಡಿಸಿಎಂ ನಡುವಿನ ನಾಯಕತ್ವ ಗೊಂದಲದ ಕಾರಣ ಸ್ಪಷ್ಟವಾಗಿ ಏನನ್ನೂ ತಿಳಿಸದೆ ಹೈಕಮಾಂಡ್ ತಟಸ್ಥವಾಗಿದೆ.



**ಹೊಸಬರು ಓಕೆ, ಹಲವರಿಗೆ ಕೊಕ್..?**

ಈ ಬಗ್ಗೆ ಹಲವು ಸಚಿವರ ಜೊತೆ ಚರ್ಚೆಯನ್ನೂ ನಡೆಸಿರುವ ಸಿಎಂ ಸಿದ್ದರಾಮಯ್ಯ, ಸಂಪುಟಕ್ಕೆ ಸರ್ಜರಿ ನಡೆಯಲಿದೆ, ಆಗ ಯಾರನ್ನು ಬೇಕಾದರೂ ಕೈ ಬಿಟ್ಟು ಹೊಸಬರನ್ನು ತೆಗೆದುಕೊಳ್ಳಬಹುದು. ಇದಕ್ಕೆ ನೀವೆಲ್ಲರೂ ಸಿದ್ಧರಾಗಿರಬೇಕು, ಜೊತೆಗೆ ಸಹಕರಿಸಬೇಕೆಂದು ಎಂದು ಮನವಿ ಮಾಡಿದ್ದಾರೆ ಎಂಬ ಮಾಹಿತಿ ಇದೆ.

**ಈಗಾಗಲೇ ತೀವ್ರಗೊಂಡ ಲಾಬಿ**

ಸಂಪುಟ ಪುನಾರಚನೆ ವಿಚಾರವಾಗಿ ಆಕಾಂಕ್ಷಿಗಳಲ್ಲಿ ಸಾಕಷ್ಟು ನಿರೀಕ್ಷೆಗಳು ಇವೆ. ಈಗಾಗಲೇ ಲಾಬಿ ತೀವ್ರಗೊಂಡಿದೆ. ನಾಯಕತ್ವ ಬಿಕ್ಕಟ್ಟಿನ ನಡುವೆ ಸಂಪುಟ ಪುನಾರಚನೆಗೆ ಅವಕಾಶ ನೀಡದೆ ಇದ್ದರೆ ಆಂತರಿಕವಾಗಿ ಮತ್ತಷ್ಟು ಗೊಂದಲ ಸೃಷ್ಟಿ ಆಗುವ ಸಾಧ್ಯತೆ ಇದೆ. ಹೀಗಾಗಿ ದೆಹಲಿಗೆ ಜನವರಿಯಲ್ಲಿ ಸಿಎಂ ಸಿದ್ದರಾಮಯ್ಯ ತೆರಳುವ ಸಂದರ್ಭದಲ್ಲಿ ಸಂಪುಟ ಪುನಾರಚನೆಗೆ ಹೈಕಮಾಂಡ್ ಮೇಲೆ ಒತ್ತಡ ಹಾಕುವ ಸಾಧ್ಯತೆ ಇದೆ.



ರಾಜ್ಯದಲ್ಲಿ ನಾಯಕತ್ವವನ್ನು ಬದಲಾಯಿಸಬೇಕೆ ಅಥವಾ ಬೇಡವೇ ಎಂಬುದನ್ನು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸುತ್ತದೆ. ನಾಯಕತ್ವದ ವಿಷಯದಲ್ಲಿ ಕಾಂಗ್ರೆಸ್ ಹೈಕಮಾಂಡ್ ಏನನ್ನಾದರೂ ನಿರ್ಧರಿಸಬೇಕಾದರೆ, ಫೆಬ್ರುವರಿಯಲ್ಲಿ ಬಜೆಟ್ ಸಿದ್ಧತೆಗೂ ಮೊದಲೇ ಅದನ್ನು ಮಾಡಬೇಕು.

–ಜಿ ಪರಮೇಶ್ವರ, ಗೃಹ ಸಚಿವ

**ಜನವರಿಯಲ್ಲಿ ಗ್ರೀನ್‌ಸಿಗ್ನಲ್..?**

ಇತ್ತೀಚೆಗೆ ಸಂಪುಟ ಪುನಾರಚನೆ ಪ್ರಸ್ತಾಪಕ್ಕೆ ಸಿದ್ಧತೆ ಮಾಡಿಕೊಂಡು ದೆಹಲಿಗೆ ಸಿದ್ದರಾಮಯ್ಯ ತೆರಳಿದ್ದರು. ಕೆ.ಜೆ.ಜಾರ್ಜ್ ಆದಿಯಾಗಿ ಹಿರಿಯ ಸಚಿವರ ದಂಡಿನೊಂದಿಗೆ ಹೊರಟಿದ್ದರು. ಎಐಸಿಸಿ ಕಾರ್ಯಕಾರಿಣಿ ಸಭೆ ಬಳಿಕ ರಾಹುಲ್ ಗಾಂಧಿ ಮುಂದೆ ಸಂಪುಟ ಪುನಾರಚನೆ ಪ್ರಸ್ತಾಪಕ್ಕೆ ಮುಂದಾಗಿದ್ದರು. ಆದರೆ ಕಾರ್ಯಕಾರಿಣಿಯಲ್ಲಿ ಅದಾಗಿರಲಿಲ್ಲ. ಜನವರಿಯಲ್ಲಿ ರಾಹುಲ್ ಗ್ರೀನ್ ಸಿಗ್ನಲ್ ನೀಡಲಿದ್ದಾರೆ ಎಂದು ಮೂಲ ತಿಳಿಸಿದೆ.

## ಎನ್‌ಡಿಎ ಜೊತೆ ಜೊತೆಗೇ ಜೆಡಿಎಸ್

• ಮಲ್ಲಮ್ಮ ನುಡಿ ವಾರ್ತೆ ಹಾಸನ



ಜೆಡಿಎಸ್ ಎನ್‌ಡಿಎ ಜತೆ ಇದೆ. ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆಯಲ್ಲಿ ಒಟ್ಟಾಗಿ ಹೋಗುತ್ತೇವೆ ಎಂದು ಜೆಡಿಎಸ್ ವರಿಷ್ಠ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ತಿಳಿಸಿದ್ದಾರೆ.

ಹೊಳೆನರಸೀಪುರ ತಾಲೂಕು ಹರದನಹಳ್ಳಿಯಲ್ಲಿ ಮನೆ ದೇವರು ದೇವೇಶ್ವರನಿಗೆ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿ, ನಮಗೆ ಶಕ್ತಿ ಇಲ್ಲ. ನಾವು ಎನ್‌ಡಿಎ ಜತೆ ಹೋಗಿದ್ದೀವಿ. ನೀವು ಏಕೆ ಸ್ಟಾಲಿನ್ ಮನೆ ಬಾಗಿಲಿಗೆ ಹೋಗ್ತಿರಾ, ಎಂದು ಲೇವಡಿ ಮಾಡಿದ್ದಾರೆ. ಜಿಲ್ಲೆಯಲ್ಲಿ ರೇವಣ್ಣನವರ ಶಕ್ತಿ ಕುಂದಿಸಲು ಪಣ ತೊಟ್ಟಿರುವ ಹಾಗೆ ಕಾಣಿಸುತ್ತಿದೆ. ನಾನು ಈಗಾಗಲೇ ರೇವಣ್ಣಗೆ ಹೇಳಿದ್ದೇನೆ. ಈ ಜಿಲ್ಲೆಯಲ್ಲಿ ಯಾರು ಏನೇ ಸಭೆ ಮಾಡಿದರೂ ಅದಕ್ಕಿಂತ ಮೇಲ್ಮಟ್ಟದ ಸಭೆಯನ್ನು ಮಾಡಿ ಸಂದೇಶ ರವಾನಿಸಬೇಕು ಎಂದು ತಿಳಿಸಿದ್ದೇನೆ ಎಂದಿದ್ದಾರೆ.

## ವೇಣುಗೋಪಾಲ್ ಸೂಪರ್ ಸಿಎಂ



**ಬೆಂಗಳೂರು:** ವೇಣುಗೋಪಾಲ್ ಕರ್ನಾಟಕದ ಸೂಪರ್ ಸಿಎಂ. ಅವರ ಅಣತಿಯಂತೆ ಈ ಸರ್ಕಾರ ನಡೀತಾ ಇದೆ ಎಂದು ವಿಧಾನಪರಿಷತ್ ವಿಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ಆರೋಪಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿ, ವೇಣುಗೋಪಾಲ್ ಅವರು ಕಣ್ಣುಬಿಟ್ಟರೆ ಸಾಕು; ಅದರ ಸೂಕ್ಷ್ಮತೆಯನ್ನು ಅರ್ಥ ಮಾಡಿಕೊಂಡು ಈ ಸರ್ಕಾರ ಕೆಲಸ ಮಾಡ್ತಾ ಇದೆ. ಹಾಗಾಗಿ ಇದರ ಸೂಪರ್ ಸಿಎಂ ಕರ್ನಾಟಕ ರಾಜ್ಯದ ಸೂಪರ್ ಸಿಎಂ ಇರುವುದು ದೆಹಲಿಯಲ್ಲ. ಇವರು ಅವರ ಅಣತಿಯಂತೆ ಕೆಲಸ ಮಾಡುತ್ತಾರೆ. ಈ ಒಂದು ಪ್ರಜಾಪ್ರಭುತ್ವ ಈ ರೀತಿಯ ಒಂದು ಎಲೆಕ್ಟೆಡ್ ಗವರ್ನಮೆಂಟ್ ಕರ್ನಾಟಕ ರಾಜ್ಯದಲ್ಲಿ ಏನಿದೆ ಇರೋದು ಒಂದೇ ಬೇಗ ಹೊರಟುಹೋಗೋದು ಒಂದೇ ಅಂತಹೇಳಿ ಈ ಸಂದರ್ಭದಲ್ಲಿ ಹೇಳೋದಕ್ಕೆ ಬಯಸುತ್ತೇನೆ ಎಂದು ತಿಳಿಸಿದ್ದಾರೆ.

## ಶಿಶು ಅಭಿವೃದ್ಧಿ ಕಚೇರಿ ಬಳಿ ಕ್ರಾಂತಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ಶಿಶುಅಭಿವೃದ್ಧಿ ಯೋಜನೆ ಕಚೇರಿಯಲ್ಲಿ ಮೊಟ್ಟೆ, ಹಾಲಿನ ಪುಡಿ ಹಾಗೂ ಆಹಾರ ಸರಬರಾಜಿನಲ್ಲಿ ಗಂಭೀರ ಅವ್ಯವಹಾರಗಳು ನಡೆದಿರುವ ಆರೋಪದ ಹಿನ್ನೆಲೆಯಲ್ಲಿ ತನಿಖೆ ನಡೆಸಿ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತುಗೊಳಿಸಬೇಕೆಂದು ಆಗ್ರಹಿಸಿ ಯುವ ಕ್ರಾಂತಿ ಸಂಘಟನೆಯಿಂದ ಶಿಶು ಅಭಿವೃದ್ಧಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಯಿತು. ಯುವ ಕ್ರಾಂತಿ ಸಂಘಟನೆ ಜಿಲ್ಲಾಧ್ಯಕ್ಷ ಸಂಗಮೇಶ ಭೂರೆ ಅವರ ನೇತೃತ್ವದಲ್ಲಿ ನಡೆದ ಈ ಧರಣಿಯಲ್ಲಿ, ಶಿಶುಗಳಿಗೆ ಪೂರೈಸಬೇಕಾದ ಪೌಷ್ಟಿಕ ಆಹಾರದಲ್ಲಿ ಅಕ್ರಮಗಳು ನಡೆಯುತ್ತಿರುವುದು ಖಂಡನೀಯ. ಇದು ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಡಿ.ಸಿಗೆ ಮನವಿ ಪತ್ರ ತಾಲೂಕಿನ ತಹಶೀಲ್ದಾರ್ ಅವರಿಗೆ ಸಲ್ಲಿಸಿದ್ದಾರೆ.

ಪ್ರತಿಭಟನೆಯ ವೇಳೆ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಪಂದಿಸಿ ನ್ಯಾಯಯುತ ಕ್ರಮ ಕೈಗೊಳ್ಳದಿದ್ದಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಾಗುದು.

–ಸಂಗಮೇಶ್ ಭೂರೆ, ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷ, ಬೀದರ್

ತಾಲೂಕು ಅಧ್ಯಕ್ಷ ಬಲವಂತ ಪರಣಸ್ಣೆ, , ವಿನೋದ ಕಾರಮುಂಗೆ, ಕೈಲಾಸ ಪಾಟೀಲ, ಪಪ್ಪುರಾಜ ಚತುರೆ, ಮಹೇಶ ಕಟ್ಟಿಮನಿ, ಸುಂದರ ಮೇತ್ರೆ, ಬಿಬಿಸೆನ ಬಿರಾದರ, ಸಚಿನ್ ಶಿಂಧೆ, ಆನಂದ ತಳವಾಡೆ ಸೇರಿ ಅನೇಕ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.





ಬೆಂಗಳೂರು: ಕಾಂಗ್ರೆಸ್ ಪಕ್ಷದ ವರಿಷ್ಠ ಡಾ. ಮಲ್ಲಿಕಾರ್ಜುನ ಖರ್ಗೆ ರವರನ್ನು ಹುಮನಾಬಾದ್‌ನ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ಅವರು ಭೇಟಿ ಮಾಡಿ, ರಾಜಕೀಯ ವಿದ್ಯಮಾನಗಳ ಕುರಿತು ಮಂಗಳವಾರ ಚರ್ಚೆ ನಡೆಸಿದ್ದಾರೆ. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ, ಬಸವಕಲ್ಯಾಣ ಕಾಂಗ್ರೆಸ್ ಮುಖಂಡ ಧನರಾಜ ತಾಳಂಪಳ್ಳಿ ಸೇರಿದಂತೆ ಇತರರಿದ್ದರು.

## ಶಿಷ್ಟಚಾರ ಉಲ್ಲಂಘನೆ, ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಹುಮನಾಬಾದ ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳಿಗೆ ಕಾಂಗ್ರೆಸ್ ಪಕ್ಷದವರು ಸಹಿಸುತ್ತಿಲ್ಲ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಪಟ್ಟಣದಲ್ಲಿ ವಾಣಿಜ್ಯ ಸಂಕೀರ್ಣ ಗುದ್ದಲಿ ಪೂಜೆ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಅಡ್ಡಿ ಪಡಿಸಿ ಧಿಕ್ಕಾರ ಹಾಕಿ ಪ್ರತಿಭಟನೆ ಮಾಡಿದ್ದಾರೆ. ಈ ಕುರಿತು ಮಾತನಾಡಿದ ಶಾಸಕ, ಇವರಿಗೆ ಅಭಿವೃದ್ಧಿ ಬೇಕಾಗಿಲ್ಲ, ಪ್ರತಿಭಟನೆಯೇ ಅವರ ಕೆಲಸ ಎಂದಿದ್ದಾರೆ. ಕಾಮಗಾರಿ ಸ್ಥಳದಿಂದ ಶಾಸಕ ಡಾ. ಸಿದ್ದು ಪಾಟೀಲ್ ಹೋಗುವಾಗ ಕಾಂಗ್ರೆಸ್ ಕಾರ್ಯಕರ್ತರು ಧಿಕ್ಕಾರದ ಕೂಗುಗಳು ಕೂಗುತ್ತ ಅವರ ಕಾರು ಹೋಗದಂತೆ ಅಡ್ಡಿ ಪಡಿಸಲಾರಂಭಿಸಿದರು. ಪೊಲೀಸರು ಮಧ್ಯೆ ಪ್ರವೇಶಿಸಿ ಕಾರು ತೆರಳುವಂತೆ ಅನು ಮಾಡಿ ಕೊಡುತ್ತಿದ್ದಾಗ ಕಾಂಗ್ರೆಸ್ ಕಾರ್ಯಕರ್ತರು ಶಾಸಕರಿಗೆ ಧಿಕ್ಕಾರ ಕೂಗಿ ಅಡ್ಡಿ ಪಡಿಸಿದ್ದು, ಇದಕ್ಕ ಬಿಜೆಪಿ ಕಾರ್ಯಕರ್ತರ ಮಧ್ಯೆ ಮಾತಿನ ಚಕಮಕಿ ನಡೆದವು.



ಪುರಸಭೆಯ ವಾಣಿಜ್ಯ ಸಂಕೀರ್ಣದ ಗುದ್ದಲಿ ಪೂಜೆ ಶಿಷ್ಟಚಾರ ಉಲ್ಲಂಘನೆ ಮಾಡಿದಕ್ಕೆ ತೀವ್ರವಾಗಿ ಖಂಡಿಸುತ್ತೇವೆ. ವಿಧಾನ ಪರಿಷತ್ ಸದಸ್ಯರಿಗೂ, ಲೋಕಸಭಾ ಸದಸ್ಯರಿಗೂ ಹಾಗೂ ಪುರಸಭೆ ಅಧಿಕಾರಿಗಳಿಗೆ ಮಾಹಿತಿ ನೀಡದೆ, ಶಿಷ್ಟಚಾರ ಉಲ್ಲಂಘನೆ ಮಾಡಿದ್ದಾರೆ.

–ಗುಂಡು ರೆಡ್ಡಿ, ಯುವ ಕಾಂಗ್ರೆಸ್ ಅಧ್ಯಕ್ಷ



ಭೂಮಿ ಪೂಜೆ ಬೇರೆ, ವೀಕ್ಷಣೆ ಬೇರೆ, ಗುದ್ದಲಿಪೂಜೆ ಶಿಷ್ಟಚಾರದಂತೆ ಮಾಡಬೇಕಾಗುತ್ತದೆ. ಪುರಸಭೆ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ಮಾಜಿ ಸಚಿವರಾದ ರಾಜಶೇಖರ ಪಾಟೀಲ ಅವರು ನಗರೋಥಾನ ಅನುದಾನದಲ್ಲಿ 5 ಕೋಟಿ ರೂ. ಅನುದಾನ ಮಂಜೂರು ಮಾಡಿದ್ದಾರೆ.

–ದಿಲೀಪಕುಮಾರ್ ಬಗ್ದಲಕರ್, ಪುರಸಭೆ ಮಾಜಿ ಅಧ್ಯಕ್ಷ

**ರಾಜ್ಯ ರಾಜಕೀಯದಲ್ಲಿ ಕಾಂಗ್ರೆಸ್ ಕುರ್ಚಿ ಕಾದಾಟಕ್ಕೆ ಕೊನೆ ಎಂದು ?: ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ**

# ಅಕ್ಕ ಪಡೆ ವಾಹನಕ್ಕೆ ಸಚಿವ ಈಶ್ವರ ಖಂಡ್ರೆ ಚಾಲನೆ

## ಮಹಿಳೆಯರು ಸುರಕ್ಷಿತವಾಗಿದ್ದರೆ ಸಮಾಜ ಆರೋಗ್ಯಕರ:– ಈಶ್ವರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಹಿಳೆಯರು ಸುರಕ್ಷಿತವಾಗಿದ್ದರೆ ಸಮಾಜ ಆರೋಗ್ಯಕರ ಮಹಿಳೆಯರ ಹಾಗೂ ಮಕ್ಕಳ ರಕ್ಷಣೆಗಾಗಿ ಅಕ್ಕ ಪಡೆ ರಚಿಸಲಾಗಿದೆ. ಮೊದಲ ಕವಿತ್ರಿ ಅಕ್ಕ ಮಹಾದೇವಿಯವರ ಹೆಸರನ್ನು ಇದಕ್ಕೆ ಇಡಲಾಗಿದ್ದು, ಅಕ್ಕ ಎಂದರೆ ಶಕ್ತಿ, ಅಕ್ಕ ಎಂದರೆ ಆತ್ಮಸ್ತರ್ಯ ಎಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಅವರು ಇಂದು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಅಕ್ಕಪಡೆ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಮಾಜದಲ್ಲಿ ಸುರಕ್ಷತೆ ಮತ್ತು ಜಾಗೃತಿಯ ಕಿರು ಸೇತುವೆಯಾಗಿ ಅಕ್ಕ ಪಡೆ ಕಾರ್ಯನಿರ್ವಹಿಸುತ್ತಿದೆ. ಮಹಿಳಾ ಸಬಲೀಕರಣದ ದಿಕ್ಕಿನಲ್ಲಿ ಇದು ಮಹತ್ವದ ಹೆಜ್ಜೆ. ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಆರಂಭಿಸಿರುವ ಬೀದರ್ ಜಿಲ್ಲಾ ಪೊಲೀಸ್ ಅಕ್ಕ ಪಡೆ ಈಗಾಗಲೇ ರಾಜ್ಯಕ್ಕೆ ಮಾದರಿಯಾಗಿ ಗುರುತಿಸಿಕೊಂಡಿದೆ ಎಂದು ತಿಳಿಸಿದರು,

ಮಹಿಳೆಯರು ಸುರಕ್ಷಿತವಾಗಿದ್ದರೆ ಸಮಾಜ ಆರೋಗ್ಯಕರವಾಗಿರುತ್ತದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಮಹಿಳೆಯರ ರಕ್ಷಣೆ ಕಟಬದ್ಧವಾಗಿದೆ. ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದವರಿಗೆ ಶೀಘ್ರದಲ್ಲಿ ಕಠಿಣ ಶಿಕ್ಷೆಯಾಗುವಂತೆ ಪೊಲೀಸ್ ಇಲಾಖೆ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದ್ದೇನೆ. ಮಹಿಳೆಯರು ಸಂಕಷ್ಟಕ್ಕೆ ಸಿಲುಕಿದ ಸಂದರ್ಭದಲ್ಲಿ ತುರ್ತು ಸಹಾಯವಾಣಿ ಸಂಖ್ಯೆಗಳಾದ 181, 112 ಅಥವಾ 1098 ಗೆ ಕರೆ ಮಾಡಿ ಸಹಾಯಪಡೆಯಬಹುದು. ಪ್ರಸ್ತಾವನೆ ಸಲ್ಲಿಸಿದರೆ ತಾಲ್ಲೂಕುಗಳಿಗೂ ವಾಹನ ನೀಡಲು ಕ್ರಮ ವಹಿಸಲಾಗುವುದು ಎಂದರು. ಅಕ್ಕ ಪಡೆಯ ರಾಜ್ಯ ಸಲಹೆಗಾರರಾದ ಶೈನಿ ಪ್ರದೀಪ್ ಗುಂಟಿ ಮಾತನಾಡಿ, ಮಹಿಳೆಯರು ಸುರಕ್ಷೆಯಾಗಿದ್ದರೆ ಜಿಲ್ಲೆ ಸುರಕ್ಷತೆ–ಯಾಗಿರುತ್ತದೆ ಎಂಬ ಆಲೋಚನೆಯಿಂದ ಅಕ್ಕ ಪಡೆ ರಚಿಸಿ ಅದಕ್ಕೆ ವ್ಯವಸ್ಥಿತವಾಗಿ ಜಾರಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಾಡಿದ್ದಾರೆ. ಅಕ್ಕ ಪಡೆಯಿಂದ ಇಲ್ಲಿಯವರೆಗೆ ಎರಡು ಬಾಲ್ಯವಿವಾಹ ತಡೆಗಟ್ಟಲಾಗಿದೆ, ಅಪಘಾತ ಆದಾಗ ಗಾಯಾಳುಗಳಿಗೆ ಆಸ್ಪತ್ರೆಗೆ ಸೇರಿಸಲಾಗಿದೆ, ಹೆಣ್ಣುಮಕ್ಕಳಿಗೆ ಸಾರ್ವಜನಿಕ ಸ್ಥಳದಲ್ಲಿ ಯಾರಾದ್ರೂ ತೊಂದರೆ ಕೊಟ್ಟರೆ ಅವರನ್ನು ರಕ್ಷಿಸುವ





ಕೆಲಸ ಮಾಡಲಾಗಿದೆ, ಮುಂದೆಯೂ ಮಾಡಲಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಾತನಾಡಿ ಅಕ್ಕಪಡೆ ಮಹಿಳೆಯರಿಂದ ಮಹಿಳೆಯ ರಕ್ಷಣೆಗಾಗಿ ಕಟ್ಟಿರುವ ಪಡೆಯಾಗಿದೆ. ಮಹಿಳೆಯರಿಗೆ ಹಾಗೂ ಮಕ್ಕಳಿಗೆ ತ್ವರಿತ ಸಹಾಯ, ಧೈರ್ಯ ಮತ್ತು ವಿಶ್ವಾಸ ಮೂಡಿಸುವ ಉದ್ದೇಶದಿಂದ ಜಾರಿ ಮಾಡಲಾಗಿದೆ. ಅಕ್ಕ ಪಡೆಯನ್ನು ಈಗ ಡಿಜಿಟಲ್ ತಂತ್ರಜ್ಞಾನ ಮೂಲಕ ಇನ್ನಷ್ಟು ಬಲ ಪಡಿಸಲಾಗಿದೆ. ಈಗ ಅಕ್ಕ ಪಡೆ ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟಕ್ಕೆ ವಿಸ್ತರಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರಿ, ಡಿವೈಎಸ್ಪಿ ಎನ್.ಡಿ ಸನ್ನಿದಿ, ಸಿಪಿಐಗಳಾದ ವಿಜಯಕುಮಾರ್ ಬಾವಗೆ, ಪಾಲಾಕ್ಷಯ್ಯ ಹಿರೇಮಠ್, ಕೆ.ಎಂ ಬಿರಾದಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾ ಧಿಕಾರಿ ರೂಪಾ, ಮಕ್ಕಳ ಅಭಿವೃದ್ಧಿ ಅಧಿಕಾರಿ ಶಾರದಾ ಕಲ್ಮರ್ಕ, ಕರ್ನಾಟಕ ಅಲ್ಪಸಂಖ್ಯಾತರ ಕಮಿಟಿಯ ಸದಸ್ಯ ನಂದೀಪ್ ಕೌರ್, ಗುರುನಾನಕ್ ಶಿಕ್ಷಣ ಸಂಸ್ಥೆ ಮುಖ್ಯಸ್ಥೆ ರೇಷ್ಮಾ ಕೌರ್, ವೇಟನರಿ ಕಾಲೇಜಿನ ಡಿನ್ ಡಾ.ತಾಂದಳೆ, ಶಾಹಿನ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಅಬ್ದುಲ್ ಖದಿರ್, ವಿಸ್ಡಮ್ ಕಾಲೇಜಿನ ಮುಖ್ಯಸ್ಥ ಸಲಾಹುದ್ದಿನ್, ಅಕ್ಕಮಹಾದೇವಿ ಮಹಿಳಾ ಕಾಲೇಜಿನ ಧನಲಕ್ಷ್ಮೀ ಪಾಟೀಲ್, ಶಾಹಿನ್ ಪದವಿ ಕಾಲೇಜಿನ ಪ್ರಾಂಶುಪಾಲ ಅಫ್ರಾ ಬೇಗಮ್, ಮನ್ನಳ್ಳಿ ಪೊಲೀಸ್ ಠಾಣೆಯ ಪಿಎಸ್ಐ ನಂದಿನಿ, ಸೇರಿದಂತೆ ವಿವಿಧ ಶಾಲಾ–ಕಾಲೇಜಿನ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಮಹಿಳೆಯರಿಗೆ ಹಾಗೂ ಮಕ್ಕಳಿಗೆ ತ್ವರಿತ ಸಹಾಯ, ಧೈರ್ಯ ಮತ್ತು ವಿಶ್ವಾಸ ಮೂಡಿಸುವ ಉದ್ದೇಶದಿಂದ ಜಾರಿ ಅಕ್ಕ ಪಡೆಯನ್ನು ಈಗ ಡಿಜಿಟಲ್ ತಂತ್ರಜ್ಞಾನ ಮೂಲಕ ಇನ್ನಷ್ಟು ಬಲ ಪಡಿಸಲಾಗಿದೆ. ಈಗ ಅಕ್ಕ ಪಡೆ ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟಕ್ಕೆ ವಿಸ್ತರಿಸಲಾಗಿದೆ,**

**ಪ್ರದೀಪ್ ಗುಂಟಿ**
**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ**

**ಅಕ್ಕ ಎಂದರೆ ಶಕ್ತಿ, ಅಕ್ಕ ಎಂದರೆ ಆತ್ಮಸ್ತರ್ಯ, ಮಹಿಳೆಯರು ಸುರಕ್ಷಿತವಾಗಿದ್ದರೆ ಸಮಾಜ ಆರೋಗ್ಯಕರ, ಸರ್ಕಾರ ಮಹಿಳೆಯರ ರಕ್ಷಣೆ ಕಟಬದ್ಧವಾಗಿದೆ. ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದವರಿಗೆ ಶೀಘ್ರದಲ್ಲಿ ಕಠಿಣ ಶಿಕ್ಷೆಯಾಗುವಂತೆ ಪೊಲೀಸ್ ಇಲಾಖೆ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದ್ದೇನೆ,**

**ಈಶ್ವರ ಖಂಡ್ರೆ**
**ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಮತ್ತು ಬೀದರ**
**ಜಿಲ್ಲಾ ಉಸ್ತುವಾರಿ ಸಚಿವರು**

**ಮಹಿಳೆಯರು ಸುರಕ್ಷೆಯಾಗಿದ್ದರೆ ಜಿಲ್ಲೆ ಸುರಕ್ಷತೆಯಾಗಿರುತ್ತದೆ ,ಅಕ್ಕ ಪಡೆಯಿಂದ ಇಲ್ಲಿಯವರೆಗೆ ಎರಡು ಬಾಲ್ಯವಿವಾಹ ತಡೆಗಟ್ಟಿದೆ ಹೆಣ್ಣುಮಕ್ಕಳಿಗೆ ಸಾರ್ವಜನಿಕ ಸ್ಥಳದಲ್ಲಿ ಯಾರಾದ್ರೂ ತೊಂದರೆ ಕೊಟ್ಟರೆ ನಮ್ಮ ಅಕ್ಕಪಡೆ ರಕ್ಷಿಸಿದೆ, ಅಪಘಾತವಾದಾಗ ಗಾಯಾಳುಗಳಿಗೆ ಆಸ್ಪತ್ರೆಗೆ ಸೇರಿಸಲಾಗಿದೆ,**

**ಶೈನಿ ಗುಂಟಿ , ಅಕ್ಕ ಪಡೆಯ ರಾಜ್ಯ ಸಲಹೆಗಾರರಾದ**

## ರೈತರು ಒಗ್ಗೂಡಿ ಹೋರಡುವದು ಅನಿವಾರ್ಯ:ಶ್ರೀಮಂತ ಬಿರಾದಾರ



- ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:

ರೈತರು ಒಗ್ಗೂಡಿ ಹೋರಡುವದು ಅನಿವಾರ್ಯ,ರೈತರು ತಮ್ಮ ಹಕ್ಕಿಗಾಗಿ ಸಂಘಟೀತರಾದರೆ ಮಾತ್ರ ರೈತರ ಸಮಸ್ಯೆಗಳು ಬಗೆ ಹರಿಸಲು ಮಾತ್ರ ಸಾಧ್ಯ ಎಂದು ಕನಾಟಕ ರಾಜ್ಯ ರೈತ ಹಾಗೂ ಹಸಿರು ಸೇನಾ ಜಿಲ್ಲಾಕಾರ್ಯಧ್ಯಕ್ಷ ಶ್ರೀಮಂತ ಬಿರಾದಾರ ರೈತರಿಗೆ ಸಲಹೆ ನೀಡಿದರು. ಪಟ್ಟಣದ ಡಾ.ಚನ್ನಬಸವ ಪಟ್ಟದೇವರ ಗ್ರಾಂಥಾಲಯದಲ್ಲಿ ಕಮಲನಗರ ಗ್ರಾಮ ಘಟಕ ಪದಾಧಿಕಾರಿಗಳ ಆಯ್ಕೆ ಮಾಡಿ ಅವರು ಮಾತನಾಡಿದರು. ಇಂದು ಸರಕಾರದ ಹಲವು ಯೋಜನೆಗಳು, ಕಟ್ಟ ಕಡೆ ರೈತನ ವರೆಗೆ ಹೋಗೂತ್ತಿಲ್ಲಾ,

ಹೀಗಾಗಿ ಪ್ರತಿಯೊಂದು ಗ್ರಾಮದಲ್ಲಿ ಯುವ ರೈತರು ಮುಂದೆ ಬಂದು ರೈತರ ಪರವಾಗಿ ಧ್ವನಿ ಎತ್ತಬೇಕು ಎಂದು ಹೇಳಿದರು. ಕಮಲನಗರ ತಾಲೂಕು ರೈತ ಸಂಘದ ಅಧ್ಯಕ್ಷ ಪ್ರವೀಣ ಕುಲಕರ್ಣಿ ಅವರು ಮಾತನಾಡಿ, ಕಮಲನಗರ ಗ್ರಾಮದ ಪದಾಧಿಕಾರಿಗಳು ಸಂಘಟರಾಗಿ ಅನ್ಯಾಯ ವಿರುದ್ದ ಹೋರಾಟ ಮಾಡಲು ತನ ಮನ ಮತ್ತು ಧನದಿಂದ ಸಿದ್ದರಾಗಬೇಕು ಎಂದು ತಿಳಿಸಿದರು.ಕಮಲನಗರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹೆಸರು ಸೇನೆ ಪುರ್ನರಚನೆ ಗ್ರಾಮ ಶಾಖಾ ಗ್ರಾಮ ಘಟಕ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು. ಕಮಲನಗರ ಗ್ರಾಮ ಘಟಕದ ಅಧ್ಯಕ್ಷರಾಗಿ ರಾಮೇಶ್ವರ ಶಿವಣಕರ,ಉಪಾಧ್ಯಕ್ಷರಾಗಿ ರವೀಂದ್ರ ಕಣಜೆ , ಮನೋಜ ಪೊಲೀಸ್ ಪಾಟೀಲ ಕಾರ್ಯದರ್ಶಿ, ನಾಗೇಶ ರಾಂಪೂರೆ ಸಂಘಟನಾ ಕಾರ್ಯದರ್ಶಿ, ನರಸಿಂಗ ತೋರಣೆವಾಲೆ ಖಜಾಂಚಿ ಮತ್ತು 15 ರೈತರಿಗೆ ಸದಸ್ಯರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಔರಾದ ತಾಲೂಕು ಅಧ್ಯಕ್ಷ ಪ್ರಕಾಶ ಬಾವಗೆ, ವೈಜನಾಥ ವಡ್ಡೆ, ಶ್ರೀರಂಗ ಪರಿಹಾರ, ವಿಠಲರಾವ ಪಾಟೀಲ್, ಎಸ್.ಎನ್. ಶಿವಣಕರ, ಧನರಾಜ ಭವರಾ, ಭೀಮಣ್ಣ ಕಣಜೆ ಸೇರಿದಂತೆ ವಿವಿಧ ಗ್ರಾಮದ ರೈತರು ಉಪಸ್ಥಿತರಿದ್ದರು.

## ತುಂಗಭದ್ರ ನದಿ ಈಗ ಚರಂಡಿ ಆಗುತ್ತಿದೆ : ರಹಮತ್ ತರೀಕೆರೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜನರೇ ಇಲ್ಲದ ದೇವರನ್ನು ತೆಗೆದುಕೊಂಡು ಏನ ಮಾಡಬೇಕು, ದೇವರು ಸಮೃದ್ಧ ಆಗುವ ಸಮಯದಲ್ಲಿ ಭಕ್ತರು ಸ್ಮಶಾನದ ಕಡೆಗೆ ಸಾಗಿದ್ದಾರೆ, ಇಲ್ಲಿನ ಕಾರ್ಖಾನೆ ಕೊಳವೆಗಳು ಫಿರಂಗಿಗಳಾಗಿವೆ ಎಂದು ಹಿರಿಯ ಚಿಂತಕ ರಹಮತ್ ತರೀಕೆರೆ ಅಭಿಪ್ರಾಯ ಪಟ್ಟರು. ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕಾಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ ಅನಿರ್ಧಿಷ್ಟ ಧರಣಿಯ 61ನೇ ದಿನದ ಹೋರಾಟ ಬೆಂಬಲಿಸಿ ಮಾತನಾಡಿದರು. ತುಂಗಭದ್ರ ನದಿ ಈಗ ಚರಂಡಿಯಾಗಿ ಪರಿವರ್ತನೆ ಆಗುತ್ತಿದೆ, ಇಲ್ಲಿಂದ ಜಿಂದಾಲ್ ವರೆಗೆ 70 ಕಿಮೀ ಅಪಾಯಕಾರಿ ಮಾಲಿನ್ಯದ ಕಾರಿಡಾರ್ ಆಗಿದೆ, ಅದು ಜಗತ್ತಿನ ಅತ್ಯಂತ ಕೆಟ್ಟ ಸ್ಥಳವಾಗಿ ಪರಿವರ್ತನೆ ಆಗುತ್ತಿದೆ. ಕಂಪನಿ ಮತ್ತು ಅವರ ಪರವಾಗಿರುವ ಜನ ಶತ್ರುಗಳನ್ನು ನಮ್ಮ ನಡುವೆ ಹುಟ್ಟುಹಾಕಿರುವದು ಬಹಳ ದೊಡ್ಡ ನೋವಿನ ಸಂಗತಿ.

ಸರಕಾರಗಳೇ ಜನರ ಮೇಲೆ ಯುದ್ಧ ಸಾರಿದ ಹಾಗಿದೆ ಇಲ್ಲಿನ ಪರಿಸ್ಥಿತಿ. ಆದ್ದರಿಂದ ಇದು ಎಲ್ಲಾ ಜನರ ಹೋರಾಟ ಆಗಬೇಕಿದೆ, ಅದರ ವಿರುದ್ಧ ಹೋರಾಡಬೇಕಿದೆ. ಕೊಪ್ಪಳದ ಗವಿಮಠದ ಜಾತ್ರೆಯೂ ಸಹ ಜನರ ಪರವಾಗಿ ನಿಲ್ಲಬೇಕು, ಇಲ್ಲಿನ ದೂಳು, ಹೊಗೆ, ವಿಷಾನಿಲದ ವಿರುದ್ಧದ ಹೋರಾಟವಾಗಬೇಕಿದೆ. ತಮಗೆ ಕೊಪ್ಪಳದ ಕಾರ್ಖಾನೆ ಕೊಳವೆಗಳು ಇಲ್ಲಿನ ಜನರನ್ನು ಕೊಲ್ಲುವ ಫಿರಂಗಿಗಳ ರೀತಿಯಲ್ಲಿ ಕಾಣುತ್ತಿವೆ, ಇದು ಬದುಕಿನ ಹಕ್ಕಿನ ಹೋರಾಟವಾಗಿದೆ ಎಂದರು. ಇಲಾಖೆಗಳು ಇದನ್ನು ಬಫರ್ ಜೋನ್ ಎಂದರೂ ಸಹ ಅಲ್ಲಿ ಗಿಡ ಬೆಳೆಯಲ್ಲ. ಅನೇಕ ಅಧಿಕಾರಿಗಳು ಕಾರ್ಖಾನೆ ಪರವಾಗಿ ಕೆಲಸ ಮಾಡುತ್ತಿದ್ದಾರೆ, ಇಲ್ಲಿ ಕ್ಯಾನ್ಸರ್ ನಿಂದ ಈ ವರ್ಷ ನಾಲ್ಕು ಜನ ಸತ್ತಿದ್ದಾರೆ ಆದರೆ ಇಲ್ಲಿ ಅಧ್ಯಯನ ಮಾಡುವ ಸಂಸ್ಥೆಗಳು ಮತ್ತು ಸಮಿತಿಗಳು ಕೇವಲ ಕಾರ್ಖಾನೆ ಪರವಾಗಿ ಸೂಟ್ ಕೇಸಿಗೆ ಕೆಲಸ ಮಾಡುತ್ತಿರುವದು ಸ್ಪಷ್ಟ. ನದಿ ಸಂರಕ್ಷಣೆ ಕೇವಲ ನಾಟಕ, ಇಲ್ಲಿ ಎಲ್ಲವೂ ಹಾಳಾಗಿದೆ ಎಂದರು.




ಧರಣಿಯಲ್ಲಿ ಪುಷ್ಪಲತಾ ಏಳುಭಾವಿ, ಬಿ.ಜಿ.ಕರಿಗಾರ, ಸಾವಿತ್ರಿ ಮುಜುಮದಾರ್, ಸಿ.ವಿ.ಜಡಿಯವರ, ಎಸ್. ಬಿ. ರಾಜೂರು, ಗಂಗಾಧರ ಖಾನಾಪೂರ, ರವಿ ಕಾಂತನವರ, ಕವಿ ಮಹೇಶ ಮನ್ನಾಪುರ, ಎಂ. ಡಿ. ಪಾಟೀಲ್, ಶಂಭುಲಿಂಗಪ್ಪ ಆರ್. ಹರಗೇರಿ, ಮಂಜುನಾಥ್ ಆಟೋ, ಮಂಜುನಾಥ್ ಕೊಂಡನಹಳ್ಳಿ, ಶಾಂತಯ್ಯ ಅಂಗಡಿ, ಯಲ್ಲಪ್ಪ ಕೋಳೂರು, ಎಸ್.ಮಹಾದೇವಪ್ಪ ಮಾವಿನಮಡು, ಈರಯ್ಯಸ್ವಾಮಿ ಸಾಲಿಮಠ, ಗೀತಾ ಭೋವಿ, ಸದಾಶಿವ ಪಾಟೀಲ್, ರಮೇಶ ಡಂಬ್ರಳ್ಳಿ ಕುಣಿಕೇರಿ, ರಮೇಶ ಕೋಳೂರು,

ಶಿವಪ್ಪ ಜಲ್ಲಿ ಬಸವರಾಜ್ ನರೇಗಲ್, ಪಾಮಣ್ಣ ಕೆಮಲ್ಲಾಪುರ, ಮಖ್ಬುಲ್ ರಾಯಚೂರು ಪಾಲ್ಗೊಂಡರು. ಇದಕ್ಕೂ ಮೊದಲು ಬೆಳಿಗ್ಗೆ ಖ್ಯಾತ ವಿಮರ್ಶಕ, ಸಂಶೋಧಕ ರಹಮತ್ ತರೀಕೆರೆ ಅವರು ಜಂಟಿ ಕ್ರಿಯಾ ವೇದಿಕೆಯ ಪ್ರಧಾನ ಸಂಚಾಲಕರು ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ಪುಸ್ತಕ ಪ್ರಕಾಶ ಡಿ.ಎಂ.ಬಡಿಗೇರ, ಮಾಲಾ ಬಡಿಗೇರ ಅವರು ಕಾರ್ಖಾನೆಗಳಿಂದ ಬಾಧಿತವಾದ ಗಿಣಿಗೇರಿ, ಅಲ್ಲಾನಗರ, ಹಿರೇಬಗನಾಳ, ಚಿಕ್ಕಬಗನಾಳ, ಕುಣಿಕೇರಿ, ಕುಣಿಕೇರಿ ತಾಂಡಾ, ಹಾಲವರ್ತಿ ಗ್ರಾಮಗಳಿಗೆ ವಾಸ್ತವ ಸ್ಥಿತಿ ವೀಕ್ಷಿಸಿದರು. ಹಿರೇಬಗನಾಳ ಗ್ರಾಮದ ಕರಿಯಮ್ಮ ದೇವಸ್ಥಾನದಲ್ಲಿ ಸೇರಿದ ರೈತರನ್ನು ರಹಮತ್ ತರೀಕೆರೆ ಇವರ ತಂಡದಲ್ಲಿದ್ದವರು ಮಾತನಾಡಿಸಿ ಮಾಹಿತಿ ಪಡೆದರು.

## ಜನರ ಸೇವೆ ಮಾಡುವುದು ನನ್ನ ಕರ್ತವ್ಯ: ಶಾಸಕ ಡಾ. ಬೆಲ್ದಾಳೆ

- ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:

ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರ ಅಧ್ಯಕ್ಷತೆಯಲ್ಲಿ ಗ್ರಾಮ ಸಭೆ ಜರುಗಿ–ತ್ತು. ಗ್ರಾಮದ ಮೂಲಸೌಕರ್ಯ, ಕುಡಿಯುವ ನೀರು, ರಸ್ತೆ, ವಿದ್ಯುತ್, ಸ್ವಚ್ಛತೆ, ಆರೋಗ್ಯ ಹಾಗೂ ಶಿಕ್ಷಣ ಸಂಬಂಧಿತ ಸಮಸ್ಯೆಗಳ ಕುರಿತು ಚರ್ಚಿಸಲಾಯಿತು. ಸಾರ್ವಜನಿಕರಿಂದ ಬಂದ ಅಹವಾಲುಗಳನ್ನು ಆಲಿಸಿ, ಸಣ್ಣಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆಹರಿಸಲಾಗಿದ್ದು, ಉಳಿದ ಮನವಿಗಳಿಗೆ ಶೀಘ್ರ ಪರಿಹಾರ ಒದಗಿಸುವುದಾಗಿ ಭರವಸೆ ನೀಡಿದರು. ಗ್ರಾಮಾಭಿವೃದ್ಧಿಗೆ ಎಲ್ಲರು ಸಹಕಾರ ನೀಡುವಂತೆ ಕರೆ ನೀಡಿದರು. ತಾಲೂಕಿನ ಉಡಬಾಳ ಗ್ರಾಮದಲ್ಲಿ ಗ್ರಾಮ ಅಭಿವೃದ್ಧಿ, ಮೂಲ ಸೌಕರ್ಯ ಒದಗಿಸುವ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ, ಗ್ರಾಮಸ್ಥರ ಸಮ್ಮುಖದಲ್ಲಿ ಗ್ರಾಮ ಸಭೆ ನಡೆಸಿ ಜನರ ಸಮಸ್ಯೆಗಳನ್ನು ಆಲಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಅಭಿವೃದ್ಧಿಪರ ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತರುವುದು ನನ್ನ ಜವಾಬ್ದಾರಿ ಜನರ ಆಶಯಗಳನ್ನು ಈಡೇರಿಸುವುದು ನನ್ನ ಹೊಣೆ ಪ್ರಾಮಾಣಿಕವಾಗಿ ಜನರ ಸೇವೆ ಮಾಡುವುದು ನನ್ನ ಉದ್ದೇಶ ಹೀಗಾಗಿ ಹಗಲಿರುಳು ಶ್ರಮಿಸಲಾಗುತ್ತಿದೆ ಎಂದರು. ಸಣ್ಣ–ಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆಹರಿಸಲಾಗಿದ್ದು, ಉಳಿದ ಮನವಿ–ಅಹವಾಲುಗಳನ್ನು ಸ್ವೀಕರಿಸಿ



ಅವುಗಳಿಗೆ ಶೀಘ್ರ ಪರಿಹಾರ ಒದಗಿಸಲಾಗುವುದು ಎಂದು ತಿಳಿಸಿದರು. ಬಳಿಕ ಗ್ರಾಮದಲ್ಲಿರುವ ಸರ್ಕಾರಿ ಶಾಲೆಗೆ ಭೇಟಿ ನೀಡಿ ಪ್ರಗತಿಯಲ್ಲಿರುವ ಕಾಮಗಾರಿ ವೀಕ್ಷಿಸಿ ಮತ್ತು ವಿಧ್ಯಾರ್ಥಿಗಳ ಶಿಕ್ಷಣ ಕುರಿತ ಮಾಹಿತಿ ಪಡೆದರು. ಉಡಬಾಳ ಗ್ರಾಮದಲ್ಲಿರುವ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಬಳಿ 10ಲಕ್ಷ ರೂ. ವೆಚ್ಚದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಕಾಮಗಾರಿ ಉತ್ತಮವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ, ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಮಂಜುನಾಥ್ ಪಂಚಾಳ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ, ಆಹಾರ ನಿರೀಕ್ಷಕ ಶೇಖರ್ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಸವಿತಾಬಾಯಿ ಎಲ್. ಭಯ್ಯಾ, ಗ್ರಾಮ ಪಂಚಾಯತ್ ಅಧ್ಯಕ್ಷೆ ಅನುಸೂಯ, ಮಾಜಿ ಅಧ್ಯಕ್ಷ ನರಸಾರೆಡ್ಡಿ ಇದ್ದಾರೆಡ್ಡಿ, ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಜನವರಿಯಲ್ಲಿ 5 ದಿವಸ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆ

## 100 ಮಕ್ಕಳಿಗೆ ಎರಡು ವರ್ಷ ಉಚಿತ ಶಿಕ್ಷಣ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ : ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಗೋಲ್ಡನ್ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆ ಯೋಜನೆ ಮುಂದುವರಿಸಿದ್ದು ಜನವರಿ ತಿಂಗಳಲ್ಲಿ ಐದು ದಿವಸ ಪ್ರವೇಶ ಪರೀಕ್ಷೆ ನಡೆಯಲಿವೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ಕರೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಶಿಕ್ಷಣ ಸಂಸ್ಥೆಯ 25ನೆಯ ವರ್ಷ ಆಚರಣೆ ಹಿನ್ನಲೆಯಲ್ಲಿ ಕಳೆದ 10ವರ್ಷಗಳ ಹಿಂದೆ ಗುರುಕುಲ ಗೋಲ್ಡನ್ ಸ್ಕಾಲರ್‌ಶಿಪ್ ಯೋಜನೆ ಪರಿಚಯಿಸಲಾಗಿತ್ತು. ಈ ಯೋಜನೆಗೆ ಮಕ್ಕಳು, ಪಾಲಕರು ಹೆಚ್ಚಿನ ಆಸಕ್ತಿ ತೋರುತ್ತಿರುವುದರಿಂದ ಗೋಲ್ಡನ್ ಸ್ಕಾಲರ್‌ಶಿಪ್ ಯೋಜನೆ ಹಾಗೇ ಮುಂದುವರಿಸಲು ನಿರ್ಣಯ ಕೈಗೊಳ್ಳಲಾಗಿದೆ. ಈ ಯೋಜನೆ ಬಡವರು, ರೈತರು, ಕೂಲಿ ಕಾರ್ಮಿಕರ ಮಕ್ಕಳಿಗೆ ವರದಾನವಾಗಿದೆ. ಪ್ರತಿ ವರ್ಷ ನೂರು ಮಕ್ಕಳು ಉಚಿತ ಶಿಕ್ಷಣದ ಸೌಲಭ್ಯ ಪಡೆದು ನೀಟ್–ಐಐಟಿಯಲ್ಲಿ ಉತ್ತಮ ಸಾಧನೆ ತೋರುತ್ತಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಹಾಲಿಂಗ ಸ್ವಾಮೀಜಿ,

ಆಡಳಿತಾಧಿಕಾರಿ ಮೋಹನ ರೆಡ್ಡಿ ಇದ್ದರು. ಚನ್ನಬಸವೇಶ್ವರ ಗುರುಕುಲ ಪಕೃತಿ ಮಡಿಲಿನಲ್ಲಿ ಈ ಭಾಗದ ಮಕ್ಕಳ ಗುಣಾತ್ಮಕ ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರಕ್ಕೆ ಆದ್ಯತೆ ನೀಡುತ್ತಿದ್ದೇವೆ. ಹಾಗಾಗಿ ಕಳೆದ ಸಾಲಿನಲ್ಲಿ ನೀಟ್–ಐಐಟಿಯಲ್ಲಿ ವಿದ್ಯಾರ್ಥಿಗಳು ಉತ್ತಮ ರ‍್ಯಾಂಕ್ ಪಡೆದು ಸಿಎಂ ಸಿದ್ದರಾಮಯ್ಯ ಅವರಿಂದ ಗೌರವಕ್ಕೆ ಪಾತ್ರರಾಗಿದ್ದರು ಎಂದು ಸ್ಮರಿಸಿದರು. 8 ಸಾವಿರ ಮಕ್ಕಳು ನೊಂದಣಿ 2026–27ನೇ ಸಾಲಿನ ಪಿಯುಸಿ ವಿಜ್ಞಾನ ಪ್ರವೇಶ ಪಡೆಯಲು ಸ್ಕಾಲರ್‌ಶಿಪ್‌ಗಾಗಿ ಈಗಾಗಲೇ ರಾಜ್ಯ ಮತ್ತು ಹೊರ ರಾಜ್ಯಗಳಿಂದ 8 ಸಾವಿರ ವಿದ್ಯಾರ್ಥಿಗಳು ನೊಂದಣಿ ಮಾಡಿಸಿದ್ದಾರೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದರು.

2004ರಲ್ಲಿ ಪಿಯುಸಿ ವಿಭಾಗ ಆರಂಭಗೊಂಡಿದ್ದು ಕಳೆದ 10 ವರ್ಷಗಳಿಂದ ಸ್ಕಾಲರ್‌ಶಿಪ್ ಯೋಜನೆ ನಡೆಸಿಕೊಂಡು ಬರಲಾಗುತ್ತಿದ್ದು ಇದು ವರೆಗೂ 1 ಸಾವಿರ ಮಕ್ಕಳು ಉಚಿತ ಶಿಕ್ಷಣ, ವಸತಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆ ಸೌಲಭ್ಯ ಪಡೆದು ಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.



### ಜನವರಿಯಲ್ಲಿ ಪ್ರವೇಶ ಪರೀಕ್ಷೆ

ಗಡಿಭಾಗದ ಬಡ ಪ್ರತಿಭಾವಂತ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಮಾರ್ಗದರ್ಶನದಲ್ಲಿ ಗುರುಕುಲ ಸ್ಕಾಲರ್‌ಶಿಪ್ ಯೋಜನೆ ಜಾರಿಗೆ ತಂದಿದ್ದೇವೆ. ಈ ಬಾರಿಯು ಚನ್ನಬಸವೇಶ್ವರ ಗುರುಕುಲದಲ್ಲಿ 2026–27ನೇ ಸಾಲಿನ ಪ್ರವೇಶಕ್ಕಾಗಿ ಜ.4, 10, 11, 18 ಮತ್ತು 25 ರಂದು ಪ್ರವೇಶ ಪರೀಕ್ಷೆ ಏರ್ಪಡಿಸಿದ್ದೇವೆ ಪ್ರಸ್ತುತ ಎಸ್ಸೆಸ್ಸೆಲ್ಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕನ್ನಡ, ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳು ಪರೀಕ್ಷೆ ಬರೆಯಬಹುದಾಗಿದೆ ಎಂದು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದರು.

**ಗುರುಕುಲ ಗೋಲ್ಡನ್ ಸ್ಕಾಲರ್ ಶಿಪ್ ಪ್ರವೇಶ ಪರೀಕ್ಷೆಯಲ್ಲಿ ಉತ್ತಮ ರ‍್ಯಾಂಕ್ ಪಡೆದ 25 ವಿದ್ಯಾರ್ಥಿಗಳಿಗೆ ಎರಡು ವರ್ಷ ಉಚಿತ ಪಿಯುಸಿ ಶಿಕ್ಷಣ, ವಸತಿ, ಕೋಚಿಂಗ್ ನೀಡಲಾಗುವುದು. ನಂತರದ 75 ವಿದ್ಯಾರ್ಥಿಗಳಿಗೆ ಫೀ ನಲ್ಲಿ ಶೇ.50ರಷ್ಟು ರಿಯಾಯಿತಿ ಸಿಗಲಿದೆ.**

**- ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅಧ್ಯಕ್ಷರು**
**ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ**

## ಐತಿಹಾಸಿಕ ಅಂಬಾ ದೇವಿ ಮಹೋತ್ಸವ ರಾಜ್ಯದ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಸಚಿವರು ಆಗಮನ: ಶಾಸಕ ಹಂಪನಗೌಡ ಬಾದರ್ಲಿ

ಮಲ್ಲಮ್ಮ ನುಡಿ ವಾರ್ತೆ

ಸಿಂಧನೂರು; ಭಕ್ತಿ–ಶಕ್ತಿ ಪರಂಪರೆಯ ದಿವ್ಯ ಸಂಗಮ ಸಿಂಧನೂರ ತಾಲೂಕಿನ ಸೋಮಲಾಪುರದ ಅಂಬಾಮಠದ ಅಂಬಾ ಮಹೋತ್ಸವ 2026ರ ಕಾರ್ಯಕ್ರಮವು ಜನವರಿ 2ರಿಂದ ಜನವರಿ 6ರವರೆಗೆ ನಿಗದಿಯಾಗಿದ್ದು, ಜನವರಿ 3ರಂದು ನಡೆಯಲಿರುವ ಅಂಬಾದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಮತ್ತು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಹಾಗೂ ವಿವಿಧ ಇಲಾಖೆಗಳ ಸಚಿವರು, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳ ಸಂಸದರು, ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಮತ್ತು ಇನ್ನಿತರ ಗಣ್ಯರು ಭಾಗಿಯಾಗಲಿದ್ದಾರೆ ಎಂದು ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಹೇಳಿದರು. ಸಿಂಧನೂರ ನಗರದ ಕಾಕತಿಯ ಕ್ಲಬ್ ಆವರಣದಲ್ಲಿ ಡಿಸೆಂಬರ್ 30ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಜನವರಿ 03ರಂದು ಮಧ್ಯಾಹ್ನ 2 ಗಂಟೆಗೆ ಸಿಂಧನೂರು ನಗರಕ್ಕೆ ಆಗಮಿಸುವರು. ಅಂದು ಸಿಂಧನೂರ ನಗರದಲ್ಲಿ ಮಧ್ಯಾಹ್ನ 2 ರಿಂದ 2:30ರವರೆಗೆ ಸಾರ್ವಜನಿಕರಿಂದ ಅಹವಾಲು



ಸ್ವೀಕರಿಸುವರು. ಮಧ್ಯಾಹ್ನ ಭೋಜನದ ವಿರಾಮದ ನಂತರ 3:30 ರಿಂದ ಅಂಬಾಮಠಕ್ಕೆ ತೆರಳಿ ಸಂಜೆ 4 ಗಂಟೆಗೆ, ಸಿಂದನೂರ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 400 ಕೋಟಿ ರೂ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಮಾಡಲಿದ್ದಾರೆ. ಸಂಜೆ 5 ಗಂಟೆಗೆ ಅಂಬಾದೇವಿ ಮಹಾ ರಥೋತ್ಸವ ಮತ್ತು ಜಂಬೂಸವಾರಿಗೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಅಂಬಾಮಠವು 400 ವರ್ಷಗಳ ಇತಿಹಾಸ ಹೊಂದಿದ್ದು, ತೆಲಂಗಾಣ, ಮಹಾರಾಷ್ಟ್ರ ಆಂಧ್ರ ಸೇರಿದಂತೆ ಐದಾರು ರಾಜ್ಯಗಳ ಮತ್ತು ನಮ್ಮ ರಾಜ್ಯದ ಲಕ್ಷಾಂತರ ಭಕ್ತರು

ಅಂಬಾಮಠದ ಜಾತ್ರೆಗೆ ಆಗಮಿಸುತ್ತಾರೆ. ಈ ವರ್ಷ ಮಹಾ ರಥೋತ್ಸವವು ಅದ್ದೂರಿಯಾಗಿ ನಡೆಯಲಿದೆ. ಅಂಬಾ ಮಹೋತ್ಸವ ನಿಮಿತ್ತ ಜನವರಿ 2ರಿಂದ 6ರವರೆಗೆ ಸರಿಗಮಪ ಖ್ಯಾತಿಯ ಗಾಯಕರು ಮತ್ತು ಇನ್ನಿತರ ಕಲಾವಿದರಿಂದ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಪ್ರಪ್ರಥಮ ಬಾರಿಗೆ ಜಂಬೂಸವಾರಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮ, ಹಾಸ್ಯ ಸಂಜೆ, ಅಹೋ ರಾತ್ರಿ ತತ್ವಪದ ಗಾಯನ, ಕಡುಬಿನ ಕಾಳಗ, ಸಂಗೀತ ಸಂಜೆ, ನಾಟಕ, ದೇವಿ ಪಲ್ಲಕ್ಕಿ ಉತ್ಸವ, ಜಾನಪದ ಜಾತ್ರೆ, ಕುಂಬೋತ್ಸವ, ತತ್ವಪದ ಗಾಯನ ಸೇರಿದಂತೆ ಅನೇಕ ಕಾರ್ಯಕ್ರಮಗಳು ನಡೆಯಲಿವೆ.

ಜಾತ್ರೆಗೆ ಆಗಮಿಸುವ ಲಕ್ಷಾಂತರ ಭಕ್ತರಿಗೆ ಅನುಕೂಲವಾಗಲು ಈ ಬಾರಿ ಮಠದ ಆವರಣವನ್ನು ಅಚ್ಚುಕಟ್ಟಾಗಿ ಸಿದ್ಧಪಡಿಸಲಾಗಿದೆ. ರಸ್ತೆ, ಕುಡಿಯುವ ನೀರು, ಶುಚಿತ್ವ ಸೇರಿದಂತೆ ಭಕ್ತರಿಗೆ ಅಗತ್ಯ ಮೂಲಭೂತ ಸೌಕರ್ಯ–ಕ್ಕೆ ವ್ಯವಸ್ಥೆ ಮಾಡಲಾಗಿದೆ. ಈ ಬಾರಿ ಮಠದ ಆವರಣದಲ್ಲಿ 132 ಅಡಿ ಅಗಲದ ರಥಬೀದಿಯನ್ನು ಸುಸಜ್ಜಿತವಾಗಿ ಸಿದ್ಧಪಡಿಸಲಾಗಿದೆ. ಜೊತೆಗೆ ಈ ಬಾರಿ ಮಠದ ಹತ್ತಿರದ 9 ಎಕರೆ ಜಾಗದಲ್ಲಿ ಮಿಠಾಯಿ, ಬಳೆ, ಆಟಿಕೆ ಸಾಮಾನು, ಆಟದ ಯಂತ್ರಗಳ ಹಾಗೂ ಇನ್ನಿತರ ಜಾತ್ರಾ ಅಂಗಡಿಗಳಿಗೆ ಒಂದೆಡೆ ಸಾಲಾಗಿ ಶಿಸ್ತುಬದ್ಧವಾಗಿ ವ್ಯವಸ್ಥೆ ಮಾಡಲಾಗಿದೆ. ಜಾತ್ರಾ ಹಿನ್ನೆಲೆಯಲ್ಲಿ ತಲಾ 6 ಹೆಲ್ಪ್ ಡೆಸ್ಕ್ ಹಾಗೂ ಹೆಲ್ತ್ ಡೆಸ್ಕ್ ಸ್ಥಾಪಿಸಲಾಗಿದೆ. ಸ್ಥಳೀಯ ವಿವಿಧ ಕಾಲೇಜುಗಳ ಎನ್‌ಎಸ್‌ಎಸ್ ಹಾಗೂ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಹಾಗೂ ತಾಲೂಕಿನ ಗ್ರಾಮ ಲೆಕ್ಕಾಧಿಕಾರಿಗಳು, ಕಂದಾಯ ನಿರೀಕ್ಷಕರು ಮತ್ತು ತಾಲೂಕು ಮಟ್ಟದ ಅಧಿಕಾರಿಗಳನ್ನು ಒಳಗೊಂಡು ತಂಡ ರಚಿಸಿ ಜಾತ್ರೋತ್ಸವದ ನಾನಾ ಸೇವೆಗೆ ನಿಯೋಜನೆ ಮಾಡಿದ್ದೇವೆ ಎಂದು ಶಾಸಕರು ಮಾಹಿತಿ ನೀಡಿದರು.

ರಾಯಚೂರು ಜಿಲ್ಲೆಯ ಇತಿಹಾಸದಲ್ಲಿಯೇ ಸಿಂಧನೂರು ತಾಲೂಕು ವ್ಯಾಪ್ತಿಯಲ್ಲಿ ಏಕಕಾಲಕ್ಕೆ 24 ಕಂದಾಯ ಗ್ರಾಮಗಳಿಗೆ ಅಧಿಸೂಚನೆ ಹೊರಡಿಸಿ ಘೋಷಿಸಿ ಆಯಾ ಕಂದಾಯ ಗ್ರಾಮದಲ್ಲಿನ ಫಲಾನುಭವಿಗಳಿಗೆ ಕಂದಾಯ ಸಚಿವರು ಸಾಂಕೇತಿಕವಾಗಿ ಹಕ್ಕುಪತ್ರ ವಿತರಣೆ ಮಾಡಲಿದ್ದಾರೆ ಎಂದು ಶಾಸಕರು ತಿಳಿಸಿದರು. 174 ಕೋಟಿ ರು ವೆಚ್ಚದಲ್ಲಿ ಅಂದಾಜು 20,000 ಎಕರೆ ಜಮೀನಿಗೆ ನೀರು ಪೂರೈಸುವ ಏತ ನೀರಾವರಿ ಯೋಜನೆಗೆ, 69 ಕೋಟಿ ರೂ ವೆಚ್ಚದಲ್ಲಿ ಬ್ರಿಜ್ ಮತ್ತು ಬ್ಯಾರೇಜ್ ನಿರ್ಮಾಣ, 39 ಕೋಟಿ ರು ವೆಚ್ಚದಲ್ಲಿ ಸಿಂಧನೂರಿನ ಹಳ್ಳಕ್ಕೆ ಬ್ರಿಜ್ ಕಮ್ ಬ್ಯಾರೇಜ್ ನಿರ್ಮಾಣ, ಗಾಂಧಿನಗರದಿಂದ ಗೊರೆಬಾಳ ಗ್ರಾಮದವರೆಗೆ ರಸ್ತೆ ಕಾಮಗಾರಿ ಸೇರಿದಂತೆ ನಾನಾ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತದೆ.

ಸಿಂಧನೂರು ತಾಲೂಕಿನಲ್ಲಿ ಅಂ–ದಾಜು 18 ಪದವಿ ಕಾಲೇಜುಗಳು, 32 ಪಿಯುಸಿ ಕಾಲೇಜ್ ಗಳಿದ್ದು ಅಂದಾಜು 25,000 ಕಾಲೇಜು ವಿದ್ಯಾರ್ಥಿಗಳಿಗೆ ಆಯಾ ಗ್ರಾಮಗಳಿಂದ ಸಿಂಧನೂರು ನಗರಕ್ಕೆ ಬಂದು ಹೋಗಲು ಅನುಕೂಲವಾಗುವಂತೆ ವಿದ್ಯಾರ್ಥಿಗಳಿಗೆಂದೇ 5 ಕೋಟಿ ರೂ ವೆಚ್ಚದಲ್ಲಿ 15 ಬಸ್ಸುಗಳಿಗೆ ಚಾಲನೆ ನೀಡುವ ಕಾರ್ಯಕ್ರಮವು ಸಹ ಇದೇ ವೇಳೆ ನಡೆಯಲಿದೆ ಎಂದು ಶಾಸಕರು ವಿವರಿಸಿದರು.

ಈ ಕಾರ್ಯಕ್ರಮದಲ್ಲಿ ಸಚಿವರಾದ ಶರಣಪ್ರಕಾಶಪಾಟೀಲ್, ರಾಮಲಿಂಗಾರೆಡ್ಡಿ ಸತೀಶ್ ಜಾರಕಿಹೊಳಿ, ಪ್ರಿಯಾಂಕ ಖರ್ಗೆ, ಶಿವರಾಜ ತಂಗಡಗಿ, ಎನ್ ಎಸ್ ಬೋಸರಾಜು ಸೇರಿದಂತೆ ಇನ್ನಿತರ ಸಚಿವರು ಭಾಗಿಯಾಗಲಿದ್ದಾರೆ ಎಂದು ಶಾಸಕರು ತಿಳಿಸಿದರು.

ಸಿಂಧನೂರು ತಾಲೂಕಾಡಳಿತ, ತಾಲೂಕ್ ಪಂಚಾಯತ್ ಹಾಗೂ ಧಾರ್ಮಿಕ ದತ್ತಿ ಇಲಾಖೆ ಇವರ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ತಹಸೀಲ್ದಾರರಾದ ಅರುಣ ದೇಸಾಯಿ, ತಾಪಂ ಇಓ ಚಂದ್ರಶೇಖರ, ಮುಖಂಡರಾದ ಆರ್ ಸಿ ಪಾಟೀಲ, ಖಾಜಿ ಮಲಿಕ್ ಹಾಗೂ ಇತರರು ಇದ್ದರು.

**ಪುರಸಭೆ ಕಾರ್ಯಾಲಯ ಹಳ್ಳಿಖೇಡ(ಬಿ) ಜಿಲ್ಲೆ ಬೀದರ**
**TOWN MUNICIPAL COUNCIL HALLIKHED B DIST. BIDAR**

ಸಂ: ಪುಸಹ(ಬಿ)/ಎ.ಬಿ.ಸಿ/ಸಿಆರ್–01/2025–26 ದಿನಾಂಕ: 30/12/2025

**ಟೆಂಡರ್ ಪ್ರಕಟಣೆ**

1) ಕಾಮಗಾರಿ / ಸರಕು / ಸೇವೆಯ ವಿವರ (DMA/2025-26/SE6820), 2) ಕಾಮಗಾರಿ / ಸರಕು / ಸೇವೆಯ ಅಂದಾಜು ಮೊತ್ತ KPPP ನಲ್ಲಿ ನಮೂದಿಸಿದಂತೆ, 3) ಗುತ್ತಿಗೆದಾರರ ಅರ್ಹತೆ ವಿವರ KPPP ನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ KPPP ನಲ್ಲಿ ನಮೂದಿಸಿದಂತೆ 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು **08.01.2026, 4:30PM** 6) ಟೆಂಡರ ತೆರೆಯುವ **ದಿನಾಂಕ 09.01.2026, 5:00 PM ,** 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ ಮುಖ್ಯಾಧಿಕಾರಿಗಳು,ಪುರಸಭೆ ಹಳ್ಳಿಖೇಡ (ಬಿ) 08483-274432, Email : itstaff_ulb_hallikhedab@yahoo.com, 8) ಅಂತರಜಾಲ ತಾಣದ ವಿಳಾಸ www.kppp.karnataka.gov.in

**ಸಹಿ/– ಮುಖ್ಯಾಧಿಕಾರಿ**
**ಪುರಸಭೆ ಹಳ್ಳಿಖೇಡ(ಬಿ)**

ವಾ.ಸಾ.ಸಂ.ಇ/ಬೀದರ/281/ಕೆ.ಎಸ್.ಎಂ.ಸಿ.&ಎ/2025–26

# ಸೋಯಾ ಉದ್ದು ಖರೀದಿ ಅವಧಿಯನ್ನು ಜ. 26 ವರೆಗೆ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ:

2025-26ನೇ ಸಾಲಿನ ಖಾರಿಫ್ ಋತುವಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಸೋಯಾಬೀನ್,ನೆಲಗಡಲೆ,ಹೆಸರುಕಾಳು (ಮೂಂಗ್), ಉದ್ದು (ಉದ್ದು) ಮತ್ತು ಸೂರ್ಯಕಾಂತಿ ಖರೀದಿ ಅವಧಿಯನ್ನು ವಿಸ್ತರಿಸುವ ಬಗ್ಗೆ ಸುತ್ತಲೂ ಮಂಗಳವಾರ ಹೋರಾಡಿಸಲಾಗಿದೆ.

ಬೆಲೆ ಬೆಂಬಲ ಯೋಜನೆ (ಪಿಎಸ್‌ಎಸ್) ಅಡಿಯಲ್ಲಿ ಸೋಯಾಬೀನ್, ನೆಲಗಡಲುಮತ್ತು ಹೆಸರುಕಾಳುಗಳ ಖರೀದಿ ಅವಧಿಯನ್ನು 26.01.2026 ರವರೆಗೆ ಮತ್ತು ಹೆಸರುಕಾಳು (ಮೂಂಗ್), ಉದ್ದು (ಉದ್ದು) ಮತ್ತು ಸೂರ್ಯಕಾಂತಿಗಳ ಖರೀದಿ ಅವಧಿಯನ್ನು 22.01.2026 ರವರೆಗೆ ವಿಸ್ತರಿಸಲು ಈ ಇಲಾಖೆಯ ಅನುಮೋದನೆಯನ್ನು ನೀಡಿರುತ್ತದೆ.

ಹಾಗಾಗಿ ರೈತರು ಆತಂಕ ಪಡದೆ, ತಮ್ಮ ನೊಂದಣಿ ಅನುಗುಣವಾಗಿ, ತಮ್ಮ ಬೆಳೆಗಳನ್ನು ಖರೀದಿ ಕೇಂದ್ರಕ್ಕೆ ತಂದು ತೂಕ ಮಾಡಬಹುದು.






"ಸೋಯಾ ಉದ್ದು ಖರೀದಿ ದಿನಾಂಕ ವಿಸ್ತರಣೆ ಮತ್ತು ಖರೀದಿ ತಡವಾಗುವ ಬಗ್ಗೆ "ಮಲ್ಲಮ್ಮ ನುಡಿ" ಪತ್ರಿಕೆಯಲ್ಲಿಅನೇಕ ಭಾರಿ ಸುದ್ದಿ ಮಾಡಿ ರೈತರ ಸಮಸ್ಯೆಗೆ ಪರಿಹಾರ ಕೊಟ್ಟಂತೆ ಆಗಿದೆ. ರೈತ ಪರವಾಗಿ ಸುದ್ದಿ ಮಾಡಿದ ಮಲ್ಲಮ್ಮ ನುಡಿ ಪತ್ರಿಕೆ ರೈತರ ಪರವಾಗಿ ಧನ್ಯವಾದಗಳು.

-ಗುರುನಾಥ ವಟಗೆ,
ಅಧ್ಯಕ್ಷರು ಪಿ. ಕೆ. ಪಿ. ಎಸ್
ಮುದೋಳ (ಬಿ), ಕಮಲನಗರ.///

# ಅರ್ಜಿ ಸಲ್ಲಿಕೆ: ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಪ್ರಸಕ್ತ 2025-26ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಾದ ಉದ್ಯೋಗಿನಿ, ಚೇತನಾ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಆದಾಯೋತ್ಪನ್ನ ಚಟುವಟಿಕೆ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು ಕಾರಣಾಂತರಗಳಿಂದ 2025ರ ಜನವರಿ 15 ರವರೆಗೆ ವಿಸ್ತರಿಸಲಾಗಿದೆ.

ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಡಿಸೆಂಬರ್ 15ರಂದು ನಿಗದಿಪಡಿಸಲಾಗಿತ್ತು. ಆಸಕ್ತರು ಸೇವಾಸಿಂಧು ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಮೇಲ್ಕಂಡ ಕೊನೆಯ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರು ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಗಳಲ್ಲಿ ಒಂದಾದ ಬೆಣ್ಣೆತೋರಾ ನದಿಯಿಂದ ಸರಬರಾಜಾಗುವ ಮುಖ್ಯ ಕೊಳವೆ ಮಾರ್ಗದ ಹುಮನಾಬಾದ ವೃತ್ತ ರಿಂಗ್ ರಸ್ತೆಯ ಮಧ್ಯದಲ್ಲಿ 600 ಎಂ.ಎಂ ವ್ಯಾಸದ ಮುಖ್ಯ ಕೊಳವೆ ಮಾರ್ಗದಲ್ಲಿ ಪೈಪ್‌ಲೈನ್ ದುರಸ್ತಿ ಕಾರ್ಯವನ್ನು ಕೈಗೊಳ್ಳಲಿರುವ ಹಿನ್ನೆಲೆಯಲ್ಲಿ 100 ಹೆಚ್.ಪಿ. ಮೋಟಾರ ಮೂಲಕ ಸರಬರಾಜಾಗುವ ನಗರದ ಈ ಕೆಳಕಂಡ ಬಡಾವಣೆಗಳಲ್ಲಿ ಇದೇ ಡಿಸೆಂಬರ್ 31 ರಿಂದ ಜನವರಿ 4 ರವರೆಗೆ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಕಲಬುರಗಿ ನಗರದ ಸಾರ್ವಜನಿಕರು ಇದಕ್ಕೆ ಸಹಕರಿಸಬೇಕು.

ಕಲಬುರಗಿ ನಗರದ ಇಎಸ್‌ಐ ಆಸ್ಪತ್ರೆ, ಜಿಡಿಎ ಬಡಾವಣೆ, ವೀರೇಂದ್ರ ಪಾಟೀಲ್ ಬಡಾವಣೆ, ಭಾಗ್ಯನಗರ, ಜಯನಗರ, ಲಕ್ಷ್ಮೀನಗರ, ಓಂ ನಗರ, ಎಂ.ಬಿ. ನಗರ ಹಾಗೂ ವಿವೇಕಾನಂದ ನಗರ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಮಹಾನಗರ ಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ ಕಂಪನಿಗೆ ಸಹಕರಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ-ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರಡು ಇ-ಖಾತಾ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಸರ್ಕಾರವು ಮನೆಯಲ್ಲಿ ಕುಳಿತು ಅತಿ ಸರಳವಾಗಿ ಇ-ಖಾತಾ ಸೇವೆಯನ್ನು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ನಿಗದಿತ ಕಾಲಾವಧಿಯಲ್ಲಿ ಖಾತಾವನ್ನು ಪಡೆಯಲು ತಂತ್ರಾಂಶ ರೂಪಿಸಿದ್ದು, ಅದರಂತೆ ಆಸ್ತಿ ಕಣಜದಲ್ಲಿನ ಮಾಹಿತಿ ಆಧಾರದ ಮೇಲೆ ಕರಡು ಇ-ಖಾತಾವನ್ನು ಪ್ರಕಟಿಸಲಾಗಿದೆ. ಸಾರ್ವಜನಿಕರು ಈ ಮಾಹಿತಿಯನ್ನು ನೇರವಾಗಿ ವೀಕ್ಷಿಸಬಹುದಾಗಿದೆ ಎಂದು ಕಮಲಾಪುರ ಪಟ್ಟಣ ಪಂಚಾಯತ್‌ನ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಸದರಿ ಮಾಹಿತಿಗಳ ಬಗ್ಗೆ ತಕರಾರು ಇದ್ದಲ್ಲಿ ಸಾರ್ವಜನಿಕರು ಇ-ಆಸ್ತಿ ತಂತ್ರಾಂಶದಲ್ಲಿ ಹೆಚ್ಚಿನ ಮಾಹಿತಿಯನ್ನು ನೇರವಾಗಿ ನಮೂದಿಸಬಹುದಾಗಿದೆ. ನಮೂದಿಸಿದ ಮಾಹಿತಿಯ ನಿಖರತೆಯನ್ನು ಪಟ್ಟಣ ಪಂಚಾಯತಿಯು ಪರಿಶೀಲಿಸಿ ಅನುಮೋದಿಸಲಾಗುತ್ತದೆ. ಅಂತಿಮ ಇ-ಖಾತಾವನ್ನು ಸಾರ್ವಜನಿಕರು ತಮ್ಮ ಮನೆಯಲ್ಲಿ ಕುಳಿತು ಪಡೆಯಬಹುದಾಗಿದೆ.

ಇ-ಖಾತಾ ಪಡೆಯಲು ಮಾಲೀಕರ ಭಾವಚಿತ್ರ, ಆಸ್ತಿ ತೆರಿಗೆ ಹಾಗೂ ನೀರಿನ ತೆರಿಗೆ, ಸ್ವತ್ತಿನ ದಾಖಲೆಗಳು (ಕ್ರಯಪತ್ರ/ ದಾನಪತ್ರ/ ಹಕ್ಕು ಪತ್ರ), ವಿದ್ಯುತ್ ಆರ್.ಆರ್.ನಂಬರ್, ಸ್ವತ್ತಿನ ಛಾಯಾಚಿತ್ರ (ಜಿ.ಪಿ.ಎಸ್) (ಉಕಖ), ಋಣಭಾರ ನಮೂನೆ-15/16 (ಇಅ), ಚುನಾವಣಾ ಗುರುತಿನ ಚೀಟಿ/ಪ್ಯಾನ್‌ಕಾರ್ಡ್ ಪ್ರತಿ, ಮ್ಯುಟೇಶನ್ ಪ್ರತಿ, ಆಸ್ತಿಯ ನಕ್ಷೆ ಹಾಗೂ ಸ್ವತ್ತಿನ ಸಂಬಂಧಿಸಿದ ಇತರೆ ಪೂರಕ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಮಲಾಪುರ ಪಟ್ಟಣ ಪಂಚಾಯತಿಯ ಕಂದಾಯ ಶಾಖೆಯನ್ನು ಅಥವಾ ಮೊಬೈಲ್ ಸಂಖ್ಯೆ 8660205472, 9663143400, 8120806378, 8105085606 ಅಥವಾ www.eaasthi.karnataka.gov.in ವೆಬ್‌ಸೈಟ್‌ನ್ನು ಅಥವಾ ಕರ್ನಾಟಕ-1 ಕೇಂದ್ರಗಳಲ್ಲಿ ಸಹ ನಾಗರಿಕರು ತಂತ್ರಾಂಶವನ್ನು ಬಳಸಿ ಸೇವೆಯನ್ನು ಪಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ವಿದ್ಯಾಧರ ಗುರೂಜಿ ಕೊಡುಗೆ ಸ್ಮರಣೀಯ : ಶಶೀಲ್ ನಮೋಶಿ




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಲಾಹೋರ್‌ನಲ್ಲಿ ಹಿಂದಿ ಭಾಷೆಯ ಅಭ್ಯಾಸ ಮಾಡಿದ್ದ ವಿದ್ಯಾಧರ ಗುರೂಜಿ ಅವರು ಸಮಯಪ್ರಜ್ಞೆ, ಶಿಸ್ತು ಹಾಗೂ ಸಿಪಾಯಿಯಂತಹ ನಿಷ್ಠೆಯಿಂದ ಬದುಕಿದ ಮಹಾನ್ ವ್ಯಕ್ತಿಯಾಗಿದ್ದರು. ನೆಲ, ಜಲ, ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಮೇಲಿನ ಅವರ ಅಪಾರ ಅಭಿಮಾನ ಸಮಾಜಕ್ಕೆ ದಿಕ್ಕು ತೋರಿಸಿದೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಹೇಳಿದರು.

ನಗರದ ಕರ್ನಾಟಕ ಹಿಂದಿ ಪ್ರಚಾರ ಸಭಾ ಆವರಣದಲ್ಲಿ ಆಯೋಜಿಸಿದ್ದ ಶತಾಯುಷಿ ವಿದ್ಯಾಧರ ಗುರೂಜಿ ಅವರ 111ನೇ ಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, 1962ರಲ್ಲಿ ಕೋಳೂರ ಮಲ್ಲಪ್ಪ ಅವರನ್ನು ಪರಾಭವಗೊಳಿಸಿದರು, ಧೈರ್ಯಶಾಲಿ ಹೋರಾಟಗಾರರಾಗಿದ್ದ ಗುರುಜಿಯವರು, 1996ರಲ್ಲಿ ಮೊದಲ ಬಾರಿಗೆ ಹೈದರಾಬಾದ್ ಕರ್ನಾಟಕ ವಿಮೋಚನ ದಿನಾಚರಣೆಯನ್ನು ಆಚರಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದರು ಎಂದು ಸ್ಮರಿಸಿದರು.

ಕರ್ನಾಟಕ ಕಾರ್ಯನಿರತರ ಪತ್ರಕರ್ತರ ಸಂಘದ ಕಲಬುರಗಿ ಘಟಕದ ಅಧ್ಯಕ್ಷ ಬಾಬುರಾವ್ ಯಡ್ರಾಮಿ ಮಾತನಾಡಿ, ನಿಜಾಮರ ಆಳ್ವಿಕೆಗೆ ಒಳಪಟ್ಟಿದ್ದ ಹೈದರಾಬಾದ್ ಕರ್ನಾಟಕವನ್ನು ಮುಕ್ತಗೊಳಿಸಲು ವಿದ್ಯಾಧರ ಗುರೂಜಿ ಅವರ ಕೊಡುಗೆ ಅಪಾರವಾಗಿದೆ. ಹೈದರಾಬಾದ್ ಕರ್ನಾಟಕ ವಿಮೋಚನ ಹೋರಾಟಗಾರರ ಸ್ಮಾರಕವನ್ನು ನಿರ್ಮಿಸಬೇಕೆಂದು ಆಗ್ರಹಿಸಿದರು.

ರೈತ ಮುಖಂಡ ದಯಾನಂದ ಅವರು ಮಾತನಾಡಿ, ವಿದ್ಯಾಧರ ಗುರೂಜಿ ಅವರ ಸಮಾಜಮುಖಿ ಚಿಂತನೆ, ಹೋರಾಟ ಮನೋಭಾವ ಮತ್ತು ತ್ಯಾಗಮಯ ಜೀವನ ಇಂದಿನ ಪೀಳಿಗೆಗೆ ಪ್ರೇರಣೆ-ಯಾಗಿದೆ ಎಂದರು.

ಡಾ. ನಾಮದೇವ ಜಾಧವ್ ಅವರು ಉಪನ್ಯಾಸ ನೀಡಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ದಯಾನಂದ ಅಗಸರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಸ್ವಾತಂತ್ರ ಹೋರಾಟಗಾರ ಶಿತಾರಾಮ ಚೌವ್ಹಾಣ, ಅಶೋಕ ಗುರೂಜಿ ಗೌರವ ಉಪಸ್ಥಿತರಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಉಮೇಶ ಶೆಟ್ಟಿ ಅವರು ಸ್ವಾಗತ ಗೀತೆ ಹಾಡಿದರು. ಸವಿತಾ ನಾಶಿ ನಿರೂಪಿಸಿದರು.

ಈ ಸಂದರ್ಭದಲ್ಲಿ ಅಪ್ಪಾರಾವ್ ಅಕ್ಕೋಣೆ, ಎಸ್.ಎಲ್. ಪಾಟೀಲ, ಶಿವಾನಂದ ಹಿರೇಮಠ, ಗಿರೀಶ್ ಗೌಡ ಇನಾಂದಾರ್, ಮಲ್ಲಿಕಾರ್ಜುನ ಕಲ್ಲಬೇನೂರ ಸೇರಿದಂತೆ ಅನೇಕ ಗಣ್ಯರು ಹಾಗೂ ಪತ್ರಕರ್ತ ಶರಣಗೌಡ ಪಾಟೀಲ ಪಾಳಾ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾಧರ ಗುರೂಜಿ ಅವರ ಜೀವನ, ಸಾಧನೆ ಮತ್ತು ಹೈದರಾಬಾದ್ ಕರ್ನಾಟಕದ ಸಾಮಾಜಿಕ ಸಾಂಸ್ಕೃತಿಕ ಅಭಿವೃದ್ಧಿಗೆ ನೀಡಿದ ಅಮೂಲ್ಯ ಕೊಡುಗೆಗಳನ್ನು ಸ್ಮರಿಸಲಾಯಿತು.

# ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮವನ್ನು ಜನವರಿ 1ರಂದು ಗುರುವಾರ ಮಧ್ಯಾಹ್ನ 12 ಗಂಟೆಗೆ ಕಲಬುರಗಿಯ ಡಾ. ಎಸ್. ಎಂ. ಪಂಡಿತ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ವಿಶ್ವಕರ್ಮ ಸಮಾಜದ ಮಠಗಳ ಮಠಾಧೀಶರು ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಲಿದ್ದಾರೆ.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ತಿಮ್ಮಣ್ಣಪ್ಪ ಕಮಕನೂರ, ಸುನೀಲ್ ವಲ್ಲ್ಯಾಪುರೆ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯ್ಯದ್ ಮಹೆಬೂಬ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಹಾಗೂ ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

# ಉಚಿತ ಆರೋಗ್ಯ ತಪಾಸಣೆ ಶಿಬಿರ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ನಗರದ ಗಾಜಿಪೂರ ಅತ್ತರ ಕಾಂಪೌಂಡ ಶಕ್ತಿ ನಿವಾಸಿನಲ್ಲಿ ಶ್ರೀ ಮಲ್ಲೇಶಪ್ಪ ಮಿಣಜಗಿ ಪ್ರತಿಷ್ಠಾನ, ಶ್ರೀ ಹಿಂಗುಲಾಂಬಿಕಾ ಶಿಕ್ಷಣ ಸಂಸ್ಥೆಯ ಆಯುರ್ವೇದಿಕ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರ ಕಲಬುರಗಿ ಇವರ ಸಯುಂಕ್ತ ಆಶ್ರಯದಲ್ಲಿ ಪ್ರತಿ ತಿಂಗಳು ಆಯೋಜಿಸುತ್ತಿರುವ ಉಚಿತ ಆರೋಗ್ಯ ತಪಾಸಣೆ ಶಿಬಿರ ಜರುಗಿತ್ತು.

ನಗರದ ಪ್ರಖ್ಯಾತ ಸ್ತ್ರೀರೋಗ ಮತ್ತು ಪ್ರಸೂತಿ ತಜ್ಞರಾದ ಡಾ: ಇಂದಿರಾ ಶಕ್ತಿ ಅವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಶೀತ ಗಾಳಿ ಬಿಸುತ್ತಿದು ಜನರು ವೈರಸ ಹಾಗೂ ಬ್ಯಾಕ್ಟಿರಿಯಾದಿಂದ ಉಂಟಾಗುವ ಶ್ವಾಸಕೋಶದ ಇನಫೆಕ್ಷನ (Infection)ದಿಂದ ರೋಗಗಳಿಗೆತುತ್ತಾಗಿ ಹಲವಾರು ಎಂಟಿಬಯಾಟಿಕ್ಸ (Antibiotic) ತೆಗೆದು ಕೊಳ್ಳುತ್ತಿದ್ದಾರೆ.

ಹೆಚ್ಚಿನ ಎಂಟಿಬಯಾಟಿಕ್ಸ ಉಪಯೋಗದಿಂದ ದೇಹದಲ್ಲಿ ರೋಗ ನಿರೋಧಕ ಶಕ್ತಿ ಕುಗ್ಗಿ, ಔಷಧಿಗಳು ರೋಗದ ಮೇಲೆ ಪರಿಣಾಮ ಬಿರುವದಿಲ್ಲ ಮತ್ತು ಇದರ ದುಷ್ಪರಿಣಾಮ ಮೂತ್ರಕೋಶ ಹಾಗೂ ಲಿವರ ಮೇಲೆ ಆಗಲಿದೆ. ಆದ್ದರಿಂದ ವೈದ್ಯರ ಸಲಹೆ ಮೇರೆಗೆ ಎಂಟಿಬಯಾಟಿಕ್ಸ ಡೋಸ್ (Dose) ಉಪಯೋಗಿಸಬೇಕು. ಇದರ ದುಷ್ಪರಿಣಾಮದ ಬಗ್ಗೆ ಈಗಾಗಲೇ ICMR (ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ) ವರದಿಮಾಡಿದೆ.

ಉಚಿತ ಶಿಬಿರದಲ್ಲಿ ಉಚಿತವಾಗಿ ಔಷಧಿ ಹಾಗೂ ರಕ್ತ ಪರೀಕ್ಷೆ ಒದಗಿಸಲಾಯಿತು ಸುಮಾರು 120 ರಿಂದ 150 ರೋಗಿಗಳು ಈ ಶಿಬಿರದ ಉಪಯೋಗವನ್ನು ಪಡೆದುಕೊಂಡರು. ಈ ಶಿಬಿರದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ: ವಿಜಯಲಕ್ಷ್ಮಿ ಹರನೂರಕರ ಅಧೀಕ್ಷ ಡಾ: ಸಂಗಮೇಶ್ವರ ಹೀರೆಮಠ, ಡಾ: ಯೋಗೇಶ್ ದಾಚಾವರ, ಕಿರಿಯ ವೈದ್ಯರ ತಂಡ ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ: ಸಚಿವ ಈಶ್ವರ ಬಿ. ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ:

ಕರ್ನಾಟಕ ರಾಜ್ಯದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ತಿಳಿಸಿದರು.

ಅವರು ಮಂಗಳವಾರ ನಗರದ ಪ್ರತಾಪ್ ನಗರದ ಫಾಳೆ ಲಕ್ಸುರೀಸ್ ಕನ್ವೆನ್ಷನ್ ಹಾಲ್‌ನಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಸರ್ಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ "ಗ್ಯಾರಂಟಿ ಕಾರ್ಯಾಗಾರ-ಗ್ಯಾರಂಟಿ ಉತ್ಸವ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆ ರಾಜ್ಯದ 4 ಕೋಟಿಗೂ ಹೆಚ್ಚು ಜನರು ಫಲಾನುಭವಿಗಳಾಗಿದ್ದಾರೆ. ಪ್ರತಿ ಪಕ್ಷಗಳು, ಬಂಡವಾಳಶಾಹಿಗಳು ಗ್ಯಾರಂಟಿಗಳನ್ನು ವಿರೋಧಿಸುವರು, ಟೀಕಿಸುವರು, ಅವರೇ ಇವಾಗ ದೇಶದ ಇತರೆ ರಾಜ್ಯಗಳಲ್ಲಿ ಗ್ಯಾರಂಟಿಗಳನ್ನು ಘೋಷಣೆ ಮಾಡುತ್ತಿದ್ದಾರೆ ಎಂದರು. ತಮ್ಮ ಸರ್ಕಾರ ನುಡಿದಂತೆ ನಡೆದಿದೆ. ಚುನಾವಣೆ ಪ್ರಣಾಳಿಕೆಯಲ್ಲಿ ತಿಳಿಸಿರುವ ಹಾಗೆ ಪಂಚ ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದ್ದೇವೆಂದರು. ಬೀದರ ಜಿಲ್ಲೆಯಲ್ಲಿ ಗೃಹ ಲಕ್ಷ್ಮೀ ಯೋಜನೆಯಡಿ 3,44,855 ಮಹಿಳೆಯರು ಫಲಾನುಭವಿಗಳು ಇದ್ದು, ಇದುವರೆಗೆ ಯಾವುದೇ ಮಧ್ಯವರ್ತಿಗಳಿಲ್ಲದೆ ಮಾಹೆಗೆ 2000 ರೂ. ಅಂತೆ 1552 ಕೋಟಿ ರೂಪಾಯಿ ನೇರವಾಗಿ ಖಾತೆಗೆ ಜಮಾ ಮಾಡಲಾಗಿದೆ. ಗೃಹ ಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,48,617 ಫಲಾನುಭವಿಗಳು ಇದ್ದು, 200 ಯುನಿಟ್ ವಿದ್ಯುತ್ ಉಚಿತವಾಗಿ ನೀಡಲಾಗುತ್ತಿದ್ದು, 447 ಕೋಟಿ ರೂಪಾಯಿ ಬಳಸಲಾಗಿದೆ. ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ 13,13,355 ಜನರು ಫಲಾನುಭವಿಗಳಾಗಿದ್ದು, 80% ರಷ್ಟು ಜನರು ಒಳಗೊಂಡಿದ್ದಾರೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 11 ಕೋಟಿಗೂ ಹೆಚ್ಚು ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ. ಇದರಿಂದಾಗಿ ಸರ್ಕಾರ ಕೆಎಸ್‌ಆರ್‌ಸಿಗೆ 315 ಕೋಟಿ ರೂಪಾಯಿ ಪಾವತಿಸಿದೆ ಎಂದರು. ಜಿಲ್ಲೆಗೆ ಪಂಚ ಗ್ಯಾರಂಟಿಗಳಿಂದ 2500 ಕೋಟಿ ರೂಪಾಯಿ ದೊರೆತಂತಾಗಿದೆ ಹಾಗೂ 300 ಕೋಟಿ ರೂಪಾಯಿ ರೈತರಿಗೆ ಬೆಳೆ ಪರಿಹಾರ ನೀಡಲಾಗಿದೆ ಎಂದರು. ನಮ್ಮ ಸರ್ಕಾರ ಬಡವರ ಪರವಾದ ಸರ್ಕಾರವಾಗಿದೆ. ಬಡವರ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ. ಆದ್ದರಿಂದ ಇಂದು ನಮ್ಮ ರಾಜ್ಯದ ದೇಶದಲ್ಲೇ ಅತಿ ಹೆಚ್ಚು ತಲಾದಯ ಹೊಂದಿರುವ ರಾಜ್ಯ ಕೀರ್ತಿ ಪಡೆದಿದೆ ಎಂದರು. ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್. ಎಂ. ರೇವಣ್ಣ ಅವರು ಮಾತನಾಡಿ, ರಾಜ್ಯದಲ್ಲಿ ತಮ್ಮ ಸರ್ಕಾರ ಜನಪರ, ಬಡವರ ಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಮೊದಲಿನಿಂದಲೂ ತಮ್ಮ ಸರ್ಕಾರ ಎಲ್ಲಾ ಜನರು ಬದುಕು ಕಟ್ಟಿಕೊಳ್ಳವಂತೆ ಮಾಡಿದೆ. ಉಳ್ಳುವನೇ ಭೂಮಿಯ ಒಡೆಯ, 20 ಅಂಶಗಳ ಕಾರ್ಯಕ್ರಮ ಯಶಸ್ವಿಯಾಗಿ ಜಾರಿಗೆ, ಶಿಕ್ಷಣ, ಆರೋಗ್ಯ, ವಿಜ್ಞಾನ ತಂತ್ರಜ್ಞಾನದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದೆ ಎಂದರು. ಬಡವರ ಏಳಿಗೆಗೆ ಮತ್ತು ಮಹಿಳೆಯರ ಸಬಲೀಕರಣಕ್ಕೆ ಪಂಚ ಗ್ಯಾರಂಟಿಗಳು ದಾರಿಯಾಗಿವೆ. ವಾರ್ಷಿಕವಾಗಿ 51 ಸಾವಿರ ಕೋಟಿ ರೂಪಾಯಿ ಗ್ಯಾರಂಟಿಗಳ ಮೂಲಕ ನೇರವಾಗಿ ಜನರಿಗೆ ತಲುಪುತ್ತಿವೆ. ರಾಜ್ಯದಲ್ಲಿ 621 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡುವುದರ ಮೂಲಕ ಗಿನ್ನಿಸ್ ದಾಖಲೆ ಮಾಡಲಾಗಿದೆ. ಗ್ಯಾರಂಟಿಗಳಿಂದ ಜನರ ಜೀವನ ಮಟ್ಟ ಸುಧಾರಣೆಯಾಗುತ್ತಿದೆ ಎಂದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಮೈಸೂರು ವಿಭಾಗ) ಉಪಾಧ್ಯಕ್ಷರಾದ ಪುಷ್ಪ ಅಮರನಾಥ ಅವರು ಮಾತನಾಡಿ, ಬಡವರ ಬದುಕಿನ ಬದ್ಧತೆಗೆ ಮತ್ತು ಮಹಿಳಾ ಸಬಲೀಕರಣಕ್ಕೆ ಹಾಗೂ ರಾಜ್ಯದ ಅಭಿವೃದ್ಧಿಗೆ ಗ್ಯಾರಂಟಿಗಳು ಸಹಾಯಕವಾಗಿವೆ ಎಂದರು. ಹಿರಿಯ ಪತ್ರಕರ್ತರು ಹಾಗೂ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ವಾಸು ಹೆಚ್. ವಿ ಅವರು ಮಾತನಾಡಿ, ಪಂಚ ಗ್ಯಾರಂಟಿಗಳಿಂದ ಜನರ ತಲಾದಯ ಹೆಚ್ಚಾಗಿದೆ. ಜನರಲ್ಲಿ ಕೊಳ್ಳುವ ಶಕ್ತಿ ಹೆಚ್ಚಾಗಿದೆ. ಸಂವಿಧಾನದ ರಾಜ್ಯ ನೀರ್ದೆಶಕ ತತ್ವಗಳು ಮತ್ತು ಮೂಲಭೂತ ಹಕ್ಕುಗಳ ಅನುಗುಣವಾಗಿ ಬಡವರ ಪರವಾದ ಯೋಜನೆಗಳಾಗಿವೆ. ಆರ್ಥಿಕ ಸಮಾನತೆ ತರುವ ಉದ್ದೇಶ ಈ ಗ್ಯಾರಂಟಿ ಯೋಜನೆಗಳು ಹೊಂದಿವೆ ಎಂದರು. ಇದೇ ಸಂದರ್ಭದಲ್ಲಿ ಮಹಿಳಾ ಸ್ವಸಹಾಯ ಸಂಘಗಳಿಂದ ಆಯೋಜಿಸಲಾಗಿದ್ದ ಐದು ಗ್ಯಾರಂಟಿಗಳ ವಸ್ತುಗಳ ಮೇಳವನ್ನು ಸಚಿವರು ವಿಕ್ಷಿಸಿದವರು. ವನ್ಯ ಜೀವಿಗಳಿಂದ ಹಾನಿಗೊಳಗಾದವರಿಗೆ ಸಚಿವ ಈಶ್ವರ ಖಂಡ್ರೆ ಅವರು ಪರಿಹಾರದ ಚೆಕ್ ಅನ್ನು ವಿತರಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಕಲಬುರಗಿ ವಿಭಾಗ) ಉಪಾಧ್ಯಕ್ಷರಾದ ಎಸ್. ಆರ್ ಮೆಹರೂಜ್ ಖಾನ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಬೆಂಗಳೂರು-1 ವಿಭಾಗ) ಉಪಾಧ್ಯಕ್ಷರಾದ ಸೂರಜ್ ಹೆಗಡೆ, ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಬಿ. ಪಾಟೀಲ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆಯ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಗಿರೀಶ್ ಬದೋಲೆ, ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ ಸೇರಿದಂತೆ ಇತರೆ ಅಧಿಕಾರಿಗಳು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಉಪಾಧ್ಯಕ್ಷ, ತಾಲೂಕು ಅಧ್ಯಕ್ಷರು, ಸದಸ್ಯರ , ಪಂಚ ಗ್ಯಾರಂಟಿಗಳ ಫಲಾನುಭವಿಗಳು ಉಪಸ್ಥಿತರಿದ್ದರು.



# ವಿಶ್ವಮಾನವ ದಿನಾಚರಣೆ, ಸಾಹಿತ್ಯ ಲೋಕಕ್ಕೆ ಕುವೆಂಪು ಮಾದರಿ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಕರ್ನಾಟಕದಲ್ಲಿ ಕನ್ನಡ ಭಾಷೆಯನ್ನು ಸಾಹಿತ್ಯದ ಮೂಲಕ ವಿಶ್ವ ವಿಖ್ಯಾತಿ ಪಡೆಯುವಲ್ಲಿ ರಾಷ್ಟ್ರಕವಿ ಕುವೆಂಪುರವರ ಕೊಡುಗೆ ಬಹಳ ಮಹತ್ವವಾಗಿದೆ ಎಂದು ಉಪ್ಪನ್ಯಾಸಕ ದೇವಿಂದ್ರ ಕಿಲ್ಲನಕೇರಾ ಹೇಳಿದರು.

ನಗರದ ಲಿಂಗೇರಿ ಕೋನಪ್ಪ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ನಡೆದ ಜಿಲ್ಲಾ ಆಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಯಾದಗಿರಿ ವತಿಯಿಂದ ಆಯೋಜಿಸಿದ್ದ ವಿಶ್ವಮಾನವ ದಿನಾಚರಣೆ-ಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.



ರಾಷ್ಟ್ರಕವಿ ಕುವೆಂಪು ಅಂದರೆ ಕೂಪ್ಪಳ್ಳಿ ವೆಂಕಟಪ್ಪನ ಮಗ ಪುಟ್ಟಪ್ಪರವರು ಕನ್ನಡದ ಮಹಾನ್ ಕವಿ, ಕನ್ನಡದ ಅಗ್ರಮಾನ್ಯ ಕವಿ, ವಿಮರ್ಶಕರು, ಕಾದಂಬರಿಕಾರರು ನಾಟಕಕಾರರು, ಸಮಾಜದ ಚಿಂತಕರಾಗಿ ನಾಡಿಗೆ ಹೆಸರಾಗಿದ್ದಾರೆ, ಕನ್ನಡಕ್ಕೆ ಮೊಟ್ಟ ಮೊದಲ ಜ್ಞಾನಪೀಠ ಪ್ರಶಸ್ತಿ ಬಂದಿರುವುದು ಬಹಳ ಹೆಮ್ಮೆಯ ವಿಷಯ ಹಾಗೂ ಮೈಸೂರು ವಿಶ್ವವಿದ್ಯಾಲಯದ ಉಪಕುಲಪತಿಗಳಾಗಿ, ಕನ್ನಡ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸಿ, ಮಹಾಕಾವ್ಯಗಳನ್ನು ರಚಿಸಿ, ಅನೇಕ ಪ್ರಶಸ್ತಿಗಳನ್ನು ಸ್ವೀಕರಿಸಿ ವಿಶ್ವಮಾನವ ಎಂದು ಕಲ್ಪನೆ ಯನ್ನು ಸಾರಿದ್ದಾರೆ.

ಸರ್ವೋದಯ, ಸಮನ್ವಯ ಮತ್ತು ಪೂರ್ಣ ದೃಷ್ಟಿಯ ಬೆಳಕಿನಲ್ಲಿ ಮನುಷ್ಯನ ವ್ಯಕ್ತಿತ್ವದ ಮುಕ್ತ ಬೆಳವಣಿಗೆಯ ಕಾಳಜಿಯನ್ನು ಸ್ಪಷ್ಟವಾಗಿ ವ್ಯಕ್ತಪಡಿಸುತ್ತಾರೆ, ಕುವೆಂಪು ಅವರ ಚಿಂತನೆ ಅವರ ಕೊನೆಯ ವರ್ಷದಲ್ಲಿ ದೇಶ, ಭಾಷೆ, ಜಾತಿ, ಮತ, ಸಿದ್ಧಾಂತಗಳು ಹಾಗೂ ಸಾಹಿತ್ಯದ ಮೆರಗನ್ನು ಹೆಚ್ಚಿಸಿದರು. ವಿಶ್ವದೃಷ್ಟಿಯನ್ನು ಹೊಂದಿದ್ದು ಅದರ ಫಲವೇ ವಿಶ್ವಮಾನವ ಸಂದೇಶ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಉತ್ತರ ದೇವಿ ಮಠಪತಿ, ಪ್ರಾಂಶುಪಾಲ ಗುರಪ್ಪಚಾರ್ಯ, ಗುರುಪ್ರಸಾದ್ ವೈದ್ಯ, ದುರ್ಗಪ್ಪ ಪೂಜಾರಿ, ಹಳಳಪ್ಪ ಪೂಜಾರಿ, ಬಸವರಾಜ್ ಮಾನೆಗಾರ್, ಸುವರ್ಣ ಹೂಗಾರ, ಶಾಂತ ಸಜ್ಜನ್, ರಾಮಲಿಂಗಪ್ಪ ಮುಂತಾದ ಹಿರಿಯ ಸಾಹಿತಿಗಳು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕುವೆಂಪು ರವರ ಬಗ್ಗೆ ಸ್ವ ರಚಿತ ಕವನ ವಾಚಿಸಿ ಪ್ರಮಾಣ ಪತ್ರವನ್ನು ಸ್ವೀಕರಿಸಿದರು.

# ಅಪರಿಚಿತ ಮೃತನ

## ವಾರಸುದಾರರ ಪತ್ತೆಗೆ ಮನವಿ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಜಿಲ್ಲೆಯಲ್ಲಿ 2025ರ ಡಿಸೆಂಬರ್ 22 ರಂದು ಸುಮಾರು 70 ವರ್ಷ ಅಪರಿಚಿತ ಪುರುಷ ಯಾದಗಿರಿ ರೈಲ್ವೇ ನಿಲ್ದಾಣದ ವೇದಿಕೆ ನಂ.1ರಲ್ಲಿ ಅಸ್ವಸ್ಥಗೊಂಡಿದರಿಂದ ಯಾದಗಿರಿ ಯಿಮ್ಸ್ ಆಸ್ಪತ್ರೆ ದಾಖಲಿಸಿದ್ದು, ಚಿಕಿತ್ಸೆ ಸ್ಪಂದಿಸದೇ ಯಾವುದೂ ವಯೋಸಹಜ ಖಾಯಿಲೆಯಿಂದ ಬಳಲಿ ಸ್ವಾಭಾವಿಕವಾಗಿ 2025ರ ಡಿಸೆಂಬರ್ 26 ರಂದು ಬೆಳಿಗ್ಗೆ 7.10 ಗಂಟೆಗೆ ಮೃತಪಟ್ಟ ಹಿನ್ನಲೆ ರೈಲ್ವೇ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್‌ಎಸ್ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆದಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆ ಪೊಲೀಸ್ ಉಪ ನಿರೀಕ್ಷಕರು ಅವರು ತಿಳಿಸಿದ್ದಾರೆ.

ಅಪರಿಚಿತ ಮೃತ ಪುರುಷನ ಚಹರೆ ಪಟ್ಟಿ : ಎತ್ತರ ಸುಮಾರು 5 ಫೀಟ್ 4 ಇಂಚು, ಉದ್ದ ಮುಖ, ಉದ್ದನೆಯ ಮೂಗು, ಕಪ್ಪು ಕಣ್ಣುಗಳು, ತಲೆಯಲ್ಲಿ 2 ಇಂಚು ಬಿಳಿಕೂದಲು, 2 ಇಂಚು ಬಳಿ ಗಡ್ಡ ಮೀಸೆ ಬಿಟ್ಟಿರುತ್ತಾನೆ, ಬಡುಕಲು ಶರೀರ ಹೊಂದಿದೆ.

ಬಟ್ಟೆಬರೆ : ಒಂದು ನೀಲಿ ಬಣ್ಣ ಗೆರೆಯುಳ್ಳ ಮಾಸಿದ ಬಿಳಿಯ ಶರ್ಟ್, ಒಂದು ಕಪ್ಪು ಬಣ್ಣದ ಪ್ಯಾಂಟು, ಒಂದು ಕೆಂಪು ಮತ್ತು ನೀಲಿ ಬಣ್ಣ ಮಿಶ್ರಿತ ಉಡುದಾರ, ಕೈಯಲ್ಲಿ ಒಂದು ಹಳೆಯದಾರ ಧರಿಸಿದ್ದಾನೆ. ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ, ಈ ಮೃತನ ವಾರಸುದಾರರ ಪತ್ತೆ ಹಾಗೂ ಪಿ.ಎಂ.ಇ ಸಲುವಾಗಿ ಮೃತದೇಹಗಳನ್ನು ಯಾದಗಿರಿ ಯಿಮ್ಸ್ ಜಿಲ್ಲಾ ಆಸ್ಪತ್ರೆಯ ಶೀತಲಶವಗಾರದಲ್ಲಿಟ್ಟಿರುತ್ತದೆ. ಈ ಅಪರಿಚಿತ ಮೃತರ ವಾರಸುದಾರರ ಪತ್ತೆ ಕುರಿತು ಸಾರ್ವಜನಿಕರಲ್ಲಿ ಸಮೂಹ ಮಾಧ್ಯಮಗಳಲ್ಲಿ, ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಕೋರಿದ್ದು, ಮೃತನ ವಾರಸುದಾರರ ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂ.ಸಂ.08532231716, ಮೊ.ನಂ.9480802111, ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ.080 22871291ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದಾಸಿ ಪುನರ್ವಸತಿ ಯೋಜನೆಯಡಿ : ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

2025-26ನೇ ಸಾಲಿನ ದೇವದಾಸಿ ಪುನರ್ವಸತಿ ಯೋಜನೆಯಡಿ ಖಾಲಿ ಇರುವ ಯೋಜನಾಧಿಕಾರಿಗಳ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ತಿಪ್ಪಣ್ಣ ಸಿರಸಗಿ ಅವರು ತಿಳಿಸಿದ್ದಾರೆ. ದೇವದಾಸಿ ಪುನರ್ವಸತಿ ಯೋಜನಾ ಕಛೇರಿಯಲ್ಲಿ ಖಾಲಿ ಇರುವ ಯೋಜನಾಧಿಕಾರಿ ಹುದ್ದೆ ಭರ್ತಿಗಾಗಿ ಅರ್ಹ ಅರ್ಜಿದಾರರಿಂದ ಅರ್ಜಿ ಆಹ್ವಾನಿಸಿದೆ. ಯೋಜನಾಧಿಕಾರಿಗಳು ಹುದ್ದೆ ಸಂಖ್ಯೆ 1, ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಎಮ್‌ಎಸ್‌ಡಬ್ಲೂ ಎಮ್‌ಎ, ಎಮ್‌ಎ ಇನ್ ಸೋಶಿಯಲಜಿ, ಎಮ್‌ಎಸ್‌ಸಿ ಇನ್ ಸೈಕಾಲಜಿ ಪದವಿಯನ್ನು ಹೊಂದಿದ್ದು, ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನವನ್ನು ಹೊಂದಿರಬೇಕು, 65 ವರ್ಷ ಒಳಗಿರಬೇಕು, ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಆದ್ಯತೆ ನೀಡಲಾಗುವುದು.

ಹುದ್ದೆಗೆ ಅರ್ಜಿ ಸಲ್ಲಿಸಲು ಆಸಕ್ತರು ಅರ್ಜಿಗಳನ್ನು ಪಡೆದು ತಮ್ಮ ನಿಗದಿತ ವಿದ್ಯಾರ್ಹತೆಯ ದಾಖಲಾತಿಗಳು ಹಾಗೂ ಅನುಭವದ ಮೂಲ ಪ್ರಮಾಣ ಪತ್ರಗಳೊಂದಿಗೆ ಉಪ ನಿರ್ದೇಶಕರು ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೋಣೆ ಸಂಖ್ಯೆ ಸಿ-17, ಒಂದನೇ ಮಹಡಿ, ಜಿಲ್ಲಾಡಳಿತ ಭವನ, ಯಾದಗಿರಿ ಅಥವಾ ದೇವದಾಸಿ ಪುನರ್ವಸತಿ ಯೋಜನೆಯ ಜಿಲ್ಲಾ ಕಛೇರಿ, ಮನೆ.ನಂ.43 ಸಾರ್ವಜನಿಕ ಉದ್ಯಾನವನದ ಹತ್ತಿರ ಗಾಂಧಿನಗರ ಯಾದಗಿರಿ 2026ರ ಜನವರಿ 12ರ ಒಳಗೆ ಕಛೇರಿಯ ಸಮಯದಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೋಣೆ ಸಂಖ್ಯೆ ಸಿ-17, ಒಂದನೇ ಮಹಡಿ, ಜಿಲ್ಲಾಡಳಿತ ಭವನ, ಯಾದಗಿರಿ ಅಥವಾ ದೇವದಾಸಿ ಪುನರ್ವಸತಿ ಯೋಜನೆಯ ಜಿಲ್ಲಾ ಕಛೇರಿ, ಮನೆ.ನಂ.43 ಸಾರ್ವಜನಿಕ ಉದ್ಯಾನವನದ ಹತ್ತಿರ ಗಾಂಧಿನಗರ ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಣ ಅಭ್ಯಾಸ ವಿದ್ಯಾರ್ಥಿ ಜೀವನಕ್ಕೆ ಪ್ರಮುಖ ಘಟ್ಟ : ಪರಪ್ಪ ಅಂಗಡಿ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರ :**

ತಾಲೂಕಿನ ಮಂಡಲಗಿರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 2003 ಮತ್ತು 4ನೇ ಸಾಲಿನ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಗುರುವಂದನ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮವನ್ನು ಉದ್ದೇಶಿಸಿ ಶಿವಾನಂದ ಶಾನಭೋಗ ಮಾತನಾಡುತ್ತಾ ಪ್ರತಿಯೊಬ್ಬರ ಜೀವನದಲ್ಲಿಯೂ ಗುರುವಿನ ಸ್ಥಾನ ಅತ್ಯಮೂಲ್ಯವಾದದ್ದು ಗುರುವಿನ ಮಾರ್ಗದರ್ಶನದಲ್ಲಿ ನಡೆದಾಗ ಯಶಸ್ಸು ಶತಸಿದ್ಧ ಎಂದು ಶಿವಾನಂದ ಶಾನುಭೋಗ ಹೇಳಿದರು. ಇಂದಿನ ನಮ್ಮ ಯಶಸ್ವಿ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಿದ್ದು ನಮ್ಮ ಶಿಕ್ಷಕ ವೃಂದ. ಶಿಕ್ಷಕರು ಹಾಕಿಕೊಟ್ಟ ಮಾರ್ಗದಲ್ಲಿ ನಡೆದು ಯಶಸ್ವಿ ಜೀವನವನ್ನು ಕಂಡುಕೊಂಡಿದ್ದೇವೆ ಇಂತಹ ಶಿಕ್ಷಕರ ಸವಿ ನೆನಪಿಗಾಗಿ ಗುರು ಒಂದನೆಯನ್ನು ಸಲ್ಲಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇದರ ಜೊತೆಗೆ ಎಲ್ಲಾ ಸ್ನೇಹಿತರ ಸಮ್ಮಿಲನ ಭಾವುಕ ವಾತಾವರಣವನ್ನು ನಿರ್ಮಿಸಿದೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ಪರಪ್ಪ ಅಂಗಡಿ ಮಾತನಾಡುತ್ತ ಗ್ರಾಮದ ವೀರಭದ್ರದೇವಾಲಯದಲ್ಲಿ ನನ್ನ ಶಿಕ್ಷಣ ಆರಂಭವಾಗಿದ್ದು ಗ್ರಾಮದಲ್ಲಿ ಪ್ರೀತಿ ಜೀವನ ಪ್ರಾರಂಭಿಸಿ ನಿವೃತ್ತಗೊಂಡಿದ್ದೇನೆ ಅಂದಿನ ಕಾಲದ ಕಠಿಣ ಶಿಕ್ಷಣ ಅಭ್ಯಾಸ ವಿದ್ಯಾರ್ಥಿ ಜೀವನಕ್ಕೆ ಪ್ರಮುಖ ಪಾತ್ರವಾಗಿದ್ದು ಅವರ ಯಶಸ್ಸಿಗೆ ಕಾರಣವಾಗಿದೆ ಎಂದು ಹೇಳಿದರು. ಬಹಳ ದಿನಗಳ ನಂತರ ಸ್ನೇಹಿತರೆಲ್ಲ ಸಮ್ಮೇಳನಗೊಂಡಿದ್ದು ತಮ್ಮ ವಿದ್ಯಾರ್ಥಿ ಜೀವನದ ಪ್ರಮುಖ ಘಟನೆಗಳನ್ನು ನೆನಪು ಪುನಃ ವಿದ್ಯಾರ್ಥಿಗಳಂತೆ ಕಂಡು ಬಂದು ಸಂತಸದ ಬುತ್ತಿಯೊಂದಿಗೆ ಮರಳಿದರು. Comfortable ಹಳೆಯ ಶಿಕ್ಷಕರಾದ ಸೋಮಪ್ಪ ಶಾನಭೋಗ, ಶಿವಪ್ರಸಾದ ಹಿರೇಮಠ, ಶಿವಪ್ಪ ಕರಮುಡಿ, ದೊಡ್ಡಪ್ಪ ತಳವಾರ, ಬಾಬು ಸಾಹೇಬ್ ಗುಡಿಹಿಂದಲ, ಮಹೇಶ್ ಬರಕೆರ, ಶರಣಪ್ಪ ಕಳ್ಳಿಮನಿ, ಶಂಕ್ರಪ್ಪ ವನಹಳ್ಳಿ, ನೀಲಮ್ಮ ಅಂಗಡಿ, ಮಲ್ಲಮ್ಮ ಸಜ್ಜನ್ ಹಾಗೂ ಹಳೆಯ ವಿದ್ಯಾರ್ಥಿಗಳು ಗ್ರಾಮದ ಯುವಕರು ಇನ್ನಿತರರು ಪಾಲ್ಗೊಂಡಿದ್ದರು.

# ಸಹಸ್ರ ಬಿಲ್ವಾರ್ಚನೆ ಪೂಜೆ ಧಾರ್ಮಿಕ ಸಭಾ ಕಾರ್ಯಕ್ರಮ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**

ತಾಲೂಕಿನ ಕಿನ್ನಾಳ ವಲಯದಲ್ಲಿ ಶ್ರೀ ಮಂಜುನಾಥ ಸ್ವಾಮಿ ಸಹಸ್ರ ಬಿಲ್ವಾರ್ಚನೆ ಪೂಜೆ ಮತ್ತು ಧಾರ್ಮಿಕ ಸಭಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ಪೂಜ್ಯಶ್ರೀ ಚೈತನ್ಯನಂದ ಸ್ವಾಮೀಜಿ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮ ಕೊಪ್ಪಳ ಸರ್ವಭಕ್ತಾದಿಗಳನ್ನು ಕುರಿತು ಆಶೀರ್ವಚನವನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಪತಿ ಶ್ವೇತ ಆರ್ ಡಂಬಳ ಇವರು ವಹಿಸಿದ್ದರು

ಕಾರ್ಯಕ್ರಮದ ಉದ್ಘಾಟನೆಯನ್ನು ಚಂದ್ರಶೇಖರ್. ಜೆ ಪ್ರಾದೇಶಿಕ ನಿರ್ದೇಶಕರು ಕಲ್ಯಾಣ ಕರ್ನಾಟಕ ಪ್ರಾದೇಶಿಕ ವಿಭಾಗ ಕೊಪ್ಪಳ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ , ಬಿ.ಸಿ ಟ್ರಸ್ಟ್(ರಿ) ಕೊಪ್ಪಳ ಕಾರ್ಯಕ್ರಮದ ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಇವರು ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುವುದರಿಂದ ಪ್ರಯೋಜನಗಳು ಮತ್ತು ಮಹತ್ವಗಳನ್ನು ತಿಳಿಸಿದರು.

ಅಲ್ಲದೆ ಪೂಜ್ಯರು ಕಂಡಿರುವಂತಹ ಕನಸಿನ ಕಾರ್ಯಕ್ರಮಗಳ ಬಗ್ಗೆ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುವುದರಿಂದ ಮುಂದಿನ ಪೀಳಿಗೆಗೆ ಬಹಳ ಉಪಯುಕ್ತವಾಗಿದೆ ಎಂದು ಕಾರ್ಯಕ್ರಮದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪ್ರಕಾಶ್ ರಾವ್ ಜಿಲ್ಲಾ ನಿರ್ದೇಶಕರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೊಪ್ಪಳ ಜಗದೀಶ್ ಕೆ ಎಚ್ ಯೋಜನಾಧಿಕಾರಿಗಳು ಕೊಪ್ಪಳ ಪಶ್ಚಿಮ ಮತ್ತು ಹಾಲಪ್ಪ ಬನ್ನಿಕೊಪ್ಪ ಮಾಜಿ ಸೈನಿಕರು, ಬಸವರಾಜ್ ಚಿಲವಾಡಗಿ, ಮೌನೇಶ್ ಕಮ್ಮಾರ್, ಮಂಗಳಪ್ಪ ಎನ್ ಮಂಗಳೂರು, ಮಹೇಶ್ ವಾಲ್ಮೀಕಿ, ಪರಶುರಾಮ್ ಗಾಳಿ, ಅಶೋಕ್ ಚಿತ್ರಗಾರ, ಹನುಮಪ್ಪ ಸಂಗಾಪುರ, ವೀರನಗೌಡ ಮಾಲಿ ಪಾಟೀಲ್, ಹನುಮಂತಪ್ಪ ಮ ಹವಣ್ಣಿ, ಮಹದೇವಸ್ವಾಮಿ ಹಿರೇಮಠ, ವಿರೂಪಾಕ್ಷಪ್ಪ ಹುದ್ದಾರ, ವೆಂಕಟರಾವ್ ದೇಸಾಯಿ, ರಮೇಶ್ ಘೋರ್ಪಡೆ, ದುರುಗಪ್ಪ ರಾ ಡಂಬರ, ಪ್ರಶಾಂತ ರಾ ಕುಲಕರ್ಣಿ, ಪುಷ್ಪ ಹನುಮಂತಪ್ಪ ಕೋವಿ, ಕರಿಯಮ್ಮ, ಶಕುಂತಲಾ, ಪೂರ್ಣಿಮಾ ಮಂಜುನಾಥ್, ಮೇಘ ಕಾಳಪ್ಪ, ನಾಗಮ್ಮ, ಗೌರಿ ಬಸವರಾಜ್ ಎತ್ತಿನ ಮನೆ , ಚಂದ್ರಪ್ಪ ಮಿಸಿ, ಪ್ರಗತಿ ಬಂದು ಸ್ವಸಹಾಯ ಸಂಘದ ಸದಸ್ಯರು ಸೇವಾಪ್ರತಿನಿಧಿಗಳು ಊರಿನ ಹಿರಿಯ ಮುಖಂಡರು ಮತ್ತಿತರರು ಭಾಗವಹಿಸಿದ್ದರು,

# ಸಹನಾ ಶಾಲೆಯಲ್ಲಿ ರಾಷ್ಟ್ರಕವಿ

## ಕುವೆಂಪುರವರ 120 ನೇ ಜನ್ಮದಿನಾಚರಣೆ.

• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು**

ತಾಲೂಕಿನ:ನಾಡು ಕಂಡ ಸರ್ವ ಶ್ರೇಷ್ಠ, ರಾಷ್ಟ್ರಕವಿ, ಜಗದಕವಿ ಕುವೆಂಪು ಅವರ 120ನೇ ಜನ್ಮದಿನಾಚರಣೆಯನ್ನು,ಮುದುಗಲ್ ಪಟ್ಟಣದ ಕಿಲ್ಲಾದಲ್ಲಿರುವ ಸಹನಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಇಂದು ಹಮ್ಮಿಕೊಳ್ಳಲಾಯಿತು.



ಕುವೆಂಪುರವರ ಭಾವಚಿತ್ರಕ್ಕೆ,ಶಾಲೆ ಶಿಕ್ಷಕಿಯರಾದ ಕವಿತಾ ಮತ್ತು ಪ್ರಿಯಾಂಕ ಪೂಜೆ ಸಲ್ಲಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಗುರುಗಳಾದ ಆದಪ್ಪ ಅವರು ಮಾತನಾಡಿ ಪರಿಸರ, ಕೃಷಿ, ಮಹಿಳೆ ಮೊದಲಾದ ಹಲವು ಆಯಾಮಗಳನ್ನು ಒಳಗೊಂಡ ಕಾದಂಬರಿ, ನಾಟಕ, ಶಿಶು ಸಾಹಿತ್ಯ, ಕವನ ಸಂಕಲನ ಹೇಗೆ ಸಾಹಿತ್ಯದ ಎಲ್ಲಾ ನೆಲೆಗಳನ್ನು ಕುವೆಂಪು ರವರ ಕೃತಿಗಳಲ್ಲಿ ಕಾಣಬಹುದು ಎಂದು ತಿಳಿಸಿದರು. ಶಾಲೆಯ ವಿದ್ಯಾರ್ಥಿನಿಯರಾದ ಸಹನಾ ಮತ್ತು ಸಿಂಚನ ಮಾತನಾಡಿ, ಕುವೆಂಪುರವರು ಮಹಾನ್ ಚೇತನ ಮತ್ತು ಕನ್ನಡಕ್ಕೆ "ಜ್ಞಾನಪೀಠ ಪ್ರಶಸ್ತಿ "ತಂದುಕೊಟ್ಟ ರಾಷ್ಟ್ರಕವಿ ಎಂದು ತಮ್ಮ ಭಾಷಣದಲ್ಲಿ ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಂ-ಯರಾದ ಆಯಿಷಾ ಬೇಗಮ್, ನಿಲುಬಾಯಿ, ಅಸ್ಮ, ಹೀನಾ ಬೇಗಂ ಉಪಸ್ಥಿತರಿದ್ದರು ಮತ್ತು ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕಿಯಾದ ಕಾವೇರಿ ಅವರು ನಿರೂಪಿಸಿದರು

# ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದಲ್ಲಿ 2026ರ ಜನವರಿ 1 ರಿಂದ 7ರ ವರೆಗೆ ಜರುಗುವ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ನಿಯೋಜಿಸಿ, ಕಾರ್ಯ ಹಂಚಿಕೆ ಮಾಡಿ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶಿಸಿದ್ದಾರೆ.



ಗವಿಸಿದ್ದೇಶ್ವರ ಸಂಸ್ಥಾನ, ಶ್ರೀಗವಿಮಠದಿಂದ ಜ.1 ರಿಂದ 7ರ ವರೆಗೆ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ-2026ರ ನಿಮಿತ್ತ ವಿವಿಧ ಕಾರ್ಯಕ್ರಮಗಳು ಜರುಗಲಿದ್ದು, ಜ. 5ರ ಸೋಮವಾರದಂದು ಮಹಾ ರಥೋತ್ಸವ ಜರುಗಲಿದೆ. ಈ ಸಂಬಂಧ ಪೂರ್ವಭಾವಿ ಸಭೆಯನ್ನು ಕೈಗೊಂಡು ವಿವಿಧ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ದೇಶದ ಹಾಗೂ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸುವ ಸಾರ್ವಜನಿಕರು, ಭಕ್ತಾಧಿಗಳಿಗೆ ಮೂಲಭೂತ ಸೌಕರ್ಯ, ಆಹಾರ ವ್ಯವಸ್ಥೆ, ಜನ ಸಂದಣಿ ನಿರ್ವಹಣೆ ಹಾಗೂ ಇನ್ನಿತರ ಕಾರ್ಯಗಳಿಗಾಗಿ ಪೊಲೀಸ್ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಜೆಸ್ಕಾಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಅಗ್ನಿಶಾಮಕ ಇಲಾಖೆ, ಜಿಲ್ಲಾ ಆಹಾರ ಸುರಕ್ಷತಾ ಇಲಾಖೆ, ಲೋಕೋಪಯೋಗಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ.

ನಿಯೋಜಿತ ಅಧಿಕಾರಿಗಳು ಸಮನ್ವಯ ಸಾಧಿಸಿ ಸಾರ್ವಜನಿಕರಿಗೆ, ಭಕ್ತಾಧಿಗಳಿಗೆ ಯಾವುದೇ ತರಹದ ತೊಂದರೆ ಅಥವಾ ಅನಾನುಕೂಲವಾಗದಂತೆ ಕರ್ತವ್ಯ ನಿರ್ವಹಿಸಬೇಕು. ನಿಯೋಜಿತ ಅಧಿಕಾರಿಗಳು ಕರ್ತವ್ಯ ನಿರ್ವಹಣೆಯಲ್ಲಿ ಯಾವುದೇ ತರಹದ ಲೋಪ ಎಸಗಿದಲ್ಲಿ ಅಥವಾ ನಿರ್ಲಕ್ಷ್ಯತನ ತೋರಿದಲ್ಲಿ ಅವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಭವಿತವ್ಯಕ್ಕೆ ಶಿಕ್ಷಣ ತೀರಾ ಅಗತ್ಯ : ಡಿ.ಎನ್. ನಾಯಕ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ :**

ಇಲ್ಲಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಅಗ್ರಗೋಣ ಹಾಗೂ ಸರಕಾರಿ ಪ್ರೌಢಶಾಲೆ ಅಗ್ರಗೋಣ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಶಾಲಾ ವಾರ್ಷಿಕ ಸ್ನೇಹ ಸಮ್ಮೇಳನವು ಅತ್ಯಂತ ಯಶಸ್ವಿಯಾಗಿ ಜರುಗಿತು.

ಸಮ್ಮೇಳನವನ್ನು ಉದ್ಘಾಟಿಸಿದ ಅಂಬಿಕಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ಡಿ.ಎನ್. ನಾಯಕ ಅವರು ವಾರ್ಷಿಕ ಸ್ನೇಹ ಸಮ್ಮೇಳನದ ಸಂಘಟನೆಯನ್ನು ಮುಕ್ತ ಕಂಠದಿಂದ ಶ್ಲಾಘಿಸಿದರು. ಮುಂದುವರೆದು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಶಿಕ್ಷಣ ತೀರಾ ಅಗತ್ಯವೆಂದರು. ದೂರದಿಂದ ಬರುವ ಪ್ರೌಢಶಾಲಾ ವಿದ್ಯಾರ್ಥಿಗಳ ಸಾರಿಗೆ ವೆಚ್ಚಕ್ಕೆ ಬರುವ ಶೈಕ್ಷಣಿಕ ವರ್ಷದಲ್ಲಿ 25,000 ನೀಡುವುದಾಗಿ ಘೋಷಣೆ ಮಾಡಿದರು.

ಹಸ್ತಪ್ರತಿಯನ್ನು ಉದ್ಘಾಟನೆ ಮಾಡಿದ ಗ್ರಾ.ಪಂ. ಉಪಾಧ್ಯಕ್ಷ ಮಹಮ್ಮದ್ ಯುಸೂಫ್ ಡಾಂಗಿ ಮಾತನಾಡಿ, ಮಕ್ಕಳ ಅಂತರಂಗದಲ್ಲಿ ಅರಳಿದ ಭಾವನೆಗಳು ಸುಂದರ ರೂಪ ಪಡೆದು ಕಥೆ, ಕವನ, ಚಿತ್ರಕಲೆಗಳಾಗಿ ಹಸ್ತಪ್ರತಿ ಮೂಡಿಬಂದಿದೆ. ನಮ್ಮ ಎರಡೂ ಶಾಲೆಗಳು ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಸಂತೋಷದ ಸಂಗತಿ ಎಂದರು.

ಗ್ರಾ.ಪಂ. ಅಧ್ಯಕ್ಷೆ ಚಂಪಾ ರಮಾನಂದ ನಾಯಕ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ನಿರಂತರ ಪ್ರಯತ್ನ ಶ್ರದ್ಧೆ, ವಿಧೇಯತೆ, ಸಮಯ ಪಾಲನೆ, ಅಧ್ಯಯನ ಇವುಗಳಿಂದ ಪ್ರತಿಭಾವಂತ ವಿದ್ಯಾರ್ಥಿ ರೂಪುಗೊಳ್ಳುವುದಕ್ಕೆ ಸಾಧ್ಯ ಎಂದರು. ಮುಖ್ಯ ಅತಿಥಿಗಳಾದ ಜ್ಯೋತಿ ರಾಘವೇಂದ್ರ ಆಗೇರ, ಎಸ್‌ಡಿಎಂಸಿ ಅಧ್ಯಕ್ಷ ರಾಮಚಂದ್ರ ಮಾಸ್ತಿಮನೆ, ಲತಾ ಹರಿಕಾಂತ ಶುಭ ಕೋರಿದರು.

ಈ ಸಂದರ್ಭದಲ್ಲಿ ಶಾಲೆಯ ಪೂರ್ವ ವಿದ್ಯಾರ್ಥಿ ಹಾಗೂ ದಿ ಪೊಪ್ಯುಲರ್ ನ್ಯೂ ಇಂಗ್ಲೀಷ್ ಚೆಂಡಿಯಾದ ದೈಹಿಕ ಶಿಕ್ಷಣ ಶಿಕ್ಷಕ ತಿಮ್ಮಪ್ಪ ಪಿ. ನಾಯಕ ಇವರಿಗೆ 2025-26ನೇ ಸಾಲಿನ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಬಂದ ನಿಮಿತ್ತ ಇವರನ್ನು ಸತ್ಕರಿಸಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ತಿಮ್ಮಪ್ಪ ಅವರು ತಾನು ಕಲಿತ ಶಾಲೆ ಮತ್ತು ಊರ ಜನರ ಮುಂದೆ ಆ ಈ ಸನ್ಮಾನ ಖುಷಿ ತಂದಿದೆ ಎಂದರು. ಮುಂದಿನ ಶೈಕ್ಷಣಿಕ ವರ್ಷದಿಂದ ಪ್ರಾಥಮಿಕ ಹಾಗೂ ಪ್ರೌಢವಿಭಾಗದಲ್ಲಿ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿದ ಮಗುವಿಗೆ ಬಹುಮಾನ ನೀಡಲು ತಲಾ 5,000ದಂತೆ ಮುದ್ಧತ್ತು ಠೇವಣಿ ಇಡುವುದಾಗಿ ಘೋಷಿಸಿದರು.

ಮುಖ್ಯಾಧ್ಯಾಪಕ ದೇವರಾಯ ನಾಯಕ ಸ್ವಾಗತಿಸಿದರು. ಅಬ್ದುಲ್ ಸತ್ತಾರ್ ಪ್ರಾಥಮಿಕ, ಶಿಲ್ಪಾ ನಾಯಕ ಪ್ರೌಢಶಾಲಾ ವಿಭಾಗದ ವರದಿಯನ್ನು ವಾಚಿಸಿದರು. ನಜ್ಮಾ ಶೇಖ್, ಪ್ರಫುಲ್‌ಚಂದ್ರ ನಾಯಕ, ವೆಂಕಟೇಶ ನಾಯಕ, ಅತಿಥಿ ಶಿಕ್ಷಕರಾದ ಗೀತಾ ಗೌಡ ಹಾಗೂ ತೇಜಸ್ವಿನಿ ಗೋಳಿಕರ ಬಹುಮಾನ ವಿತರಣಾ ಯಾದಿ ಪ್ರಚುರ ಪಡಿಸಿದರು. ಪ್ರಾರ್ಥನಾ ನೃತ್ಯವನ್ನು ಯಶಸ್ವಿ ಸಂಗಡಿಗರು ಮತ್ತು ಸ್ವಾಗತ ನೃತ್ಯವನ್ನು ನಾಗೇಶ್ವರಿ ಸಂಗಡಿಗರು ಮಾಡಿದರು. ನದೀಮ್ ಶೇಖ್ ಅವರು ನಿರೂಪಿಸಿದರು. ಶಿಕ್ಷಕ ರಾಜೇಶ ನಾಯಕ ವಂದಿಸಿದರು.



ತಿಮ್ಮಪ್ಪ ಪಿ. ನಾಯಕ ಅಗ್ರಗೋಣ ಅವರು ಶ್ರೇಷ್ಠ ದೈಹಿಕ ಶಿಕ್ಷಣ ಶಿಕ್ಷಕರಾಗಿ ಜಿಲ್ಲೆಯಾದ್ಯಂತ ಗುರುತಿಸಿಕೊಂಡವರು. ತಾವು ಕರ್ತವ್ಯ ನಿರ್ವಹಿಸುತ್ತಿರುವ ಶಾಲೆಯಲ್ಲಿನ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ರಾಜ್ಯಮಟ್ಟದವರೆಗೆ ಸಾಧನೆ ಮಾಡುವಲ್ಲಿ ಹಗಲಿರುಳು ಶ್ರಮಿಸುತ್ತಾ ವಿದ್ಯಾರ್ಥಿಗಳ ನೆಚ್ಚಿನ ಶಿಕ್ಷಕರಾಗಿ ಗುರುತಿಸಿಕೊಂಡಿದ್ದಾರೆ. ಉತ್ತಮ ವಾಲಿಬಾಲ್ ಆಟಗಾರರಾದ ಇವರು ವಿಶ್ವವಿದ್ಯಾಲಯ ಮಟ್ಟದ ಗೌರವಕ್ಕೆ ಪಾತ್ರರಾಗಿರುವುದು ಶ್ಲಾಘನೀಯ ಪ್ರವೃತ್ತಿಯಲ್ಲಿ ವಾಲಿಬಾಲ್ ಆಟದ ಕೋಚ್ ಹಾಗೂ ನಿರ್ಣಾಯಕರಾಗಿ ಬಹುಬೇಡಿಕೆಯ ವ್ಯಕ್ತಿಯಾಗಿರುತ್ತಾರೆ. ಶಿಸ್ತು, ಸರಳತೆ, ವಿಧೇಯತೆ, ಕರ್ತವ್ಯ ಬದ್ಧತೆ, ದಕ್ಷತೆಗಳೆಂಬ ಪಂಚಕಗಳೆಂಬ ರೂಪುಗೊಂಡ ಇವರಿಗೆ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಬಂದಿರುವುದು ನಮ್ಮ ಶಾಲೆಗೆ ಹೆಮ್ಮೆ ಪಡುವ ಸಂಗತಿಯಾಗಿದೆ.

# ನೇಕಾರರ ಪ್ಯಾಕೇಜ್ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ನೇಕಾರರ ಪ್ಯಾಕೇಜ್ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ ಘಟಕಗಳ ಸ್ಥಾಪನೆಗೆ ಸಹಾಯಧನ ಯೋಜನೆಯಡಿ ಹೊಸ ಘಟಕಗಳ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕರು ಹೈದರಖಾನ್ ಅವರು ತಿಳಿಸಿದ್ದಾರೆ.

ಕೈಮಗ್ಗ ಮತ್ತು ಜವಳಿ ಇಲಾಖೆದಿಂದ ನೇಕಾರರ ಪ್ಯಾಕೇಜ್ ಯೋಜನೆ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ ಘಟಕಗಳ ಸ್ಥಾಪನೆಗೆ ಸಹಾಯಧನ ಯೋಜನೆಯಡಿ ಹೊಸ ಘಟಕಗಳ ಸ್ಥಾಪನೆಗೆ ಆಸಕ್ತಿಯುಳ್ಳ ಅರ್ಹ ಉದ್ದಿಮೆದಾರರಿಂದ 2026ರ ಜನವರಿ 23ರ ಒಳಗೆ ಅರ್ಜಿ ಸಲ್ಲಿಸಬೇಕು. ಈ ಯೋಜನೆಯಡಿ ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕೈಮಗ್ಗ

# ಜ.1 ರಂದು ಭೀಮ್ ಕೊರೆಗಾವ್ ವಿಜಯೋತ್ಸವದ ಅಂಗವಾಗಿ ಮೆರವಣಿಗೆ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಭೀಮ ಕೊರೆಗಾವ್ ಯೂಥ್ ಸಂಘ ನೇತಾಜಿ ನಗರ ರಾಯಚೂರು ಇವರ ವತಿಯಿಂದ ಭೀಮ್ ಕೊರೆಗಾವ್ 208ನೇ ವಿಜಯೋತ್ಸವವನ್ನು ಜ.01 ರಂದು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಭೀಮ ಕೊರೆಗಾವ್ ಯೂಥ್ ಸಂಘದ ಸಂಚಾಲಕ ಪರಶುರಾಮ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಸಂಜೆ 5.00 ಗಂಟೆಗೆ ನೇತಾಜಿ ನಗರದಿಂದ ಭವ್ಯ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ. ಮೆರವಣಿಗೆ ನೇತಾಜಿ ನಗರದಿಂದ ಆರಂಭವಾಗಿ ಶೆಟ್ಟಿಭಾವಿ ವೃತ್ತ, ಸರಾಫ್ ಬಜಾರ್, ತೀನ್ ಖಂದೀಲ್, ಭಗತ್ ಸಿಂಗ್ ವೃತ್ತ, ಜಾಕೀರ್ ಹುಸೇನ್ ವೃತ್ತ, ಕೇಂದ್ರ ಬಸ್ ನಿಲ್ದಾಣ ಮಾರ್ಗವಾಗಿ ಸಾಗುತ್ತಾ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ವೃತ್ತ ತಲುಪಲಿದೆ. ಅಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ವಿಜಯೋತ್ಸವವನ್ನು ಆಚರಿಸಲಾಗುವುದು.

ಭೀಮ್ ಕೊರೆಗಾವ್ ವಿಜಯೋತ್ಸವವು ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಂವಿಧಾನಾತ್ಮಕ ಮೌಲ್ಯಗಳ ಸಂಕೇತವಾಗಿದ್ದು, ಈ ಕಾರ್ಯಕ್ರಮದಲ್ಲಿ ನಗರ ಹಾಗೂ ಸುತ್ತಮುತ್ತಲ ಪ್ರದೇಶಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು, ಪ್ರಗತಿಪರ ಸಂಘಟನೆಗಳು ಹಾಗೂ ಯುವಜನರು ಸಹಕಾರ ನೀಡಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಸತೀಶ್, ಸುಭಾಷ್, ಸಣ್ಣ ವೀರೇಶ್ ಇದ್ದರು.

# ಜನವರಿ 3ರಂದು ಜಿಲ್ಲೆಗೆ ಸಿಎಂ ಆಗಮನ

## ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಫೇರಾವ್‌ಗೆ ಎಚ್ಚರಿಕೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಬಡ್ತಿ, ಎಸ್‌ಸಿಪಿ ಅನುದಾನ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳು, ಸಹಕಾರ ಸಂಘಗಳು, ಗುತ್ತಿಗೆ ಕಾಮಗಾರಿಗಳು, ಗುತ್ತಿಗೆ ಕಾರ್ಮಿಕರ ನೇಮಕಾತಿ ಹಾಗೂ ಅತಿಥಿ ಉಪನ್ಯಾಸಕರು□ಶಿಕ್ಷಕರಂತಹ ತಾತ್ಕಾಲಿಕ ನೇಮಕಾತಿಗಳಲ್ಲಿ ಪರಿಶಿಷ್ಟ ಜಾತಿಗಳಿಗೆ ಶೇ.6 ಒಳಮೀಸಲಾತಿಯನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಕಾಯ್ದೆಗೆ ತಿದ್ದುಪಡಿ ಮಾಡಬೇಕೆಂದು ಒತ್ತಾಯಿಸಿ, ಜನವರಿ 3ರಂದು ಜಿಲ್ಲೆಗೆ ಆಗಮಿಸಲಿರುವ ಮುಖ್ಯಮಂತ್ರಿ ಅವರನ್ನು ಫೇರಾವ್ ಮಾಡಲಾಗುವುದು ಎಂದು ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಹೋರಾಟ ಸಮಿತಿ ರಾಜ್ಯ ಸಂಚಾಲಕ ಎಸ್. ಮಾರೆಪ್ಪ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಅನುಸೂಚಿತ ಜಾತಿಗಳ ಉಪವರ್ಗೀಕರಣ ವಿಧೇಯಕ–2025ನ್ನು ಸ್ವಾಗತಿಸುತ್ತೇವೆ. ಆದರೆ ಬಡ್ತಿಯನ್ನು ವಿಧೇಯಕದಿಂದ ಕೈಬಿಟ್ಟಿರುವುದು ಸಂವಿಧಾನದ ಪರಿಚ್ಛೇದ 16(4ಎ), 16(4ಬಿ) ಹಾಗೂ ಸಂಬಂಧಿತ ರಾಜ್ಯ ಕಾಯ್ದೆಗಳ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದರು. 2018ರ ಕಾಯ್ದೆ ಬಡ್ತಿಗೆ ಸಂಬಂಧಪಟ್ಟದ್ದಲ್ಲ ಎಂಬುದನ್ನು ಸರ್ಕಾರ ಸ್ಪಷ್ಟವಾಗಿ ಅರಿತುಕೊಳ್ಳಬೇಕು ಎಂದು ಹೇಳಿದರು.

ಪರಿಶಿಷ್ಟ ಜಾತಿಗಳ ಉಪಹಂಚಿಕೆ ಯೋಜನೆಯಡಿ ಶೇ.6 : 6 : 5 ಪ್ರಮಾಣದ ಒಳಮೀಸಲಾತಿಯನ್ನು ಸಂಪೂರ್ಣವಾಗಿ ಜಾರಿಗೊಳಿಸಬೇಕು. 2025□26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಗಳಿಗೆ ಮೀಸಲಾದ ಅನುದಾನವನ್ನೂ ಇದೇ ಅನುಪಾತದಲ್ಲಿ ಹಂಚಿಕೆ ಮಾಡಬೇಕು. ಜೊತೆಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲೂ ಪ್ರವರ್ಗವಾರು ಒಳಮೀಸಲಾತಿ ಕಡ್ಡಾಯವಾಗಿ ಜಾರಿಯಾಗಬೇಕು ಎಂದು ಆಗ್ರಹಿಸಿದರು.

ಅನಧಿಕೃತವಾಗಿ ಬಂಧಿಸಲಾದ 42 ಹೋರಾಟಗಾರರ ಮೇಲಿನ ಸುಳ್ಳು



ಪ್ರಕರಣಗಳನ್ನು ತಕ್ಷಣ ಹಿಂಪಡೆಯಬೇಕು. ಪೌರ ಕಾರ್ಮಿಕರು, ಯುಜಿಡಿ ಕಾರ್ಮಿಕರು, ಚಾಲಕರು ಹಾಗೂ ಕ್ಲೀನರ್‌ಗಳನ್ನು ಖಾಯಂಗೊಳಿಸಿ, 2022□23ರಲ್ಲಿ ಖಾಯಂಗೊಂಡ ಕಾರ್ಮಿಕರಿಗೆ ಶೇ.100 ವೇತನವನ್ನು ಸರ್ಕಾರವೇ ಪಾವತಿಸಬೇಕು ಎಂದು ಒತ್ತಾಯಿಸಿದರು.

ಕೃಷಿ ವಿಶ್ವವಿದ್ಯಾಲಯದ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ. ಹೊಸ ಆದೇಶ ಜಾರಿಯಲ್ಲಿರುವಾಗ ಹಳೆಯ ಆದೇಶದ ಆಧಾರದಲ್ಲಿ ನೇಮಕಾತಿ ನಡೆದಿದೆ ಎನ್ನುವುದು ಅಸಂಬದ್ಧವಾಗಿದ್ದು, ಅಧಿಕಾರಿಗಳು ತಿಳಿದಿದ್ದೂ ಅಕ್ರಮ ಎಸಗಿದ್ದಾರೆ ಎಂದು ಮಾರೆಪ್ಪ ಆರೋಪಿಸಿದರು.

ನಂತರ ಮಾತನಾಡಿದ ಶಿವರಾಯ ಅಕರಿಕಿ, ಮಾದಿಗ ಸಮುದಾಯ ರಾಜ್ಯದಲ್ಲಿ ದೊಡ್ಡ ಸಮುದಾಯವಾಗಿದೆ. ಮುಖ್ಯಮಂತ್ರಿ ಅವರಿಗೆ ನಿಜವಾದ ಇಚ್ಛಾಶಕ್ತಿ ಇದ್ದಿದ್ದರೆ ಒಳಮೀಸಲಾತಿಯನ್ನು ಸಂಪೂರ್ಣ ಪ್ರಮಾಣದಲ್ಲಿ ಜಾರಿಗೊಳಿಸಬೇಕಿತ್ತು. ಆದರೆ ಭಾಗಶಃ ಶೇ.50 ಮಾತ್ರ ಜಾರಿಯಾಗಿದೆ. ಪೂರ್ಣ ಪ್ರಮಾಣದ ಒಳಮೀಸಲಾತಿ ಜಾರಿಯಾಗದಿದ್ದರೆ, ಅದರ ಪರಿಣಾಮವನ್ನು ಮುಂದಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸರ್ಕಾರ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಒಳಮೀಸಲಾತಿ ವಿಷಯದಲ್ಲಿ ಸರ್ಕಾರ ದೃಢ ನಿರ್ಧಾರ ಕೈಗೊಳ್ಳಬೇಕು. ಆದರೆ ಕೆಲವರು ಉದ್ದೇಶಪೂರ್ವಕವಾಗಿ ಅಡ್ಡಿಪಡಿಸುತ್ತಿದ್ದಾರೆ. ಸಾಮಾಜಿಕ ನ್ಯಾಯ ಸಚಿವ ಹೆಚ್. ಮಹದೇವಪ್ಪ ಅವರನ್ನು ಸಚಿವ ಸ್ಥಾನದಿಂದ ಕೈಬಿಟ್ಟು, ಸೂಕ್ತ ವ್ಯಕ್ತಿಯನ್ನು ಆ ಸ್ಥಾನದಲ್ಲಿ ನೇಮಕ ಮಾಡಬೇಕು. 35 ವರ್ಷಗಳ ಇತಿಹಾಸ ಹೊಂದಿರುವ ಒಳಮೀಸಲಾತಿ ಹೋರಾಟಕ್ಕೆ ಕೊಳ್ಳಿ ಇಟ್ಟಂತಾಗಿದೆ. ಹೀಗಾಗಿ ಜನವರಿ 3ರಂದು ರಾಯಚೂರು ಜಿಲ್ಲೆಗೆ ಆಗಮಿಸುವ ಮುಖ್ಯಮಂತ್ರಿ ಅವರನ್ನು ಫೇರಾವ್ ಮಾಡುವ ಮೂಲಕ ನಮ್ಮ ಹಕ್ಕು□ಬಾಧ್ಯತೆಗಳನ್ನು ಅವರಿಗೆ ತಲುಪಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹೇಮರಾಜ್ ಅಸ್ಕಿಹಾಳ್, ಅಂಜಿನಯ್ಯ ಉಟ್ಕರು, ಅಂಜಿನಯ್ಯ ಕುರಬದೊಡ್ಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕರಾವಳಿ ಪ್ರದೇಶಗಳ ಅಭಿವೃದ್ಧಿಗೆ ಹೊಸ ಪ್ರವಾಸೋದ್ಯಮ ನೀತಿ: ಡಿಸಿಎಂ ಡಿಕೆ.ಶಿವಕುಮಾರ್

• **ಮಲ್ಲಮ್ಮ ನುಡಿ ವಾರ್ತೆ ಕಾರವಾರ,**

ಮಂಗಳೂರು, ಉಡುಪಿ, ಉತ್ತರ ಕನ್ನಡ ಜಿಲ್ಲೆಯ ಕರಾವಳಿ ಪ್ರದೇಶಗಳ ಅಭಿವೃದ್ಧಿಗೆ ಹೊಸ ಪ್ರವಾಸೋದ್ಯಮ ನೀತಿ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಅವರು ಭಾನುವಾರ ರವೀಂದ್ರನಾಥ ಠಾಗೋರ್ ಕಡಲ ತೀರದ ಮಯೂರ ವರ್ಮ ವೇದಿಕೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಹಾಗೂ ಜಿಲ್ಲಾಡಳಿತ ಉತ್ತರ ಕನ್ನಡ ಇವರ ಸಂಯೋಗದಲ್ಲಿ ಆಯೋಜಿಸಲಾದ ಕರಾವಳಿ ಉತ್ಸವ 2025 ರ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕರಾವಳಿ ಪ್ರದೇಶಗಳ ಅಭಿವೃದ್ಧಿಗೆ ಹೊಸ ಪ್ರವಾಸೋದ್ಯಮ ನೀತಿ ರಚಿಸುವ ಕುರಿತಂತೆ ಜನವರಿ 10 ರಂದು 3 ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮಂಗಳೂರಿನಲ್ಲಿ ಸಭೆ ನಡೆಸಲಾಗುವುದು. ಪಶ್ಚಿಮ ಘಟ್ಟಕ್ಕೆ ಮತ್ತು ಮಲೆನಾಡಿಗೆ ಪ್ರತ್ಯೇಕವಾದ ಪ್ರವಾಸಿ ನೀತಿಯನ್ನು ಮಾಡಿ, ಹೊರಗಡೆಯಿಂದ ಉದ್ದಿಮೆದಾರರು ಬಂದು ಇಲ್ಲಿಯೇ ಬಂಡವಾಳ ಹೂಡಬೇಕು. ಇಲ್ಲಿನ ಯುವಕರು ಬೆಂಗಳೂರು, ಮುಂಬೈ, ಸೌದಿ, ಗೋವಾ ಹೊರ ರಾಜ್ಯ, ಜಿಲ್ಲೆಗಳಿಗೆ ವಲಸೆ ಹೋಗುವುದನ್ನು ತಪ್ಪಿಸಿ ಮನೆ ಬಾಗಲಿಗೆ ಉದ್ಯೋಗವನ್ನು ಸೃಷ್ಟಿಮಾಡಸಬೇಕೆಂಬ ನಿಟ್ಟಿನಲ್ಲಿ ಹೊಸ ಉದ್ಯೋಗ ನೀತಿ ಮತ್ತು ಪ್ರವಾಸಿ ನೀತಿ ಮಾಡಬೇಕು ಎಂದು ಸರ್ಕಾರ ಚಿಂತನೆ ಮಾಡಿದೆ. ಉತ್ತರ ಕನ್ನಡ ಜಿಲ್ಲೆಯ ಅಭಿವೃದ್ಧಿಗೆ ಎಂದಿಗೂ ಬೆಂಬಲ ನೀಡುತ್ತೇನೆ ಎಂದು ಉಪ ಮುಖ್ಯಮಂತ್ರಿ ತಿಳಿಸಿದರು.

ಸಮುದ್ರ ಎಂದರೇ ಒಂದು ದೊಡ್ಡ ಶಕ್ತಿ, ಮೀನುಗಾರಿಗೆ ಇಲ್ಲಿನ ಬದುಕಿಗೆ ದೊಡ್ಡ ಆಧಾರ, ಇಲ್ಲಿ ಪ್ರವಾಸಿಗರ ಸ್ವರ್ಗವನ್ನು ಕಾಣಬಹುದು. ಇಲ್ಲಿನ ಜನ ಸಾಮಾನ್ಯರ ಸಂತೋಷದ ದೃಷ್ಟಿಯಿಂದ, ಜಿಲ್ಲೆಯ ಕಲಾವಿದರಿಗೆ, ಇಲ್ಲಿನ ಸಂಪ್ರದಾಯ, ಆಚಾರ ವಿಚಾರಗಳನ್ನು ಪ್ರಚಾರ ಮಾಡುವುದಕ್ಕಾಗಿ ಕರಾವಳಿ ಉತ್ಸವದಂತಹ ದೊಡ್ಡ ಕಾರ್ಯಕ್ರಮ ಮಾಡಿ ಸಚಿವರು ಇಡೀ ಸರ್ಕಾರಕ್ಕೆ ಗೌರವವನ್ನು ತಂದಿದ್ದಾರೆ ಎಂದರು.

ಸಮುದ್ರ ಅಂದರೆ ಸಂಪತ್ತು ಮತ್ತು ಜ್ಞಾನದ ಬಲ, ಬದುಕಿಗೆ ಒಂದು ಆದರ್ಶವನ್ನು ಇಟ್ಟುಕೊಳ್ಳಬೇಕು, ಸಾಧನೆಗೆ ಒಂದು ಗುರಿಯನ್ನು ಇಟ್ಟುಕೊಳ್ಳಬೇಕು. ಇಂತಹ ಕಾರ್ಯಕ್ರಮವು ಸಾವಿರಾರು ಯುವಕರ ತಮ್ಮಲ್ಲಿ ಅಡಗಿರುವ ಚಿತ್ರಕಲೆ, ಕ್ರೀಡೆ, ಜನಪದ ಲೋಕ, ಸಾಹಿತ್ಯ, ಸಂಸ್ಕೃತಿ ಮುಂತಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ರಾಜ್ಯಕ್ಕೆ, ರಾಷ್ಟ್ರಕ್ಕೆ ಮಟ್ಟದಲ್ಲಿ



ಬಿಂಬಿಸಿಕೊಳ್ಳಲು ಇಂತಹ ವೇದಿಕೆಗಳು ದಾರಿಯಾಗಲಿವೆ ಎಂದರು.

ಅನಾರೋಗ್ಯದಿಂದ ಬಳಲುತ್ತಿರುವ ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆಗೆ ಗೋವಾ, ಮಂಗಳೂರು, ಉಡುಪಿ ಜಿಲ್ಲೆಗಳ ಮೊರೆ ಹೋಗಬೇಕು ಆದ್ದರಿಂದ ಉತ್ತರ ಕನ್ನಡ ಜಿಲ್ಲೆಯಲ್ಲಿ ಮಲ್ಟಿ ಸ್ಪೇಷಾಲಿಟಿ ಆಸ್ಪತ್ರೆಯನ್ನು ಮಾಡಬೇಕು ಎಂಬ ಸತೀಶ್ ಸೈಲ್ ಅವರು ಬೇಡಿಕೆಗೆ ನಾನು ಕೂಡ ಬೆಂಬಲ ನೀಡುತ್ತೇನೆ ಎಂದರು.

ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ಮಾತನಾಡಿ, ಕರಾವಳಿ ಉತ್ಸವಕ್ಕೆ 30 ವರ್ಷಗಳ ಇತಿಹಾಸವಿದ್ದು, ಅದನ್ನು ಉಳಿಸಿ, ಬೆಳೆಸಿಕೊಂಡು ಮುಂದುವರೆಸಿಕೊಂಡು ಹೋಗಬೇಕು. ಸ್ಥಳೀಯ ಕಲಾವಿದರಿಗೆ ವೇದಿಕೆ ಕಲ್ಪಿಸುವ ಮೂಲಕ ಸ್ಥಳೀಯ ಕಲಾವಿದರಿಗೆ ಪ್ರೋತ್ಸಾಹ ನೀಡವಂತಾಗಬೇಕು. ನಮ್ಮ ಜಿಲ್ಲೆಯಲ್ಲಿ ಎಲ್ಲಾ ರೀತಿಯ ಕಲೆಗಳು ಇಂದಿಗೂ ಜೀವಂತವಾಗಿದೆ. ಬಡವರು, ರೈತರು, ಕಾರ್ಮಿಕರು ವರ್ಷವಿಡಿ ಕೆಲಸ ಮಾಡುವುದು ಬಿಟ್ಟು ಬೇರೇನು ಗೊತ್ತಿಲ್ಲ, ಅವರಿಗೆ ಮನರಂಜನೆಗಾಗಿ ಮತ್ತು ಸ್ಥಳೀಯ ಕಲಾವಿದರಿಗೆ, ಸಾಮಾನ್ಯರಿಗೆ, ಬಡವರಿಗೆ ಸೂಕ್ತ ವೇದಿಕೆ ಮಾಡಿಕೊಡಬೇಕು ಎಂಬ ಉದ್ದೇಶದಿಂದ ಕರಾವಳಿ ಉತ್ಸವನ್ನು ಆಯೋಜಿಸಲಾಗಿದೆ ಎಂದರು. ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಮತ್ತು ಅಡ್ವರ್ಟೈಸಿಂಗ್ ಲಿಮಿಟೆಡ್ ಅಧ್ಯಕ್ಷ ಹಾಗೂ ಶಾಸಕ ಸತೀಶ ಕೆ ಸೈಲ್ ಮಾತನಾಡಿ, ಕರಾವಳಿ ಉತ್ಸವ ಸಪ್ತಾಹದಲ್ಲಿ ರಾಷ್ಟ್ರ, ರಾಜ್ಯ ಹಾಗೂ ಸ್ಥಳೀಯ ಕಲಾವಿದರಿಗೆ ವೇದಿಕೆ ಕಲ್ಪಿಸಲಾಗಿದ್ದು, ಪ್ರತಿದಿನ 40 ರಿಂದ 50 ಸಾವಿರ ಜನರು ಕಾರ್ಯಕ್ರಮ ವೀಕ್ಷಿಸಲು ಆಗಮಿಸಿದ್ದಾರೆ. ಜಿಲ್ಲೆಗೆ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ನಿರ್ಮಿಸುವ ಬಗ್ಗೆ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದು, ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಮುಂದಿನ ದಿನಗಳಲ್ಲಿ ಸೂಪರ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣವಾಗಲಿದೆ ಎಂದರು ಶಾಸಕ ಭೀಮಣ್ಣನಾಯ್ಕ ಮಾತನಾಡಿ, ಕರಾವಳಿ ಉತ್ಸವ 7 ದಿನಗಳ ಕಾಲ ಬಹಳ ಅದ್ಬುತವಾಗಿ, ವಿಜೃಂಜಣೆಯಿಂದ ನಡೆದಿದ್ದು, ಜಿಲ್ಲೆಯು ಕರಾವಳಿ, ಗುಡ್ಡಗಾಡು, ಅರೆ ಮಲೆನಾಡು, ಮಲೆನಾಡನ್ನು ಹೊಂದಿರುವ ಒಂದು ಬಹಳ ಸುಂದರವಾದ ಜಿಲ್ಲೆಯಾಗಿದೆ. ಸಂಗೀತ, ಯಕ್ಷಗಾನ, ಕಲೆ ಸಂಸ್ಕೃತಿಯನ್ನು ಹೊಂದಿರುವ ಜಿಲ್ಲೆಯ ಅನೇಕ ಪ್ರತಿಭಾವಂತರು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕರಾದ ಶಿವರಾಮ ಹೆಬ್ಬಾರ್, ವಿಧಾನ ಪರಿಷತ್ ಶಾಸಕ ಗಣಪತಿ ಉಳ್ವೇಕರ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಸತೀಶ ಪಿ ನಾಯ್ಕ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ ಮೊಹೀಸಿನ್, ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಿಲೀಷ್ ಶಶಿ, ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಮತ್ತಿತರರು ಉಪಸ್ಥಿತರಿದ್ದರು.

# ವಿಶ್ವಮಾನವ ಸಂದೇಶ ನೀಡಿದ ಹಾಗೂ ಮೊದಲ ಕನ್ನಡ ಜ್ಞಾನಪೀಠ ಪ್ರಶಸ್ತಿ ಪಡೆದ ಕವಿ ಕುವೆಂಪು – ಡಾ. ದೀಪಾ ರಾಗ



• **ಮಲ್ಲಮ್ಮ ನುಡಿ ವಾರ್ತೆ ಬೀದರ :**

30ನೇ ಡಿಸೆಂಬರ್ 2025 ಗೌರವಾನ್ವಿತ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್. ವಾಲಿಯವರ ಮಾರ್ಗದರ್ಶನದಲ್ಲಿ ಮಹಾವಿದ್ಯಾಲಯ ಪ್ರಾಂಶುಪಾಲರಾದ ಡಾ. ದೀಪಾ ರಾಗ ಅವರು ರಾಷ್ಟ್ರಕವಿ ಕುವೆಂಪು 121ನೇ ಜನ್ಮ ದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿ ಮಾತನಾಡುತ್ತಾ ಕುವೆಂಪು ಅವರು ನಾಡು ಕಂಡ ಒಬ್ಬ ಶ್ರೇಷ್ಠ ಕವಿ ಕನ್ನಡ ಮೊಟ್ಟಮೊದಲ ಜ್ಞಾನಪೀಠ ಪ್ರಶಸ್ತಿಯನ್ನು ಪಡೆದ ಮೊದಲ ಕವಿ ಇವರ ಶ್ರೀ ರಾಮಯಣ ದರ್ಶನಂ ಕೃತಿಯಾಗಿದೆ. ಇವರು ಕನ್ನಡದ ಅಗ್ರಗಣ್ಯ ಕವಿ, ಕಾಂದಬರಿಕಾರ, ನಾಟಕಕಾರರ ಮತ್ತು ಚಿಂತಕರಾಗಿದ್ದರು ಇವರು ಡಿಸೆಂಬರ್ 29, 1904ರಂದು ಚಿಕ್ಕಮಗಳೂರು ಜಿಲ್ಲೆಯ ಹಿರೇಕೊಡಿಗೆ ಎಂಬಲ್ಲಿ ಇವರ ಜನನವಾಗುತ್ತದೆ. ಕುಪ್ಪಳ್ಳಿ ವೆಂಕಟಪ್ಪನವರ ಮಗ ಪುಟ್ಟಪ್ಪ (ಕುವೆಂಪು) ಎಂದೇ ಪ್ರಸಿದ್ಧಿ ಪಡೆದ ಇವರು ಮೈಸೂರು ವಿಶ್ವವಿದ್ಯಾಲಯದ ಉಪ ಕುಲಪತಿಯಾಗಿ ವಿಶ್ವಮಾನವ ಸಂದೇಶ ನೀಡಿದ ಇವರಿಗೆ ವಿಶ್ವಮಾನವ ಎಂಬ ಬಿರುದು ಇದೆ ಕನ್ನಡದ ಬಗ್ಗೆ ಅಪಾರ ಪ್ರೀತಿ ಹಾಗೂ ಕಳಕಳಿ ಹೊಂದಿದ ಇವರು ಕನ್ನಡ ಭಾಷೆಗೆ ಹಾಗೂ ಕನ್ನಡಿಗರಲ್ಲಿ ಅಪಾರ ಅಭಿಮಾನ ಉಳ್ಳುವಂತೆ ಮಾಡಿದ್ದಾರೆಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾರ್ಮಿಕವಾಗಿ ನುಡಿದರು.

ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ರೇಣುಕಾ ಎಂ. ಸ್ವಾಮಿ ಅವರು ಮಾತನಾಡುತ್ತಾ ಕವಿ ಕುವೆಂಪು ಅವರು ಬರೆದ ಕಾವ್ಯಗಳೆಂದರೆ, ಕೊಳಲು, ಕಲಾಸುಂದರಿ, ನವಿಲು, ಪಕ್ಷಿಕಾಶಿ, ಕಾದಂಬರಿಗಳೆಂದರೆ, ಮಲೆಗಳಲ್ಲಿ ಮದುಮಗಳು, ಕಾನೂರು ಹೆಗ್ಗಡತಿ ಸುಬ್ಬಮ್ಮ ನಾಟಕಗಳೆಂದರೆ, ಯಮನಸೋಲು, ಜಲಗಾರ, ಶೂದ್ರತಪಸ್ವಿ, ಇವರ ಆತ್ಮಕತೆ, ನೆನಪಿನ ದೋಣಿಯಲ್ಲಿ ಇಂತಹ ಮಹತ್ವದ ಕೃತಿಗಳಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ, ಪದ್ಮಭೂಷಣ, ಕರ್ನಾಟಕ ರತ್ನ, ಪಂಪ ಪ್ರಶಸ್ತಿ ಇಂತಹ ಹತ್ತು–ಹಲವಾರು ಪ್ರಶಸ್ತಿಗಳು ದೊರೆತಿವೆ ಎಂದು ನುಡಿದರು.

ಈ ಕಾರ್ಯಕ್ರಮದ ವೇದಿಕೆಯ ಮೇಲೆ ಕಛೇರಿ ಅಧೀಕ್ಷಕರಾದ ಶ್ರೀ ಸುಜೀತಕುಮಾರ ಪಿ., ಎನ್.ಸಿ.ಸಿ. ಅಧಿಕಾರಿಗಳಾದ ಶ್ರೀ ಮಾರುತಿ ಭೀಮಣ್ಣಾ, ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೂರ್ಯವಂಶಿ ಪೂಜಾ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ವಾಣಿಶ್ರೀ, ಉಪಸ್ಥಿತರಿದ್ದರು.

ಈ ಕಾರ್ಯಕ್ರಮದ ಮೊದಲಿಗೆ ಬಿ.ಎ.5ನೇ ಸೆಮಿಸ್ಟರಿನ ಕು: ಭವಾನಿ ನಾಡಗೀತೆ ಹಾಡಿದರೆ, ಸ್ವಾಗತವನ್ನು ಕನ್ನಡ ವಿಭಾಗದ ಉಪನ್ಯಾಸಕರಾದ ಶ್ರೀಮತಿ ಕಾವೇರಿ ಖಂಡ್ರೆ ನಡೆಸಿಕೊಟ್ಟರೆ, ಸಂಚಾಲನೆ ಮತ್ತು ವಂದನಾರ್ಪಣೆ ಇತಿಹಾಸ ವಿಭಾಗದ ಉಪನ್ಯಾಸಕರಾದ ಶ್ರೀ ಬಸವರಾಜ ಬಿರಾದಾರ ನೇರವೇರಿಸಿದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯ, ಎನ್.ಎಸ್.ಎಸ್., ಎನ್.ಸಿ.ಸಿ., ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಹೊಸವರ್ಷ ಶಾಂತಿಯುತವಾಗಿ ಸ್ವಾಗತಿಸಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ,**

2026ರ ಹೊಸ ವರ್ಷವನ್ನು ಯುವಕರು ಯಾವುದೇ ದುಶ್ಚಟಕ್ಕೆ ಅವಕಾಶ ಮಾಡಿಕೊಡದೇ ಶಾಂತಿಯುತವಾಗಿ ಹೊಸ ವರ್ಷವನ್ನು ಬರಮಾಡಿಕೊಳ್ಳಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ತಿಳಿಸಿದ್ದಾರೆ.

ಹೊಸವರ್ಷ ಆಚರಣೆ ನೆಪದಲ್ಲಿ ಪ್ರತಿವರ್ಷ ಯುವಕರು ಮದ್ಯಪಾನ, ಧೂಮ್ರಪಾನ ಸೇವಿಸಿ ಅಮೂಲ್ಯವಾದ ದೇಹ ಹಾಳು ಮಾಡಿಕೊಳ್ಳುತ್ತಿದ್ದಾರೆ. ಅನೇಕ ಯುವಕರು ಮದ್ಯಪಾನ ಸೇವಿಸಿ ಜಗಳ, ಕಿರಿಕಿರಿ



ಮಾಡಿಕೊಂಡು ಜೀವವನ್ನು ಕಳೆದುಕೊಂಡ ಉದಾಹರಣೆ ನಮ್ಮೆಲ್ಲರ ಮಧ್ಯೆ ಇವೆ.

ಹಾಗಾಗಿ ಯುವಕರು ಯಾವುದೇ ಕಾರಣಕ್ಕೂ ದುಶ್ಚಟ, ದುರ್ಗುಣಗಳಿಗೆ ಬಲಿಯಾಗಬಾರದು. ಬಸವಣ್ಣನವರು ದೇಹವನ್ನು ದೇಗುಲಕ್ಕೆ ಹೋಲಿಸಿದ್ದಾರೆ. ಆದ್ದರಿಂದ ಯಾರೊಬ್ಬರೂ ಸುಂದರವಾದ ದೇಹವನ್ನು ಕಲುಷಿತ ಮಾಡಿಕೊಳ್ಳಬಾರದು. ಎಲ್ಲರೂ ಗುರು ಹಿರಿಯರು ಬಳುವಳಿಯಾಗಿ ಕೊಟ್ಟಿರುವ ನಮ್ಮ ಸಂಸ್ಕೃತಿ, ಪರಂಪರೆಯನ್ನು ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಸಾಗಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ

• **ಮಲ್ಮನ ನುಡಿ ವಾರ್ತೆ,ಮಸ್ಕಿ :**

ದೇವದುರ್ಗ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಕೆ ಶಿವನಗೌಡ ನಾಯಕ್ ಅವರ ಅಭಿಮಾನಿ ಬಳಗದ ವತಿಯಿಂದ ತಾಲೂಕು ಪಂಚಾಯತ್ ಮಾಜಿ ಅಧ್ಯಕ್ಷ ಶಿವಣ್ಣ ನಾಯಕ್ ನೇತೃತ್ವದಲ್ಲಿ ಹೊಸ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.



ಈ ಸಂದರ್ಭದಲ್ಲಿ ಮಾಜಿ ತಾಲೂಕು ಪಂಚಾಯಿತಿ ಅಧ್ಯಕ್ಷ ಶಿವಣ್ಣ ನಾಯಕ್ ವೆಂಕಟಾಪುರ ಮಾತನಾಡಿ ಕೆ ಶಿವನಗೌಡ ನಾಯಕ ಅವರು ತಮ್ಮ ಅಧಿಕಾರ ಅವಧಿಯಲ್ಲಿ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದು ಆದ್ದರಿಂದ ಇಂದು ರಾಯಚೂರು ಜಿಲ್ಲೆಯ ಪ್ರತಿಯೊಂದು

ಕ್ಷೇತ್ರದಲ್ಲಿ ಹಾಗೂ ಪ್ರತಿಯೊಂದು ಹಳ್ಳಿಗಳಲ್ಲಿಯೂ ಅವರ ಅಭಿಮಾನಿಗಳು ಇದ್ದಾರೆ. ನಾವು ಕೂಡ ಕೆ ಶಿವನಗೌಡ ನಾಯಕರು ಅಭಿಮಾನಿಗಳು ಆದ್ದ–ರಿಂದ ನಾವು ಅವರ ಮೇಲಿನ ಅಭಿಮಾನದಿಂದ ನೂತನ ವರ್ಷದ ಕ್ಯಾಲೆಂಡರ್ ಅನ್ನು ಮಸ್ಕಿ ಕ್ಷೇತ್ರದಲ್ಲಿ ಬಿಡುಗಡೆ ಮಾಡಿ ಪ್ರತಿಯೊಬ್ಬ ಅವರ ಅಭಿಮಾನಿಗಳಿಗೂ ನೂತನ ವರ್ಷದ ಕ್ಯಾಲೆಂಡರ್ ಅನ್ನು ತಲುಪಿಸುವ ಕಾರ್ಯ ಅವರ ಅಭಿಮಾನಿಗಳು ಮಾಡಿದ್ದಾರೆ ಎಂದರು ಈ ಸಂದರ್ಭದಲ್ಲಿ ಗ್ರಾಮಗಳಲ್ಲಿ ಶಿವನಗೌಡ ನಾಯಕ್ ಅವರ ಅಭಿಮಾನಿ ಬಳಗದವರು ಇದ್ದರು

# ಗೋಕರ್ಣದಲ್ಲಿ ತುಂಬಿ ತುಳುಕುತ್ತಿರುವ ಪ್ರವಾಸಿಗರು : ರೂಮಿಲ್ಲದೇ ಪರದಾಟ

• **ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ :**

ಪ್ರವಾಸ ಹಾಗೂ ಧಾರ್ಮಿಕ ದೃಷ್ಟಿಯಿಂದ ಗೋಕರ್ಣ ವಿಶ್ವಾದ್ಯಂತ ಗುರುತಿಸಿಕೊಂಡಿದೆ. ಹೀಗಾಗಿ ಇಲ್ಲಿಗೆ ಕ್ರಿಸ್‌ಮಸ್ ಮತ್ತು ವರ್ಷಾಚರಣೆಗಾಗಿ ಲಕ್ಷಾಂತರ ಜನರು ಆಗಮಿಸುತ್ತಾರೆ. ಹೀಗಾಗಿ ಈಗ ಹೆಚ್ಚಿನ ಸಂಖ್ಯೆಯಲ್ಲಿ ಜನರು ಕಂಡುಬರುತ್ತಿದ್ದು, ವಸತಿಗಾಗಿ ದುಬಾರಿ ವೆಚ್ಚ ಭರಿಸಿ ಉಳಿದುಕೊಳ್ಳಬೇಕಾಗಿದೆ. ಆದರೂ ಕೂಡ ಇಲ್ಲಿ ವಸತಿಗಾಗಿ ಪರದಾಡಬೇಕಾಗಿದ್ದು, ಕುಮಟಾ ಹಾಗೂ ಅಂಕೋಲಾಕ್ಕೆ ತೆರಳಬೇಕಾಗಿದೆ.

ಗೋಕರ್ಣ ವ್ಯಾಪ್ತಿಯಲ್ಲಿಯೇ ಸುಮಾರು 200 ಕ್ಕೂ ಅಧಿಕ ವಸತಿಗೃಹ, ಹೋಮ್‌ಸ್ಟೇ, ರೆಸ್ಟಾರೆಂಟ್‌ಗಳಿಗೆ ಆದರೂ ಕೂಡ ಪ್ರವಾಸಿಗರ ದಟ್ಟಣೆಯಿಂದ ಸಾಕಾಗುತ್ತಿಲ್ಲ. ಒಂದು ಸಾವಿರ ಇರುವ ರೂಮಿಗೆ ಐದು ಸಾವಿರ ಮಾಡಲಾಗಿದೆ. 5 ಸಾವಿರ ಇರುವ ರೂಮಿಗೆ 25 ಸಾವಿರ ರೂ. ಮಾಡಲಾಗಿದೆ. ಆದರೂ ಕೂಡ ವಸತಿಗಾಗಿ ಪ್ರವಾಸಿಗರು ಪರದಾಡುತ್ತಿದ್ದಾರೆ.

ಇನ್ನು ಅಂಕೋಲಾ ಮತ್ತು ಕುಮಟಾ ತಾಲೂಕಿನಲ್ಲಿಯೂ ಕೂಡ ಕೆಲವೊಂದು ರೆಸಾರ್ಟ್‌ಗಳು ತಲೆ ಎತ್ತಿವೆ. ಅದರಲ್ಲೂ ಮಂಜಗುಣಿ–ಗಂಗಾವಳಿ ಸೇತುವೆ ನಿರ್ಮಾಣಗೊಂಡಿದ್ದರಿಂದಾಗಿ ಅಂಕೋಲಾ ತಾಲೂಕಿನಲ್ಲಿಯೇ ಹಲವು ರೆಸಾರ್ಟ್‌ಗಳು ತಲೆ ಎತ್ತಿವೆ. ಈಗ ಅವರಿಗೂ ಕೂಡ ಬಂಪರ್ ಎನ್ನುವಂತಾಗಿದೆ. ನೂತನವಾಗಿ ಆರಂಭಗೊಂಡಿರುವ ಹೋಮ್‌ಸ್ಟೇ ಅವರು ದರವನ್ನು ಕಡಿಮೆ ಮಾಡಿ ನೀಡುತ್ತಿದ್ದಾರೆ. ಮತ್ತೆ ಬರುವಾಗ ನಮ್ಮಲ್ಲಿಯೇ ಬರಬೇಕು ಎನ್ನುವ ಕಾರಣಕ್ಕಾಗಿ ಆದರೂ ಕೂಡ ರೂಮ್‌ನ ಕೊರತೆ ಉಂಟಾಗುತ್ತಿದೆ. ಹೀಗಾಗಿ ಕೆಲವರು ಬಾಯಿಗೆ ಬಂದದರ ನಿಗದಿಡಿಸಿರುತ್ತಾರೆ. ಪ್ರತಿದಿನ ಸಾವಿರಾರು ವಾಹನಗಳು ಆಗಮಿಸುತ್ತಿದ್ದು, ಅದನ್ನು ನಿಯಂತ್ರಿಸಲು ಪೋಲೀಸರು ಹರಸಾಹಸ ಪಡುತ್ತಿದ್ದಾರೆ. ಪ್ರವಾಸಿಗರ ನಡುವೆಯು ಭಕ್ತರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದು, ಅವರು ಕೂಡ ದೇವಸ್ಥಾನಗಳಿಗೆ ತೆರಳಿ ನಂತರ ಮುಖ್ಯ ಕಡಲತೀರದ ಸೊಬಗನ್ನು ಸವಿದು ಒಂಟೆ, ಕುದುರೆಯ ಮೇಲೆ ಕುಳಿತು ಮೋಜು ಮಾಡುತ್ತಿದ್ದಾರೆ. ಒಟ್ಟಿನಲ್ಲಿ ಗೋಕರ್ಣ ಪ್ರವಾಸಿಗರು ಮತ್ತು ಭಕ್ತರಿಂದ ತುಂಬಿ ತುಳುಕುತ್ತಿದೆ. ಇನ್ನು ರಾತ್ರಿ ಸಮಯದಲ್ಲಿ ಸಾಕಷ್ಟು ಟ್ರಾಫಿಕ್‌ಜಾಮ್ ಸಮಸ್ಯೆಯು ಕೂಡ ಉಂಟಾಗುತ್ತಿದೆ. ಆದರು ಪ್ರವಾಸಿಗರು ಪ್ರಯಾಸಪಟ್ಟು ಗೋಕರ್ಣದತ್ತ ಗಿರಕಿಹೊಡೆಯುತ್ತಿದ್ದಾರೆ.





# ಏಕಾದಶಿ ಪ್ರಯುಕ್ತ ಶ್ರೀ ವೆಂಕಟೇಶ್ವರ ದೇವಾಲಯ ಮುಂದೆ ಸಾಲುಗಟ್ಟಿ ದರ್ಶನಕ್ಕೆ ನಿಂತ ಜನ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲೆಯಾದ್ಯಂತ ವೈಕುಂಠ ಏಕಾದಶಿಯ ಸಂಭ್ರಮ ಮನೆ ಮಾಡಿದೆ. ನಗರದ ಹಲವು ಬಡಾವಣೆಗಳಲ್ಲಿರುವ ವೆಂಕಟೇಶ್ವರ, ದೇವಾಲಯಗಳಲ್ಲಿ ಮುಂಜಾನೆ 4 ಗಂಟೆಯಿಂದಲೇ ಸುಪ್ರಭಾತ ಸೇವೆ ಸೇರಿದಂತೆ ವಿಶೇಷ ಪೂಜೆಗಳು ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ದೇವಾಲಯಗಳಿಗೆ ಭಕ್ತರ ಸಾಗರವೇ ಹರಿದು ಬರುತ್ತಿದೆ.

ನಗರದ ಸರಳಾದೇವಿ ಕಾಲೇಜು ಬಳಿಯ ಶ್ರೀ ವೆಂಕಟೇಶ್ವರ ದೇವಾಲಯ, ಸತ್ಯನಾರಾಯಣ ಪೇಟೆಯ ವೆಂಕಟೇಶ್ವರ ದೇವಾಲಯ, ನಗರದ ಹೊರವಲಯದ ಶ್ರೀರಾಮೇಶ್ವರ ನಗರದಲ್ಲಿರುವ ಶ್ರೀ ವೆಂಕಟೇಶ್ವರ ದೇವಾಲಯ, ಸೇರಿದಂತೆ ನಗರದ ಅನೇಕ ದೇಗುಲಗಳಲ್ಲಿ ಪಂಚಾಭಿಷೇಕ, ಪುಷ್ಪಭಿಷೇಕ ಸೇರಿದಂತೆ ವಿವಿಧ ಪೂಜೆ ನಡೆ–ಯುತ್ತಿದ್ದು, ವಿಶೇಷ ಅಲಂಕಾರ ಮಾಡಿ ಭಕ್ತದಿಗಳಿಗೆ ದೇವರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ.

ಇನ್ನು ಕೂಲ್ ಕಾರ್ನರ್ ಬಳಿಯ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಂತೂ ಸಂಭ್ರಮ ಮುಗಿಲು ಮುಟ್ಟಿದೆ. ವೈಕುಂಠ ಏಕಾದಶಿ ಪ್ರಯುಕ್ತವಾಗಿಯೇ ದೇವಸ್ಥಾನದಲ್ಲಿ ವಿಶೇಷ ಅಲಂಕಾರ ಮಾಡಲಾಗಿದ್ದು, ಬೆಳಗ್ಗೆ 6 ಗಂಟೆಯಿಂದಲೇ ಭಕ್ತರು ಸಾಲುಗಟ್ಟಿ ನಿಂತಿದ್ದಾರೆ ಕಿ.ಲೋ ಗಟ್ಟಲೇ ಸಾಲು ಸಾಗಿದೆ. ಜನ ಸರದಿ ಸಾಲಲ್ಲಿ ನಿಂತು ವೆಂಕಟೇಶ್ವರನ ದರ್ಶನ ಪಡೆಯುತ್ತಿದ್ದಾರೆ.

ದೇಗುಲಕ್ಕೆ ಬಂದ ಭಕ್ತರಿಗೆ ಪ್ರಸಾದ ವಿತರಣೆ ನಡೆಯುತ್ತಿದ್ದು, ಇಂದು ದೇವಸ್ಥಾನಕ್ಕೆ ಸಾವಿರಾರು ಸಂಖ್ಯೆಯಲ್ಲಿ ಜನರು ಬರುವ ನಿರೀಕ್ಷೆ ಇದ್ದು, ನೂಕು ನುಗ್ಗಲಾಗದಂತೆ ದೇವಸ್ಥಾನದ ಸುತ್ತಲೂ ಬ್ಯಾರೀಕೇಟ್ ಅಳವಡಿಸಲಾಗಿದೆ. ಭಕ್ತರಿಗೆ ಸಾಲುಗಟ್ಟಿ ಬರಲು ವ್ಯವಸ್ಥೆ ಕಲ್ಪಿಸಲಾಗಿದೆ.

ಧನುರ್ಮಾಸ ಶುಕ್ಲ ಪಕ್ಷದಲ್ಲಿ ಬರುವ ವೈಕುಂಠ ಏಕಾದಶಿಯಂದು ದೇವತೆಗಳು ಭೂ ಲೋಕಕ್ಕೆ ಬಂದು ಜಗದೊಡೆಯ ಶ್ರೀವಿಷ್ಣು ದೇವರನ್ನು ಪೂಜಿಸುತ್ತಾರೆ ಎಂದು ಪುರಾಣಗಳು ಹೇಳುತ್ತವೆ. ಹೀಗಾಗಿಯೇ ಈ ದಿನದಂದು ದೇವಾಲಯದ



ಉತ್ತರ ದ್ವಾರದ ಮೂಲಕ ವಿಷ್ಣುವಿನ ದರ್ಶನ ಮಾಡಿದರೆ ಸಕಲ ಪುಣ್ಯಗಳು ಪ್ರಾಪ್ತಿಯಾಗುತ್ತವೆ ಎಂಬುದು ನಂಬಿಕೆ ಇದೆ.

# ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆ ಕುರಿತು ಮಹಿಳಾ ಪೊಲೀಸ್ ಅಧಿಕಾರಿಗಳಿಗೆ ಕಾರ್ಯಗಾರ

**ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ್ ಇವರ ಸಂಯುಕ್ತಾಶ್ರಯದಲ್ಲಿ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ಅಧಿನಿಯಮ

2013 ಕುರಿತು ಮಹಿಳಾ ಪೊಲೀಸ್ ಹಾಗೂ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಗಾರವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ಹಿರಿಯ ವಕೀಲ ಶ್ರೀ ಬಿ.ಎಸ್. ಪಾಟೀಲ್ ಅವರು ಅಧಿನಿಯಮದ ವಿಧಿ ವಿಧಾನಗಳ ಕುರಿತು ವಿವರಿಸಿದರು. ಕೆಲಸದ ಸ್ಥಳದಲ್ಲಿ ಆಂತರಿಕ ದೂರು ಸಮಿತಿಯ ರಚನೆ ಕಡ್ಡಾಯವಾಗಿದ್ದು, ಸಮಿತಿಯ ಅಧ್ಯಕ್ಷರಾಗಿ ಹಿರಿಯ



ಶ್ರೇಣಿಯ ಮಹಿಳಾ ಉದ್ಯೋಗಸ್ಥೆ ಇರಬೇಕೆಂದು ತಿಳಿಸಿದರು. ಸಮಾಜ ಕಲ್ಯಾಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ

ಹಾಗೂ ಕಾನೂನು ಜ್ಞಾನವಿರುವ ಇಬ್ಬರು ಸದಸ್ಯರು ಹಾಗೂ ಮಹಿಳೆಯರ ಉನ್ನತಿಗಾಗಿ ಕಾರ್ಯನಿರ್ವಹಿಸುವ ಸಂಘಸಂಸ್ಥೆಗಳ ಸದಸ್ಯರು ಸಮಿತಿಯಲ್ಲಿ ಇರಬೇಕೆಂದು

ಹೇಳಿದರು. ಪ್ರತಿ ಮೂರು ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್‌ರಚನೆ ಮಾಡಬೇಕೆಂದು ಅವರು ತಿಳಿಸಿದರು.

ರೋಮಾ (ಮಿಷನ್ ಶಕ್ತಿ) ಅವರು ಆಂತರಿಕ ದೂರು ಸಮಿತಿ ರಚಿಸಿ ಖುಜ–ಃಥ ಆನ್‌ಲೈನ್ ಪೋರ್ಟಲ್‌ನಲ್ಲಿ ನೋಂದಣಿ ಮಾಡುವ ವಿಧಾನ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟೆ ಅವರು ಉದ್ಘಾಟಿಸಿದರು. ಅತಿಥಿಗಳಾಗಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರಿ, ಮಹಿಳಾ ಮತ್ತು ಮಕ್ಕಳ

ಅಭಿವೃದ್ಧಿ ಇಲಾಖೆ ಅಧಿಕಾರಿ ಶ್ರೀಮತಿ ರೂಪಾ ಕೋಟೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಶಾರದಾ, ಹಿರಿಯ ವಕೀಲ ಶ್ರೀ ಬಿ.ಎಸ್.ಪಾಟೀಲ್, ಎಸ್‌ಪಿ ಕಚೇರಿ ಸಿಬ್ಬಂದಿ ಶ್ರೀದೇವಿ, ಸಖಿ ಆಡಳಿತಾಧಿಕಾರಿ ಸಂಗೀತಾ ಪಾಟೀಲ್,

ಸಚಿನ್ ಪಾಟೀಲ್, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದ ರೇಣುಕಾ ತಾಂದಳೆ ಸೇರಿದಂತೆ ಮಹಿಳಾ ಪೊಲೀಸ್ ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಶ್ರೀ ಗೌರಿಶಂಕರ ಅವರು ನೆರವೇರಿಸಿದರು.

# ದುಡ್ಡು ಖರ್ಚಾದರೂ ಸಿಗದ ಶುದ್ಧ ನೀರು

**ಮಲ್ಲಮ್ಮ ನುಡಿ ವಾರ್ತೆ ಮುದಗಲ್ :**

ಸಮೀಪದ ಹೂನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ರಾಮತ್ನಾಳ ಗ್ರಾಮದಲ್ಲಿ ಅಧಿಕಾರಗಳ ನಿರ್ಲಕ್ಷದಿಂದ ಶುದ್ಧ ಕುಡಿಯುವ ನೀರಿಗಾಗಿ ಗ್ರಾಮಸ್ಥರು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ.

ಜಿಲ್ಲಾ ಪಂಚಾಯಿತಿಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪ ವಿಭಾಗ ಲಿಂಗಸುಗೂರು ವತಿಯಿಂದ ಸುಮಾರು 10 ಲಕ್ಷ ರೂಗಳು ಖರ್ಚು ಮಾಡಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಆದರೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ದಿವ್ಯ ನಿರ್ಲಕ್ಷದಿಂದ ಸುಮಾರು ತಿಂಗಳಿಂದ ಬಂದ್ ಆಗಿದೆ ಇದರಿಂದ ಗ್ರಾಮದ ಜನರು ಶುದ್ಧ ಕುಡಿಯುವ ನೀರಿಗಾಗಿ ಬೈಕ್ ಗಳ ಮೂಲಕ ಬೇರೆ ಗ್ರಾಮಗಳಿಗೆ ಹೋಗಿ ಶುದ್ಧ ಕುಡಿಯುವ ನೀರು ತರುವಂತ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರಾಮತ್ನಾಳ ಗ್ರಾಮಸ್ಥರು ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರಹಾಕಿದರು

ಸುಮಾರು ತಿಂಗಳ ಹಿಂದೆ ಶುದ್ಧ ಕುಡಿಯುವ ನೀರಿನ ಘಟಕದ ಸಮಸ್ಯೆ ಕುರಿತು ಗ್ರಾಮಸ್ಥರು ಹೂನೂರು



ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ದೂರು ನೀಡಿದ ಕಾರಣ ದುರಸ್ತಿ ಮಾಡಿ ಪ್ರಾರಂಭ ಮಾಡಿದ್ದರು

ಮತ್ತೆ ಬಂದ್ ಆಗಿರುವ ಹಿನ್ನಲೆ ರಾಮತ್ನಾಳ ಗ್ರಾಮದ ಜನರು ನೀರಿಗಾಗಿ ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ ಸರ್ಕಾರದ ಹಣ ಖರ್ಚಾದರೂ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಸಿಗುತ್ತಿಲ್ಲವೆಂದು ದೂರಿದರು.

ಈ ಕೂಡಲೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಶುದ್ಧ ಕುಡಿಯುವ ನೀರಿನ ಘಟಕ ಪ್ರಾರಂಭ ಮಾಡಿ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಡಬೇಕು – ಹನುಮಂತಗೌಡ ತೋವಿ ಅಧ್ಯಕ್ಷರು ಕರುನಾಡ ವಿಜಯ ಸೇನೆ ರಾಮತ್ನಾಳ ಗ್ರಾಮ ಘಟಕ"

# ಕನ್ನಡ ಸಾಹಿತ್ಯ ಸಂಸ್ಕೃತಿ ವ್ಯಾಪಕವಾಗಿ ವಿಸ್ತರಿಸಿದೆ: ಹಾನಗಲ್ಲ

**ಮಲ್ಲಮ್ಮ ನುಡಿ ವಾರ್ತೆ ಔರಾದ್ :**

ಕನ್ನಡಿಗರ ಸೌಹಾರ್ದತೆ, ಸಾಮರಸ್ಯದ ಪ್ರತೀಕವಾಗಿ ಕನ್ನಡ ಸಾಹಿತ್ಯ ಸಂಸ್ಕೃತಿ ವ್ಯಾಪಕವಾಗಿ ವಿಸ್ತರಿಸಿದೆ. ಹೀಗಾಗಿಯೇ ಕನ್ನಡಕ್ಕೆ 8 ಜ್ಞಾನಪೀಠ ಪ್ರಶಸ್ತಿಗಳು ಲಭಿಸುವಂತಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್ಲ ಅಭಿಪ್ರಾಯಪಟ್ಟರು.

ಪಟ್ಟಣದ ಅಮರೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ಸಂಭ್ರಮ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಸ್ಥೆ, ಬೀದರ್ ಸಹಯೋಗದಲ್ಲಿ ಆಯೋಜಿಸಿದ 'ಕನ್ನಡ ಭಾಷಾ ಸೌಹಾರ್ದ ನೆಲೆಗಳು' ಒಂದು ದಿನದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕದಲ್ಲಿ ಅನೇಕ ಭಾಷಿಕರಿದ್ದು ಅದರಲ್ಲಿ ಮರಾಠಿ, ತೆಲುಗು, ಉರ್ದು, ಕೊಂಕಣಿ, ಮಲೆಯಾಳಿ ಮಾತನಾಡುವವರಿದ್ದಾರೆ. ಬೀದರ ಜಿಲ್ಲೆಯಲ್ಲಿ ಮರಾಠಿ, ಉರ್ದು ಹಾಗೂ ತೆಲುಗು ಮಾತನಾಡುವವರಿದ್ದು, ಅವರ ಮಾತೃಭಾಷೆಯ ಜೊತೆಗೆ ನಾಡ ಭಾಷೆ, ಆಡಳಿತ ಭಾಷೆ ಕನ್ನಡಕ್ಕೆ ಆದ್ಯತೆ ನೀಡಬೇಕು.

ಇಂದಿನ ಮಹಾರಾಷ್ಟ್ರದ ಅರ್ಧದಷ್ಟು ಪ್ರದೇಶ ಕನ್ನಡದ ಪ್ರದೇಶವಾಗಿತ್ತು ಎಂಬುದು ಇತಿಹಾಸದಿಂದ ನಮಗೆ ತಿಳಿಯುತ್ತದೆ ಎಂದ ಅವರು ಇಂದು ಕನ್ನಡ ಬಳಕೆಯ ಪ್ರಮಾಣ ಕಡಿಮೆಯಾಗುತ್ತಸಾಗಿದೆ, 2011ರಲ್ಲಿ ನಡೆದ ಸಮೀಕ್ಷೆಯಂತೆ ಕನ್ನಡ ಬಳಕೆದಾರರು ಕೇವಲ 3.6% ಇದ್ದಿರುವುದು ಕಳವಳಕಾರಿ ಸಂಗತಿಯಾಗಿದೆ. ಅಂ–ದು ಆಲೂರು ವೆಂಕಟರಾಯರು ಸೇರಿದಂತೆ ಅನೇಕ ಮಹನೀಯರು ಕನ್ನಡಕ್ಕಾಗಿ ಹೋರಾಟ ಮಾಡಿದ್ದು, ಅವರ ಕೆಲಸ ಕಾರ್ಯಗಳು ನಮಗೆ ಸದಾ ಪ್ರೇರಣೆ ನೀಡಲಿವೆ ಎಂದರು.

ಕರ್ನಾಟಕದಲ್ಲಿ 216 ವಿವಿಧ ಮಾತೃಭಾಷೆ ಹೊಂದಿರುವ ಜನಾಂಗಗಳಿವೆ. ದೇಶದಲ್ಲಿ 19 ಸಾವಿರಕ್ಕೂ ಅಧಿಕ ಭಾಷೆಗಳು ಬಳಕೆಯಲ್ಲಿವೆ ಎಂಬುದು ವರದಿ ಹೇಳುತ್ತದೆ. ನಿತ್ಯವೂ ಕನ್ನಡ ಬಳಕೆಯಾಗಿದ್ದಲ್ಲಿ ಕನ್ನಡ ಬೆಳೆಯುತ್ತದೆ. ಕರ್ನಾಟಕದಲ್ಲಿ ವಾಸಿಸುವ ಪ್ರತಿಯೊಬ್ಬರು ತಮ್ಮ ಮನೆಯ ಹೊಸ್ತಿಲು ದಾಟುವಾಗ ಕನ್ನಡ ಸಂಸ್ಕೃತಿಯನ್ನು ಹೊತ್ತು ನಿಲ್ಲಬೇಕಾಗಿದೆ ಎಂದರು.

ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ ಮಾತನಾಡಿ, ಬೀದರ್ ಜಿಲ್ಲೆ ಸೌಹಾರ್ದತೆಗೆ ಹೆಸರುವಾಸಿಯಾಗಿದೆ, ಇಲ್ಲಿ ಕನ್ನಡದ ಜೊತೆ ಜೊತೆಗೆ ಮರಾಠಿ, ತೆಲುಗು, ಉರ್ದು ಬೆರೆತುಕೊಂಡಿವೆ. ಶರಣರು, ದಾಸರು, ಜನಪದ ಕವಿಗಳು ಕನ್ನಡವನ್ನು ಶ್ರೀಮಂತಗೊಳಿಸಿದ್ದಾರೆ ಎಂದರು.

ಕಸಾಪ ಜಿಲ್ಲಾ ಯುವ ಘಟಕದ ಅಧ್ಯಕ್ಷ ಗುರುನಾಥ ರಾಜಗೀರಾ ಮಾತನಾಡಿದರು. ಡಾ. ಶಿವಲಿಂಗ ಹೇಡೆ ಪ್ರಾಸ್ತಾವಿಕ ಮಾತನಾಡಿದರು. ಈ ಸಂದರ್ಭದಲ್ಲಿ ಅಮರೇಶ್ವರ ಪದವಿ ಕಾಲೇಜು ಪ್ರಾಚಾರ್ಯೆ ಡಾ. ಪ್ರೇಮಾ ಹೂಗಾರ, ಪದವಿಪೂರ್ವ ಕಾಲೇಜು ಪ್ರಾಚಾರ್ಯ ರೇವಣಯ್ಯ ಮಠ, ಶಿವಶಂಕರ ಟೋಕರೆ, ಮಹಾನಂದಾ ಎಂಡೆ, ಅಮರಸ್ವಾಮಿ ಸ್ಥಾವರಮಠ, ಅಂಬಾದಾಸ ನಳಗೆ, ಮಹಾದೇವ ಶಿಂಧೆ, ಪ್ರಶಾಂತ, ಮಲ್ಲಿಕಾರ್ಜುನ ಟೇಕರಾಜ ಸೇರಿದಂತೆ ಇನ್ನಿತರರಿದ್ದರು.

# ನೆಟ್‌ಬಾಲ್ ಸಾಹಿತ್ಯ ಗೊಂಡಬಾಳಗೆ ಚಿನ್ನದ ಗರಿ

**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ಇಲ್ಲಿನ ಶ್ರೀ ಚೈತನ್ಯ ಸಮೂಹ ಸಂಸ್ಥೆಯ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನ ದ್ವಿತಿಯ ಪಿಯು ವಿದ್ಯಾರ್ಥಿನಿ ಸಾಹಿತ್ಯ ಮಂಜುನಾಥ ಗೊಂಡಬಾಳ 19 ವರ್ಷದೊಳಗಿನ ಕರ್ನಾಟಕ ತಂಡದಲ್ಲಿ ಆಡಿ ರಾಷ್ಟ್ರೀಯ ಶಾಲಾ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆಗೆ, ರಾಜ್ಯಕ್ಕೆ ಕೀರ್ತಿ ತಂದಿದ್ದಾಳೆ.

ಮಂಗಳೂರಿನ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕೇಂದ್ರದಲ್ಲಿ ಸ್ಕೂಲ್ ಗೇಮ್ಸ್ ಆಫ್ ಇಂಡಿಯಾ, ಕರ್ನಾಟಕ ಸರಕಾರ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಮತ್ತು ಸ್ವಾಮಿ ವಿವೇಕಾನಂದ ಪದವಿಪೂರ್ವ ಕಾಲೇಜು ಎಡಪದವು ಇವರ ಆಶ್ರಯದಲ್ಲಿ ಡಿ. 25 ರಿಂದ ಡಿ. 29 ರವರೆಗೆ ಆಯೋಜನೆಗೊಂಡಿದ್ದ 19 ವರ್ಷದೊಳಗಿನ ಬಾಲಕ ಬಾಲಕಿಯರ ರಾಷ್ಟ್ರೀಯ ನೆಟ್‌ಬಾಲ್ ಕ್ರೀಡಾಕೂಟದಲ್ಲಿ 12 ಜನರ ಕರ್ನಾಟಕ ತಂಡಕ್ಕೆ ಆಯ್ಕೆಯಾಗಿ, ಕ್ಯಾಂಪನಲ್ಲಿ ತರಬೇತಿ ಹೊಂದಿ ಕರ್ನಾಟಕದ ಐತಿಹಾಸಿಕ ದಾಖಲೆಯ ಮೊದಲ ಬಾರಿ ಚಿನ್ನದ ಪದಕ ಗೆದ್ದ ತಂಡದಲ್ಲಿದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾಳೆ.

ಇಲ್ಲಿನ ಸಮಾಜ ಸೇವಕರಾದ ಮಂಜುನಾಥ ಜಿ. ಗೊಂಡಬಾಳ ಮತ್ತು ಜ್ಯೋತಿ ಎಂ. ಗೊಂಡಬಾಳ ದಂಪತಿಯ ಪುತ್ರಿ ಬಹುಮುಖ ಪ್ರತಿಭೆ ಕು.



ಸಾಹಿತ್ಯ ಎಂ. ಗೊಂಡಬಾಳ 2023–24 ನೇ ಸಾಲಿನ ಬಹುಮುಖ ಪ್ರತಿಭೆ ವಿಭಾಗದಲ್ಲಿ ಸಂಗೀತ, ವೆಸ್ಟರ್ನ್ ನೃತ್ಯ, ಭರತನಾಟ್ಯ ಸೇರಿದಂತೆ ಗಿಟಾರ್ ವಾದನ, ಕೀಬೋರ್ಡ್, ಹಾರ್ಮೋನಿಯಂ ನುಡಿಸುವದು, ಮತ್ತು ಮೌಥ್ ಪಿಯಾನೋದಲ್ಲಿ ಪರಿಣಿತಿಯನ್ನು ಹಾಗೂ ಕ್ರೀಡಾ ಕ್ಷೇತ್ರದ ಸಾಧನೆ ಪರಿಗಣಿಸಿ ರಾಜ್ಯಮಟ್ಟದ ಬಾಲಗೌರವ ಪ್ರಶಸ್ತಿ ಪಡೆದಿದ್ದಳು. ಕೊಪ್ಪಳಕ್ಕೆ ಮೊದಲ ಸಲಾ ರಾಜ್ಯಮಟ್ಟದ ದಸರಾ ಸಿಎಂ ಕಪ್ ನೆಟ್‌ಬಾಲ್ ಕಂಚಿನ ಪದಕ, ಪೆಂಕಾಕ್ ಸಿಲತ್‌ನಲ್ಲಿ ರಾಜ್ಯ ಮತ್ತು ರಾಷ್ಟಮಟ್ಟದ ಪದಕ ಪಡೆದಿದ್ದು, ಜಂಪ್ ರೋಪ್ ಕ್ರೀಡೆ, ಕರಾಟೆ, ಏರ್‌ರೈಫಲ್‌ನಲ್ಲಿ ಸಹ ತರಬೇತಿ ಹೊಂದುತ್ತಿದ್ದಾಳೆ. ಮಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ, ಡಿಡಿಪಿಯು ರಾಜೇಶ್ವರಿ, ಪ.ಪೂ. ಶಿಕ್ಷಣ ಇಲಾಖೆಯ ಕ್ರೀಡಾ ವಿಭಾಗದ ಸಹಾಯಕ ನಿರ್ದೇಶಕ ಶಿವಮಾದಯ್ಯ, ಪ.ಪೂ. ಶಿಕ್ಷಣ ಇಲಾಖೆಯ ರಾಜ್ಯ ಕ್ರೀಡಾ ಸಂಯೋಜಕ ಗೋಪಾಲಗೌಡ, ಕಾರ್ಯಕ್ರಮ ಸಂಘಟಕ ಪ್ರೇಮನಾಥ ಶೆಟ್ಟಿ, ತಂಡದ ಮ್ಯಾನೇಜರ್ ಅಪರ್ಣಾ ಸೇರಿ ಅನೇಕರು ಇದ್ದರು.

ಕೊಪ್ಪಳ ಜಿಲ್ಲೆಯ ಡಿಡಿಪಿಯು ಜಗದೀಶ ಅವರ ಪರವಾಗಿ ಜಿಲ್ಲಾ ಪಪೂ ಕ್ರೀಡಾ ಸಂಯೋಜ ತಿರುಪತಿ ನಾಯಕ, ನೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ಅಬ್ದುಲ್ ರಜಾಕ್, ಕ್ರೀಡಾ ನಿರ್ದೇಶಕ ಗವಿಸಿದ್ದಪ್ಪ, ಸ್ವಾಮಿ ವಿವೇಕಾನಂದ ಕಾಲೇಜಿನ ಪ್ರಾಂಶುಪಾಲ ಸತೀಶ ಅವರು ಅಭಿನಂದಿಸಿದ್ದಾರೆ.

ರಾಷ್ಟ್ರೀಯ ನೆಟ್ ಬಾಲ್ ವಿಜೇತ ಕರ್ನಾಟಕದ ಬಾಲಕಿಯರ ತಂಡ : ನಿಖಿತಾ, , ಸುಪ್ರಿಯಾ ಹೆಚ್. ಎಸ್., ಸಾಹಿತ್ಯ ಎಂ. ಗೊಂಡಬಾಳ, ಹೇಮಾ ಮನ್ನೂರ, ಹರ್ಷಿತಾ ಎಲ್., ತಪಸ್ಯಾ ಎಸ್. ನಾಯಕ್, ರಕ್ಷಾ, ಸಿಂಚನಾಲಾವಣ್ಯ ಎಂ. ಎನ್., ಲಕ್ಷ್ಮೀ ಮಹಾದೇವ, ಇಂದು ಜಿ., ನಿಸರ್ಗ ಹೆಚ್. ಎಸ್., ನಿತ್ಯಾಶ್ರೀ, ದೀಪ್ತಿ ಹೆಚ್. ಎಸ್., ಸಂಧ್ಯಾ, ವಿದ್ಯಾ, ಅನ್ವಿತಾ.

# ಕಾಂಗ್ರೆಸ್ ಸರ್ಕಾರ ಕನ್ನಡಿಗರ ಸ್ವಾಭಿಮಾನವನ್ನು ಕೇರಳಕ್ಕೆ ಅಡವಿಟ್ಟಿದೆ: ರಾಮುಲು



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ರಾಜ್ಯ ರಾಜಧಾನಿ ಬೆಂಗಳೂರಿನ ಯಲಹಂಕ ಬಳಿಯ ಕೋಗಿಲು ಬಡಾವಣೆ ತ್ಯಾಜ್ಯ ವಿಲೇವಾರಿ ಜಾಗದ ಅಕ್ರಮ ಒತ್ತುವರಿ ತೆರವು ಪ್ರಕರಣದಲ್ಲಿ ವಿಚಾರದಲ್ಲಿ ಕೇರಳ ನಾಯಕರ ಮಧ್ಯಪ್ರವೇಶಕ್ಕೆ ಬಿಜೆಪಿಯ ಹಿರಿಯ ಧುರೀಣ ಮಾಜಿ ಸಚಿವ ಬಿ.ಶ್ರೀರಾಮುಲು ತೀವ್ರ ಆಕ್ಷೇಪ ವ್ಯಕ್ತಪಡಿಸಿ ರಾಜ್ಯದ ಕಾಂಗ್ರೆಸ್ ಸರ್ಕಾರ ಕನ್ನಡಿಗರ ಸ್ವಾಭಿಮಾನವನ್ನು ಕೇರಳಕ್ಕೆ ಅಡವಿಟ್ಟಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ನಗರದ ಹವಾಂಬಾವಿ ಪ್ರದೇಶದಲ್ಲಿರುವ ಅವರ ನಿವಾಸದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಕೋಗಿಲು ಸಮೀಪ ಅಕ್ರಮ ಕಟ್ಟಡಗಳ ನೆಲಸಮ ವಿಚಾರದಲ್ಲಿ ಕೇರಳದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಮತ್ತು ಅಲ್ಲಿನ ಸಂಸದ ಕೆ.ಸಿ.ವೇಣುಗೋಪಾಲ್ ಅವರು ಮಧ್ಯೆ ಪ್ರವೇಶಿಸಿರುವುದು ಖಂಡನೀಯ' ಎಂದು ಹಿರಿಯ ಬಿಜೆಪಿ ನಾಯಕ ಶ್ರೀರಾಮುಲು ಆಕ್ಷೇಪಿಸಿದ್ದಾರೆ.

ಅಕ್ರಮವಾಗಿ ಮನೆ ಕಟ್ಟಿಕೊಂಡ ಅಲ್ಪಸಂಖ್ಯಾತರ ಪರವಾಗಿ ಕೇರಳದ ಕಮ್ಯುನಿಸ್ಟ್ ಮತ್ತು ಕಾಂಗ್ರೆಸ್ ನಾಯಕರು ಒಂದಾಗಿದ್ದಾರೆ. ಕರ್ನಾಟಕದ ವಿಷಯದಲ್ಲಿ ತಲೆ ಹಾಕಲು ಇವರು ಯಾರು? ಒಂದು ಕಡೆ ಪಿಣರಾಯಿ ವಿಜಯನ್‌ಗೆ ತಿರುಗೇಟು ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೆ.ಸಿ.ವೇಣುಗೋಪಾಲ್‌ಗೆ ಅದೇ ರೀತಿ ತಿರುಗೇಟು ಏಕೆ ನೀಡಿಲ್ಲ' ಎಂದೂ ಪ್ರಶ್ನಿಸಿದ್ದಾರೆ. ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರನ್ನು ಆಯ್ಕೆ ಮಾಡಿರುವುದು ಕರ್ನಾಟಕದವರಾ ಅಥವಾ ಕೇರಳದವರಾ? ಸರ್ಕಾರದ ಕ್ರಮವನ್ನು ಬಲವಾಗಿ ಸಮರ್ಥಿಸಿಕೊಂಡು ಕೇರಳದ ಮುಖ್ಯಮಂತ್ರಿಗೆ ಉತ್ತರ ನೀಡಿರುವ ನೀವು ಎಐಸಿಸಿಯ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರಿಗೆ ಅದೇ ಧಾಟಿಯಲ್ಲಿ ಉತ್ತರ ನೀಡುವ ಧೈರ್ಯ ಮತ್ತು ತಾಕತ್ತು ಇದೆಯಾ ಅಥವಾ ದೆಹಲಿಯಿಂದ ಕರೆ ಬಂದ ಬಳಿಕ ನಿಮ್ಮ ನಿಲುವು ಬದಲಿಸಿದ್ದೀರಾ' ಎಂದೂ ಅವರು ಪ್ರಶ್ನಿಸಿದ್ದಾರೆ.

ದೆಹಲಿಯಲ್ಲಿ ತೆರೆಮರೆಯಲ್ಲಿ ಕುಳಿತು ನಿರ್ದೇಶನ ನೀಡುವವರು ನಿಮ್ಮನ್ನು ಗೆಲ್ಲಿಸಿದ್ದಲ್ಲ. ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಯವರು ಕುರ್ಚಿ ಕದನದಲ್ಲಿ ನಿರತರಾಗಿದ್ದಾರೆ. ಹೀಗಾಗಿ ಕರ್ನಾಟಕದಲ್ಲಿ ಏನಾಗಬೇಕು ಎಂಬ ಮಹತ್ವದ ತೀರ್ಮಾನಗಳನ್ನು ತೆಗೆದುಕೊಳ್ಳುತ್ತಿರುವುದು ದೆಹಲಿಯೇ ಹೊರತು ಬೆಂಗಳೂರು ಅಲ್ಲ' ಎಂದು ಶ್ರೀರಾಮುಲು ಕುಟುಕಿದ್ದಾರೆ. ಕೇರಳ ಚುನಾವಣೆಯಲ್ಲಿ ಮುಸ್ಲಿಮರ ಮತ ದಕ್ಕಿಸಿಕೊಳ್ಳಲು ಅಕ್ರಮ ಮನೆಗಳ ಧ್ವಂಸ ಪ್ರಕರಣವನ್ನು ಅಲ್ಲಿನ ರಾಜಕಾರಣಿಗಳು ಬಳಸಿಕೊಳ್ಳುತ್ತಿದ್ದಾರೆ ಎಂದ ಶ್ರೀರಾಮುಲು ರಾಜ್ಯದ ಅನೇಕ ಜಿಲ್ಲೆಗಳಲ್ಲಿ ನಿಯಮ ಬದ್ಧವಾಗಿ ಮನೆ ಕಟ್ಟಿಕೊಂಡವರಿಗೆ ನಿತ್ಯವೂ ಕಿರುಕುಳ ನೀಡುವ ಕಾಂಗ್ರೆಸ್ ಸರ್ಕಾರ ಕೋಗಿಲು ಬಡಾವಣೆಯಲ್ಲಿ ಅಕ್ರಮವಾಗಿ ಮನೆ ಕಟ್ಟಿಕೊಂಡಿದ್ದರೂ ಅಲ್ಪಸಂಖ್ಯಾತರ ಪರವಾಗಿ ಮಾತನಾಡುತ್ತಿರುವುದು ಖಂಡನೀಯ ಎಂದರು.

ಕೇರಳ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಅಲ್ಲಿನ ರಾಜಕೀಯ ನಾಯಕರು ಕೋಗಿಲು ಬಡಾವಣೆಯ ಅಕ್ರಮ ನಿವಾಸಿಗಳ ತೆರವುಗೊಳಿಸಿರುವ ಕ್ರಮವನ್ನು ಖಂಡಿಸುತ್ತಿದ್ದಾರೆ. ಇದಕ್ಕೆ ರಾಜ್ಯ ಕಾಂಗ್ರೆಸ್ ನಾಯಕರು ಅವಕಾಶ ಮಾಡಿಕೊಟ್ಟಿದ್ದಾರೆ" ಎಂದು ಹರಿಹಾಯ್ದಿದ್ದರು. ಇನ್ನು ಕೋಗಿಲು ಬಡಾವಣೆಯಲ್ಲಿ ಅಕ್ರಮ ವಲಸಿಗರಿಂದ ಹಣ ಪಡೆದು ಮನೆಗಳನ್ನು ಕಟ್ಟಿಕೊಳ್ಳಲು ಅವಕಾಶ ಮಾಡಿಕೊಟ್ಟಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ. ಕಾನೂನು ಸುವ್ಯವಸ್ಥೆ ಉತ್ತಮವಾಗಿದೆ ಎಂದು ತಮ್ಮ ಬೆನ್ನನ್ನೇ ತಾವೇ ತಟ್ಟಿಕೊಳ್ಳುವ ಗೃಹ ಸಚಿವ ಡಾ. ಪರಮೇಶ್ವರ್ ಅವರ ಕಾರ್ಯವೈಖರಿಗೆ ಮತ್ತೊಮ್ಮೆ ರಾಜ್ಯದ ಮಾನ ಹರಜಾಗಿದೆ. ಹಿಂದೆ ಪಂಜಾನಲ್ಲಿ ಮಾತ್ರ ಸಮಾಜಘಾತುತ ಶಕ್ತಿಗಳು ಡ್ರಗ್ಸ್ ದಂಧೆ ಮೂಲಕ ಸರ್ಕಾರವನ್ನು ನಿಯಂತ್ರಣ ಮಾಡುತ್ತಿದ್ದರಿಂದಲೇ ರಾಷ್ಟ ಮಟ್ಟದಲ್ಲಿ ಪಂಜಾನ್ನು ಉಡ್ತಾ ಪಂಜಾಬ್ ಎಂದು ಕರೆಯುತ್ತಿದ್ದರು. ಶಾಂತಿ, ಸುವ್ಯವಸ್ಥೆಗೆ ದೇಶದಲ್ಲೇ

ಹೆಸರುವಾಸಿಯಾಗಿದ್ದ ರಾಜ್ಯವು ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ರಾಷ್ಟ್ರಮಟ್ಟದಲ್ಲಿ ಉಡ್ತಾ ಕರ್ನಾಟಕ ಆಗುತ್ತಿರುವುದು ಅತ್ಯಂತ ನೋವಿನ ಸಂಗತಿ. ನೆಲಕ್ಕೆ ಬಿದ್ದರೂ ಮೀಸೆ ಮಣ್ಣಾಗಲಿಲ್ಲ ಎಂಬಂತೆ ನಮ್ಮ ಅದಕ್ಷ ಗೃಹ ಸಚಿವರು ಮಹಾರಾಷ್ಟ್ರ ಮತ್ತು ಕರ್ನಾಟಕ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ 1, ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದಾರೆ ಎಂದು ಹೇಳುತ್ತಿರುವುದು ನಾಚಿಕೆಗೇಡಿನ ಸಂಗತಿ.

ವಾಸ್ತವವಾಗಿ ಮಹಾರಾಷ್ಟ್ರದ ಐಎಟಿಎಫ್ ಪೊಲೀಸರು ಬೆಂಗಳೂರಿನಲ್ಲಿ 3 ಡ್ರಗ್ಸ್ ಕಾರ್ಖಾನೆಗಳು ಹಾಗೂ 55,ಕೋಟಿ 88 ಲಕ್ಷ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿರುವ ವಿಷಯವೇ ಪೊಲೀಸರು ಗೃಹ ಸಚಿವರಿಗೆ ಗೊತ್ತೇ ಇರಲಿಲ್ಲ. ಆದರೂ ಝೀ–ರೊ ಟ್ರಾಫಿಕ್ ಸಚಿವರು ಸಮರ್ಥನೆ ಮಾಡಿಕೊಳ್ಳುತ್ತಿರುವುದು ದುರದೃಷ್ಟವೇ ಸರಿ. ನೀವು ಯಾವಾಗಲೂ ನ್ಯಾಯದ ಪರವಾಗಿ ನಿಲ್ಲುವುದಿಲ್ಲ ಎಂಬುದು ಮೊದಲಿನಿಂದಲೂ ಸಾಬೀತಾಗಿದೆ. ಪಾಕ್ ಪರ ಘೋಷಣೆ ಕೂಗಿದವರ ಬೆನ್ನಿಗೆ ನಿಂತಿದ್ದೀರಿ, ಉಡುಪಿ ಕಾಲೇಜಿನ ಶೌಚಾಲಯದಲ್ಲಿ ವಿಡಿಯೋ

ಮಾಡಿದವರ ಬೆನ್ನಿಗೆ ನಿಂತಿದ್ದೀರಿ. ಡಿಜೆ ಹಳ್ಳಿ ಕೆಜಿ ಹಳ್ಳಿಯಲ್ಲಿ ಗಲಭೆ ಮಾಡಿದ ಮತಾಂಧರ ಬೆನ್ನಿಗೆ ನಿಂತಿದ್ದೀರಿ. ಹುಬ್ಬಳ್ಳಿ ಗಲಭೆಕೋರರ ಬೆನ್ನಿಗೆ ನಿಂತಿದ್ದೀರಿ, ಕುಕ್ಕರ್ ಬಾಂಬ್ ಸ್ಫೋಟಿಸಿದ ಉಗ್ರರ ಪರವಾಗಿ ನಿಂತಿದ್ದೀರಿ, ಶಿವಮೊಗ್ಗದಲ್ಲಿ ಕಲ್ಲು ತೂರಿದ ಮತಾಂಧರ ಬೆನ್ನಿಗೆ ನಿಂತಿದ್ದೀರಿ, ಬೆಳಗಾವಿ ಸುರ್ಣಸೌಧದಲ್ಲಿ

ಗೂಂಡಾಗಿರಿ ಮಾಡಿದವರ ಬೆನ್ನಿಗೆ ನಿಂತಿದ್ದೀರಿ. ಈ ಸಂದರ್ಭದಲ್ಲಿ ಪಾಲಿಕೆಯ ವಿರೋಧ ಪಕ್ಷ ನಾಯಕ ಶ್ರೀನಿವಾಸ ಮೊತ್ಕರ್, ಪಾಲಿಕೆಯ ಸದಸ್ಯರಾದ ಸಿ. ಇಬ್ರಾಹಿಂ ಬಾಬು, ಗೋವಿಂದ, ಹನುಮಂತಪ್ಪ, ಕಲ್ಪನ, ಈರಮ್ಮ, ಗುಡಿಗಂಟೆ ಹನುಮಂತ, ಮುಖಂಡರಾದ ಮಲ್ಲನಗೌಡ, ಶ್ರೀಧರ್, ಭೀಮಲಿಂಗ, ಸುರೇಂದ್ರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪತ್ರಕರ್ತರ ಸಂಘದ ನಿಧಿಗೆ 2 ಲಕ್ಷ ರೂ ನೀಡಿದ ಶಾಸಕ ನಾರಾ ಭರತ್ ರೆಡ್ಡಿ, ಬಿ.ನಾಗೇಂದ್ರ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಳ್ಳಾರಿ ಜಿಲ್ಲಾ ಘಟಕಕ್ಕೆ ನಗರ ಶಾಸಕ ನಾರಾ ಭರತ್ ರೆಡ್ಡಿ, ಹಾಗೂ ಮಾಜಿ ಸಚಿವರು, ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ತಲಾ ಎರೆಡು ಲಕ್ಷ ರೂಗಳ ದೇಣಿಗೆ ನೀಡಿದ್ದಾರೆ.

ಅವರು ಇಂದು ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ನಡೆದ ಪತ್ರಕರ್ತರ ಪದಗ್ರಹಣ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಬಿ.ನಾಗೇಂದ್ರ ಅವರು ಸಮಾರಂಭದಲ್ಲಿಯೇ ಕ್ಷೇಮಾಭಿವೃದ್ಧಿ ನಿಧಿಗೆ ಸ್ಥಳದಲ್ಲಿಯೇ ಹಣ ನೀಡಿ. ಈಬಾರಿ ಪತ್ರಕರ್ತರು ಚುನಾವಣೆ ಮೂಲಕ ಆಯ್ಕೆಯಾಗುವುದರಿಂದ ರಾಜಕಾರಣಿಗಳ ಸಂಕಷ್ಟ ಹೇಗಿರುತ್ತದೆ ಎಂಬುದು ನಿಮಗೂ ಅರ್ಥವಾದಂತಿದೆ. ಬಳ್ಳಾರಿ ಪತ್ರಕರ್ತರ ಪ್ರಶ್ನೆಗಳು ಸಮಾಜಮುಖಿ ಇರುತ್ತವೆ. ಯಾವುದೇ ಮುಲಾಜಿಲ್ಲದೆ ಪ್ರಶ್ನಿಸುವ ಸ್ವಭಾವ ಸ್ವಾಗತಾರ್ಹ ಎಂದರು. ಬಳ್ಳಾರಿ ಪತ್ರಕರ್ತರ ಬಗ್ಗೆ ಭಯ, ಭಕ್ತಿ, ಗೌರವ ಇದೆ. ನಿಮ್ಮ ಸಂಘದ ಬೆನ್ನೆಲುಬಾಗಿ ಇರುತ್ತೇವೆ ಜಿಲ್ಲೆಯ ಎಲ್ಲಾ ಜನ ಪ್ರತಿನಿಧಿಗಳು ಸರ್ಕಾರದ ಸೌಲಭ್ಯಗಳನ್ನು ನಿಮಗೆ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಿದೆ. ಪತ್ರಿಕಾ ಭವನದ ಮೇಲೆ




ಸಹೋದರ ಶಾಸಕ ಭರತ್ ಮತ್ತು ನಾನು ಶಾಸಕರ ನಿಧಿಯಿಂದ ಕಟ್ಟಡ ನಿರ್ಮಾಣಕ್ಕೆ 20 ಲಕ್ಷ ರೂ ಅನುದಾನ ನೀಡುವುದಾಗಿ ಘೋಷಣೆ ಮಾಡಿದರು. ಗೆದ್ದವರೂ ಸೋತವರೂ ಎಲ್ಲರೂ ಒಂದಾಗಿ ಸಂಘದ ಅಭಿವೃದ್ಧಿಗೆ ಶ್ರಮಿಸಲು ಕೋರಿದರು. ರಾಜಕೀಯ ಮತ್ತು ಪತ್ರಿಕೋದ್ಯಮ ಜೋಡೆತ್ತುಗಳಿದ್ದಾಗೆ. ಜಿಲ್ಲೆಯ ಎಲ್ಲಾ ಜನ ಪ್ರತಿನಿಧಿಗಳು ಜಿಲ್ಲೆಯ ಅಭಿವೃದ್ಧಿಗೆ ಸಂಕಲ್ಪ ಮಾಡಿದೆ ನಿಮ್ಮ ಸಹಕಾರವೂ ಅಗತ್ಯ ಎಂದರು. ಸುಳ್ಳು ಸುದ್ದಿಗಳಿಂದ ಮನಸ್ಸಿಗೆ ನೋವಾಗುತ್ತದೆ ಆ ಕೆಲಸ ಮಾಡಬೇಡಿ ಎಂದು ಮನವಿ ಮಾಡಿದರು.

ನಗರ ಶಾಸಕ ಭರತ್ ರೆಡ್ಡಿ ಅವರು ಕ್ಷೇಮಾಭಿವೃದ್ಧಿಗೆ ಎರೆಡು ಲಕ್ಷ ರೂ ನೀಡುವುದಾಗಿ ಘೋಷಣೆ ಮಾಡಿ, ನೀವಿಲ್ಲದಿರೆ ನಾವಿಲ್ಲ, ನಾವಿಲ್ಲ ದಿದ್ದಿದರೆ ನೀವಿಲ್ಲ ಎಂಬಂತೆ ಕೆಲಸ ಮಾಡಿದಾಗ ಸಮಾಜಕ್ಕೆ ಒಳಿತಾಗುತ್ತದೆ. ಅಭಿವೃದ್ಧಿ ಕೆಲಸಗಳಿಗೆ ಅನೇಕ ಅಡ್ಡಿ ಆತಂಕಗಳು ಇರುತ್ತವೆ ಅವನ್ನು ಮೀರಿ ಕೆಲಸ ಮಾಡಲಾಗುತ್ತಿದೆಂದರು. ಹೊಸ ವರ್ಷದಲ್ಲಿ ನಾಗೇಂದ್ರ ಅಣ್ಣ ಅವರು ಸಚಿವರಾಗುತ್ತಾರೆ, ಆನಂತರ ಇದು ಸುವರ್ಣ ಬಳ್ಳಾರಿಯಾಗುವುದರಲ್ಲಿ ಅನುಮಾನ ಇಲ್ಲ. ಪತ್ರಿಕಾ ಭವನದ ಅಭಿವೃದ್ಧಿಗೆ ಅಗತ್ಯವಾದಷ್ಟು ಅನುದಾನ ನೀಡಲಿದೆಂದು ಹೇಳಿದರು. ವಾರ್ತಾ ಇಲಾಖೆಯ ಅಧಿಕಾರಿ ಗುರುರಾಜ್ ಮೊದಲಾದವರು ಇದ್ದರು.

# ಅಂತರ ಜಿಲ್ಲಾ ಸೈಕ್ಲಿಂಗ್ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ನವನಗರದ ಯುನಿಟ್-2ರಲ್ಲಿ ಹಮ್ಮಿಕೊಂಡ 2025-26ನೇ ಸಾಲಿನ ಅಂತರ ಜಿಲ್ಲಾ ಕ್ರೀಡಾ ವಸತಿ ನಿಲಯಗಳ ಸೈಕ್ಲಿಂಗ್ ಕ್ರೀಡಾಕೂಟ-ಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಮಂಗಳವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡ ಸೈಕ್ಲಿಂಗ್ ಕ್ರೀಡಾಕೂಟಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಅಥ್ಲೆಟಿಕ್ಸ್‌ನಲ್ಲಿ ಸೈಕ್ಲಿಂಗ್ ಕ್ರೀಡೆ ಒಂದಾಗಿದ್ದು, ಇದರಲ್ಲಿ ಉತ್ತಮ ಸಾಧನೆ ಮಾಡಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಸೈಕ್ಲಿಂಗ್ ತರಬೇತಿದಾರರಾದ ಅನಿತಾ ನಿಂಬರಗಿ, ಅಲ್ಕಿ ಪಡತಾರೆ, ವಿದ್ಯಾ ಕುಲಕರ್ಣಿ, ಯಲ್ಲಪ್ಪ ಹಿರೇಕುರಬರ, ಶ್ರೀಶೈಲ ಲಾಯನ್ನವರ, ರಮೇಶ ರಾಠೋಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಫಲಿತಾಂಶ: 5 ರಿಂದ 7ನೇ ತರಗತಿಯ ಬಾಲಕರ ವಿಭಾಗದಲ್ಲಿ ಮಾರುತಿ ಚೌದಾಳ (ಪ್ರಥಮ), ಸಂಗನಬಸವ ಬನಗೊಡೆ(ದ್ವಿತೀಯ), ಶ್ರೇಯಸ್ ಬಗಲಿ(ತೃತೀಯ), ಬಾಲಕಿಯರ ವಿಭಾಗದಲ್ಲಿ ಸಹನಾ ಮುತ್ತಾಳ (ಪ್ರಥಮ), ಯಲ್ಲವ್ವ ಮದಭಾವಿ(ದ್ವಿತೀಯ), ವಿದ್ಯಾ ಲಮಾಣಿ(ತೃತೀಯ).

8 ರಿಂದ 10ನೇ ತರಗತಿಯ ಬಾಲಕರ ವಿಭಾಗದಲ್ಲಿ ಶ್ರೀಶೈಲ ನಾದ (ಪ್ರಥಮ), ವಿಶ್ವನಾಥ ಉರಡೆಪ್ಪಗೋಳ (ದ್ವಿತೀಯ), ಬಸವರಾಜ ಯಳಮನಿ(ತೃತೀಯ), ಬಾಲಕಿಯರ ವಿಭಾಗದಲ್ಲಿ ಪ್ರೀಯಾಂಕ ಲಮಾನಿ (ಪ್ರಥಮ), ಕರಿಷ್ಮಾ ತಟಗಾರ (ದ್ವಿತೀಯ), ಕೌಶಲ್ಯ ರಾಮಗೊಂಡ (ತೃತೀಯ).

ಪ್ರಥಮ ಪಿಯುಸಿಯಿಂದ ಪದವಿವರೆಗಿನ ಬಾಲಕರ ವಿಭಾಗದಲ್ಲಿ ಅರವಿಂದ ರಾಠೋಡ (ಪ್ರಥಮ), ಶ್ರೀನಿವಾಸ ರಜಪೂತ (ದ್ವಿತೀಯ), ಪುನಿತ್ ಬಿರಾದಾರ (ತೃತೀಯ), ಬಾಲಕಿಯರ ವಿಭಾಗದಲ್ಲಿ ಜ್ಯೋತಿ ರಾಠೋಡ (ಪ್ರಥಮ), ಮಧು ಬೆಂಡಿಗೇರಿ (ದ್ವಿತೀಯ), ಅಮೂಲ್ಯ ಪೂಜಾರಿ (ತೃತೀಯ) ಸ್ಥಾನ ಪಡೆದುಕೊಂಡರು.

ಟೈಮ್ ಟ್ರಯಲ್ ಸ್ಪರ್ಧೆ: 5 ರಿಂದ 7ನೇ ತರಗತಿಯ ಬಾಲಕರ ವಿಭಾಗದಲ್ಲಿ ಗದಗ ಜಿಲ್ಲೆಯ ಮಾರುತಿ ಚೌದಾಳ (ಪ್ರಥಮ), ವಿಜಯಪುರ ಜಿಲ್ಲೆಯ ಸಮರ್ಥ ಪಾಟೀಲ (ದ್ವಿತೀಯ), ಶ್ರೇಯಸ್ ಬಗಲಿ (ತೃತೀಯ), ಬಾಲಕಿಯರ ವಿಭಾಗದಲ್ಲಿ ಬಾಗಲಕೋಟೆಯ ಸಹನಾ ಮುತ್ತಾಳ (ಪ್ರಥಮ), ವಿಜಯಪುರದ ಯಲ್ಲಪ್ಪ ಮದಭಾವಿ (ದ್ವಿತೀಯ), ಬಾಗಲಕೋಟೆಯ ವಿದ್ಯಾ ಲಮಾಣಿ (ತೃತೀಯ).

ಪ್ರಥಮ ಪಿಯುಸಿಯಿಂದ ಪದವಿವರೆಗಿನ ಬಾಲಕರ ವಿಭಾಗದಲ್ಲಿ ಅರವಿಂದ ರಾಠೋಡ (ಪ್ರಥಮ), ಶ್ರೀನಿವಾಸ ರಜಪೂತ (ದ್ವಿತೀಯ), ಪುನಿತ್ ಬಿರಾದಾರ (ತೃತೀಯ), ಬಾಲಕಿಯರ ವಿಭಾಗದಲ್ಲಿ ಮಧು ಬೆಂಡಿಗೇರಿ (ಪ್ರಥಮ), ಜ್ಯೋತಿ ರಾಠೋಡ (ದ್ವಿತೀಯ), ಅಮೂಲ್ಯ ಪೂಜಾರಿ (ತೃತೀಯ) ಸ್ಥಾನ ಪಡೆದುಕೊಂಡರು.

8 ರಿಂದ 10ನೇ ತರಗತಿಯ ಬಾಲಕರ ವಿಭಾಗದಲ್ಲಿ ಸಂಗಮೇಶ ತೋಳಮಟ್ಟಿ (ಪ್ರಥಮ), ಶ್ರೀಶೈಲ ನಾದ (ದ್ವಿತೀಯ), ಅಭಿಷೇಕ ದಿಡ್ಡಿಬಾಗಿಲ (ತೃತೀಯ), ಬಾಲಕಿಯರ ವಿಭಾಗದಲ್ಲಿ ಪ್ರೀಯಾಂಕ ಲಮಾನಿ (ಪ್ರಥಮ), ಸಂಗವ್ವ ಬನಗೊಂಡ (ದ್ವಿತೀಯ), ಕರಿಷ್ಮಾ ತಟಗಾರ (ತೃತೀಯ). ಪ್ರಥಮ ಪಿಯುಸಿಯಿಂದ ಪದವಿವರೆಗಿನ ಬಾಲಕರ ವಿಭಾಗದಲ್ಲಿ ಶ್ರೀನಿವಾಸ ರಜಪೂತ (ಪ್ರಥಮ), ಬಾಹುಬಲಿ ಪಾಟೀಲ (ದ್ವಿತೀಯ), ಕೃಷ್ಣ ಭಂಗಿ (ತೃತೀಯ), ಬಾಲಕಿಯರ ವಿಭಾಗದಲ್ಲಿ ಮಧು ಬೆಂಡಿಗೇರಿ (ಪ್ರಥಮ), ಜ್ಯೋತಿ ರಾಠೋಡ (ದ್ವಿತೀಯ), ಅಮೂಲ್ಯ ಪೂಜಾರಿ (ತೃತೀಯ) ಸ್ಥಾನ ಪಡೆದು-ಕೊಂಡರು.

# 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' 90 ದಿನಗಳ ವಿಶೇಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಎಲ್ಲಾ ತಾಲ್ಲೂಕು ನ್ಯಾಯಾಲಯಗಳು ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮಧ್ಯಸ್ಥಿಕೆ ಮೂಲಕ ಇತ್ಯರ್ಥಪಡಿಸಲು ಜನವರಿ 02 ರಿಂದ 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' 90 ದಿನಗಳ ವಿಶೇಷ ಅಭಿಯಾನ 2.0 ಹಮ್ಮಿಕೊಳ್ಳಲಾಗಿದೆ.

ಸುಪ್ರೀಂ ಕೋರ್ಟ್ ನ ಮಧ್ಯಸ್ಥಿಕೆ ಮತ್ತು ಸಂಧಾನ ಯೋಜನಾ ಸಮಿತಿಯ ಸಹಯೋಗದೊಂದಿಗೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ 2.0" ಅಭಿಯಾನವನ್ನು ರೂಪಿಸಿದೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಮತ್ತು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಮಧ್ಯಸ್ಥಿಕೆ ಸಂಧಾನ ಯೋಜನಾ ಸಮಿತಿಯಿಂದ "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಅಭಿಯಾನ 2.0" (ಭಾರತದ ಎಲ್ಲಾ ತಾಲ್ಲೂಕು ನ್ಯಾಯಾಲಯಗಳು, ಜಿಲ್ಲಾ ನ್ಯಾಯಾಲಯಗಳು ಮತ್ತು ಹೈಕೋರ್ಟ್ ಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು 90 ದಿನಗಳ ಮಧ್ಯಸ್ಥಿಕೆ ಅಭಿಯಾನ) ಕುರಿತು ಸಮಯವನ್ನು ಜನವರಿ 02 ರಿಂದ ನಿಗದಿಪಡಿಸಲಾಗಿದೆ.

ಹಾಗಾಗಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜನವರಿ 02 ರಿಂದ 90 ದಿನಗಳ ವರೆಗೆ 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ' ಅಭಿಯಾನದಂತೆ ಮಧ್ಯಸ್ಥಿಕೆ ಮುಖಾಂತರ ರಾಜಿಯಾಗಬಹುದಾದ ಕ್ರಿಮಿನಲ್ ಮತ್ತು ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆ ಮುಖಾಂತರ ಇತ್ಯರ್ಥಪಡಿಸಲಿದ್ದು, ಈ ಅಭಿಯಾನಕ್ಕೆ ಎರಡೂ ಜಿಲ್ಲೆಯ ವಕೀಲರು ಮತ್ತು ಕಕ್ಷಿದಾರರು ಸಹ ಸಹಕಾರ ನೀಡಲಿರುವರು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಜಿ.ಶಾಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಪರೀಕ್ಷೆ: ಶೇ.100 ಫಲಿತಾಂಶ ಸರಕಾರಿ, ಅನುದಾನಿತ ಶಾಲೆಗಳಿಗೆ ನಗದು ಪುರಸ್ಕಾರ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಕಳೆದ 2022, 2023 ಹಾಗೂ 2024ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.100 ರಷ್ಟು ಫಲಿತಾಂಶ ಪಡೆದ ಸರಕಾರಿ ಹಾಗೂ ಅನುದಾನಿತ ಶಾಲೆಗಳಿಗೆ ಜಿಪಂ ಸಿಇಓ ಶಶಿಧರ ಕುರೇರ ಸ್ಮರಣಿಕೆ, ನಗದು ಪುರಸ್ಕಾರ ಹಾಗೂ ಪ್ರಮಾಣ ಪತ್ರವನ್ನು ನೀಡಿ ಅಭಿನಂದಿಸಿದರು.

ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಭವನದಲ್ಲಿ ಸೋಮವಾರ ಜಿಪಂ ಶಾಲಾ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಶಿಕ್ಷಣ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ದಿ ನಿಧಿ ಬೆಂಗಳೂರು ಸಹಯೋಗದಲ್ಲಿ ಹಮ್ಮಿಕೊಂಡ ಸಮಾರಂಭದಲ್ಲಿ 2022, 2023 ಹಾಗೂ 2024ನೇ ಸಾಲಿನ ಒಟ್ಟು 100 ಸರಕಾರಿ ಶಾಲೆಗಳು ಹಾಗೂ 26 ಅನುದಾನಿತ ಶಾಲೆಗಳಿಗೆ ತಲಾ 25 ಸಾವಿರ ರೂ.ಗಳಂತೆ ಒಟ್ಟು 32,23,200 ರೂ.ಗಳ ನಗದು ಪುರಸ್ಕಾರ ನೀಡಿ ಅಭಿನಂದಿಸಲಾಯಿತು.

ಮಾರ್ಚ 2022ನೇ ಸಾಲಿನ 29 ಸರಕಾರಿ, 8 ಅನುದಾನಿತ ಸೇರಿ ಒಟ್ಟು 37 ಶಾಲೆಗಳು, 2023ನೇ ಸಾಲಿನ 33 ಸರಕಾರಿ, 11 ಅನುದಾನಿತ ಸೇರಿ ಒಟ್ಟು 44 ಶಾಲೆಗಳು ಹಾಗೂ 2024ನೇ ಸಾಲಿನ 38 ಸರಕಾರಿ, 7 ಅನುದಾನಿತ ಸೇರಿ ಒಟ್ಟು 45 ಶಾಲೆಗಳ ಮುಖ್ಯೋಪಾಧ್ಯಾಯರ ಬ್ಯಾಂಕ್ ಖಾತೆಗೆ ಕ್ಷೇಮಾಭಿವೃದ್ದಿಗಳ ನಿಧಿಯಿಂದ ತಲಾ 25 ಸಾವಿರ ರೂ.ಗಳಂತೆ ಜಮೆ ಮಾಡಲು ಕ್ರಮವಹಿಸಲಾಗಿದೆ.

ಈ ವೇಳೆಯಲ್ಲಿ ಮಾತನಾಡಿದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಶೇ.100 ರಷ್ಟು ಎಸ್.ಎಸ್.ಎಲ್.ಸಿಯಲ್ಲಿ ಫಲಿತಾಂಶ ಪಡೆಯುವ ಮೂಲಕ ಇತರಿಗೆ ಮಾದರಿಯಾಗಿರುವುದು ಹೆಮ್ಮೆಯ ವಿಷಯವಾಗಿದೆ. ಜಿಲ್ಲೆಯ ಶಾಲೆಗಳ ಸಾಧನೆ ಹೀಗೆ ಮುಂದುವರಿಯಲಿ ಎಂದು ಆಶಿಸಿದರು. ಪ್ರತಿ ವರ್ಷ ಶೇ.100 ಫಲಿತಾಂಶ 2022ರಲ್ಲಿ 27 ಶಾಲೆಗಳು, 2023ರಲ್ಲಿ 44 ಹಾಗೂ 2024ರಲ್ಲಿ 45 ಶಾಲೆಗಳು ಪಡೆದುಕೊಂಡಿವೆ. ಸಾಧನೆಯಲ್ಲಿ ಏರಿಕೆ ಕಂಡುಬರುತ್ತಿದೆ. ಸಾಧನೆಗೆ ಕಾರಣರಾದ ಎಲ್ಲ ಶಿಕ್ಷಕರ ಬಳಗ ಹಾಗೂ ಅಧಿಕಾರಿ ವರ್ಗಕ್ಕೆ ಅಭಿನಂದನೆ ಸಲ್ಲಿಸಿದರು.

ವಿದ್ಯಾರ್ಥಿಗಳ ಬೆಳವಣಿಗೆ, ಒಳ್ಳೆಯ ವಾತಾವರಣ ಸೃಷ್ಠಿ ಹಾಗೂ ಮೂಲಭೂತ ಸೌಲಭ್ಯ ಸೇರಿದಂತೆ ಅನೇಕ ಸವಾಲುಗಳ ಮುಂದುವರಿಸಿಕೊಂಡು ಹೋಗಬೇಕು. ಯಾವುದೇ ಕಾರಣಕ್ಕೂ ಹಿಂದೆ ಸರಿಯಬಾರದು. ಇತರೆ ಶಾಲೆಯ ಮುಖ್ಯೋಪಾಧ್ಯಾಯರು ಫಲತಾಂಶ ಸುಧಾರಣೆ ಮಾಡಿ ಶೇ.100 ಫಲಿತಾಂಶ ಪಡೆಯುವ ಶಾಲೆಯ ಸಂಖ್ಯೆ ಹೆಚ್ಚಿಸುವ ಮೂಲಕ ಜಿಲ್ಲೆಗೆ ಒಳ್ಳೆಯ ಹೆಸರು ತರುವ ಕೆಲಸವಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಜಿ.ಮನ್ನಿಕೇರಿ, ಶಿಕ್ಷಣಾಧಿಕಾರಿ ಎಸ್.ಜಿ.ಮಿರ್ಜಿ, ಎಸ್.ಎಸ್.ಎಲ್.ಸಿ ಪರೀಕ್ಷೆ ಜಿಲ್ಲಾ ನೋಡಲ್ ಅಧಿಕಾರಿ ಎಸ್.ಎಸ್.ಹಾಲವರ, ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಂ.ಎಸ್.ಬಡದಾನಿ, ಜಾಸ್ಮೀನ್ ಕಿಲ್ಲೇದಾರ, ಸಮೀರ ಮುಲ್ಲಾ, ಆರ್.ಎಸ್.ಆದಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**



## ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಪ್ರಗತಿ ಪರಿಶೀಲನಾ ಸಭೆ

ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಬರುವ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕಾರ್ಯವಾಗಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ನವೆಂಬರ-2025 ಮಾಹೆಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರತಿಯೊಂದು ಇಲಾಖೆಯವರು ನಿಗಧಿಪಡಿಸಿದ ಅನುದಾನವನ್ನು ಖರ್ಚು ಮಾಡುವ ಮೂಲಕ ಸಮುದಾಯದ ಅಭಿವೃದ್ದಿಗೆ ಶ್ರಮಿಸಬೇಕು ಎಂದು ತಿಳಿಸಿದರು.

ಕೌಶಲ್ಯ ತರಬೇತಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಿದಾಗ ಶಾಲಾ ಕಾಲೇಜುಗಳಲ್ಲಿ ಕಲಿಕೆಯ ಜೊತೆಗೆ ಕೌಶಲ್ಯ ತರಬೇತಿ ಕೂಡಾ ಮಹತ್ವವಾಗಿದ್ದು, ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮವಹಿಸಬೇಕು. ನಿರುದ್ಯೋಗಿಗಳಿಗೆ ಕೌಶಲ್ಯ ತರಬೇತಿ ನೀಡಿ, ವಿವಿಧ ಇಲಾಖೆಯ ಯೋಜನೆಗಳ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳುವಂತಾಗಬೇಕು. ಅಂದಾಗ ಮಾತ್ರ ಅವರು ಆರ್ಥಿಕವಾಗಿ ಅಭಿವೃದ್ದಿ ಹೊಂದಲು ಸಾಧ್ಯವಾಗುತ್ತದೆ ಎಂದರು.

ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಮಾತನಾಡಿ, ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳ ಮಾಹಿತಿಯನ್ನು ಪಡೆದುಕೊಂಡು ಸರಕಾರ ಮೀಸಲಿಟ್ಟ ಅನುದಾನ ಸದ್ಬಳಕೆಯಾಗುವಂತೆ ಮಾಡಬೇಕು. ಈಗಾಗಲೇ ಎಷ್ಟು ಜನರಿಗೆ ಸರಕಾರದ ಯೋಜನೆಗಳು ತಲುಪಿ ಅವರ ಆರ್ಥಿಕ ಮಟ್ಟದ ಸುಧಾರಣೆ ಆಗಿರುವ ಬಗ್ಗೆ ತಿಳಿದು. ಲಾಭ ಪಡೆಯದ ಫಲಾನುಭವಿಗಳ ಪಟ್ಟಿ ಮಾಡಿಕೊಂಡು ಯೋಜನೆಗಳ ಸದುಪಯೋಗ ಪಡೆಯುವಂತೆ ಮಾಡುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಇಲಾಖೆವಾರು ನಿಗದಿಪಡಿಸಿದ ಪ್ರಗತಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಕಾರ್ಯವಾಗಬೇಕು. ಅಲ್ಲದೇ ಕಡಿಮೆ ಪ್ರಗತಿ ಸಾಧಿಸಿದ ಇಲಾಖೆಗಳು ಮುಂದಿನ ಸಭೆಯಲ್ಲಿ ಬಿಡುಗಡೆ-ಯಾದ ಅನುದಾನ ಸಂಪೂರ್ಣವಾಗಿ ಖರ್ಚು ಭರಿಸುವ ಮೂಲಕ ಪ್ರಗತಿ ಸಾಧಿಸಲು ಸೂಚನೆ ನೀಡಿದರು. ಜಮಖಂಡಿಯಲ್ಲಿ ಇರುವ ಅಂಬೇಡ್ಕರ ಭವನವನ್ನು ಸರಿಯಾಗಿ ನಿರ್ವಹಣೆ ಮಾಡದಿರುವ ಜಮಖಂಡಿ ನಗರಸಭೆ ಪೌರಾಯುಕ್ತರ ಮೇಲೆ ಅಸಮಾದಾನಗೊಂಡ ಜಿಲ್ಲಾಧಿಕಾರಿಗಳು ಭವನದ ದುರಸ್ಥಿಗೆ ಪಂಚಾಯತ್ ರಾಜ್ ಇಲಾಖೆಗೆ ತಿಳಿಸಿದರು.

ಪ್ರಸಕ್ತ ಸಾಲಿಗೆ ಪರಿಶಿಷ್ಟ ಜಾತಿಯ ಉಪಯೋಜನೆಯಡಿ ನಿಗಧಿಪಡಿಸಿದ ಒಟ್ಟು 132.79 ಕೋಟಿ ರೂ.ಗಳ ಪೈಕಿ 65.39 ಕೋಟಿ ರೂ.ಗಳಷ್ಟು ಅನುದಾನ ಬಿಡುಗಡೆಯಾಗಿದ್ದು, ಈ ಪೈಕಿ 46.71 ಕೋಟಿ ರೂ.ಗಳ ಅನುದಾನ ಖರ್ಚು ಮಾಡುವ ಮೂಲಕ ಶೇ.85.07 ರಷ್ಟು ಪ್ರಗತಿ ಸಾಧಿಸಿದರೆ, ಗಿರಿಜನ ಉಪಯೋಜನೆಯಡಿ ನಿಗದಿಪಡಿಸಿದ 26.74 ಕೋಟಿ ರೂ.ಗಳ ಪೈಕಿ 17.27 ಕೋಟಿ ರೂ.ಗಳಷ್ಟು ಬಿಡುಗಡೆ-ಯಾಗಿದ್ದು, ಈ ಪೈಕಿ 13.83 ಕೋಟಿ ರೂ.ಗಳಷ್ಟು ಖರ್ಚು ಮಾಡುವ ಮೂಲಕ ಶೇ.69 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಜಂಟಿ ಕೃಷಿ ನಿರ್ದೇಶಕ ರುದ್ರೇಶ, ಜಂಟಿ ತೋಟಗಾರಿಕೆ ನಿರ್ದೇಶಕ ರವೀಂದ್ರ ಹಕಾಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಪ್ರವಾಸೋದ್ಯಮ ಉಪನಿರ್ದೇಶಕ ಹಿತ್ತಲಮನಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿಶ್ವ ಮಾನವ ಪರಿಕಲ್ಪಣೆಯ ಕವಿ ಕುವೆಂಪು: ಶಾಸಕ ಪೂಜಾರ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಪ್ರತಿಯೊಬ್ಬ ಮನುಷ್ಯ ತನ್ನ ಕುಟುಂಬ, ಜಾತಿ, ಕುಲಕ್ಕೆ ಸೀಮಿತವಾಗಿರದೇ ವಿಶ್ವ ಮಾನವನಾಗಬೇಕೆಂಬ ಪರಿಕಲ್ಪಣೆಯನ್ನು ಕಂಡವರು ರಾಷ್ಟ್ರಕವಿ ಕುವೆಂಪು ಎಂದು ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಹೇಳಿದರು.

ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕುವೆಂಪು ದೃಷ್ಠಿಯಲ್ಲಿ ನಮ್ಮ ಕರ್ನಾಟಕ ಭಾರತ ಮಾತೆಯ ಮಗಳೆಂದು ಜೈ ಭಾರತ ಜನನೀಯ ತನುಜಾತೆ ಎಂದು ವರ್ಣಿಸಿದ್ದಾರೆ. ನಾಡು ನುಡಿಗಾಗಿ ಪ್ರತಿಯೊಬ್ಬ ಕನ್ನಡಿಗನಿಗೆ ಸ್ಫೂರ್ತಿ ತರಲು ಭಾರಿಸು ಕನ್ನಡ ಡಿಂಡಿಮವ ಎಂಬ ಗೀತೆ ಇಂದು ಪ್ರತಿಯೊಬ್ಬ ಕನ್ನಡಿಗನ ಸ್ವಾಭಿಮಾನದ ಕಿಚ್ಚಾಗಿ ಹೊರಮೊಮ್ಮಿದೆ ಎಂದರು.

ಕುವೆಂಪು ಒಬ್ಬ ಕವಿಯಾಗಿರದೇ ರಾಮಾಯಣದರ್ಶನಂ ಮಹಾಕಾವ್ಯ ರಚಿಸಿ ಅನೇಕ ಕಾದಂಬರಿಗಳನ್ನು ಹಾಗೂ ನಾಟಕಗಳನ್ನು ನಾಡಿಗೆ ನೀಡಿದ್ದಾರೆ.

ಅವರ ಅನೇಕ ಕೃತಿಗಳು ಚಲನಚಿತ್ರಗಳಾಗಿವೆ ಎಂದು ಹೇಳಿದ ಪೂಜಾರ, ಕುವೆಂಪು ಅವರನ್ನು ಅರಸಿ ರಾಷ್ಟ್ರ ಮಟ್ಟದ ಅನೇಕ ಪ್ರಶಸ್ತಿಗಳು ಲಭಿಸಿವೆ. ಕನ್ನಡ ಸ್ವಾರಸ್ವತ ಲೋಕದ ಧೃವತಾರೆಯಾಗಿದ್ದ ಕುವೆಂಪುರವರ ಆದರ್ಶ ಜೀವನ ಇಂದಿನ ಯುವ ಕವಿಗಳಿಗೆ, ನಾಟಕಕಾರರಿಗೆ, ಸಾಹಿತಿಗಳಿಗೆ ದಾರಿದೀಪವಾಗಿದೆ ಎಂದರು.

ಉಪನ್ಯಾಸ ನೀಡಿದ ಡಾ.ಚಂದ್ರಶೇಖರ ಕಾಳನ್ನವರ, ಪ್ರತಿಯೊಂದು ಮಗು ಹುಟ್ಟುವಾಗಲೇ ವಿಶ್ವಮಾನವನಾಗಿ ಹುಟ್ಟುತ್ತಾನೆ. ಆದರೆ ಮುಂದೆ ಬೆಳೆಯುತ್ತಾ ಹೋದಂತೆ ಅವನನ್ನು ಅಲ್ಪ ಮಾನವನಾಗಿ ನಾವೆಲ್ಲ ಮಾಡುತ್ತೇವೆ ಎಂದು ಹೇಳಿ ಮತ್ತೇ ಅದನ್ನು ವಿಶ್ವ ಮಾನವನನ್ನಾಗಿ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ಕುವೆಂಪು ಅವರು ಸಾರಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಪ್ರಕಾಶ ಜೇವೂರ ಸೇರಿದಂತೆ ಇತರರು ಇದ್ದರು. ಶಂಕರಲಿಂಗ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು.

## ಅವಧಿ ವಿಸ್ತರಣೆ

ಬಳ್ಳಾರಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ರಾಜ್ಯಾದ್ಯಂತ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ, ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು ಅರ್ಹರಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಕಾಲಾವಧಿಯನ್ನು ಜನವರಿ 09 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿಗಳನ್ನು ಆನ್ ಲೈನ್ ಸೇವಾಸಿಂಧು ಪೋರ್ಟಲ್ ಗೆ ಭೇಟಿ ನೀಡಿ ಸಲ್ಲಿಸಬಹುದಾಗಿದೆ. ನಿಗಧಿತ ಅವಧಿಯ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅವಧಿ ಮೀರಿ ಬರುವ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸಲಾಗುವುದಿಲ್ಲ, ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ದೂ. 08392 - 275182 ಗೆ ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೂತನ ಸ್ಕಿಲ್ ಲ್ಯಾಬ್ ಲೋಕಾರ್ಪಣೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**




ನೂತನ ಸ್ಕಿಲ್ ಲ್ಯಾಬ್ ಗ್ರಾಮೀಣ ಯುವಕರನ್ನು ವಿಶ್ವಮಟ್ಟದ ತಾಂತ್ರಿಕ ತಜ್ಞರನ್ನಾಗಿ ರೂಪಿಸುವ ಉದ್ದೇಶ ಹೊಂದಿದ್ದು, ವಿದ್ಯಾರ್ಥಿಗಳಲ್ಲಿ ಸುರಕ್ಷತೆ, ಶಿಸ್ತು, ಪರಿಸರ ಸಂರಕ್ಷಣೆ ಮತ್ತು ಮೂಲಭೂತ ಕೌಶಲ್ಯಗಳ ಅರಿವು ಮೂಡಿಸುವತ್ತ ಗಮನಹರಿಸಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಹೇಳಿದರು.

ನವನಗರದ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಇತ್ತಿಚೆಗೆ ಟೊಯೊಟಾ ಇವರಿಂದ ಕೈಗಾರಿಕಾ ಕೌಶಲ್ಯ, ಜ್ಞಾನ ಮತ್ತು ಸಂಸ್ಕೃತಿ ಅನಾವರಣ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಕೈಗಾರಿಕಾ ಮಾನದಂಡಗಳಿಗೆ ಅನುಗುಣವಾಗಿ ರೂಪಿಸಲಾಗಿದ್ದು, ಕಲಿಕೆಯಲ್ಲಿ ಮತ್ತು ಭವಿಷ್ಯದ ಉದ್ಯೋಗದಲ್ಲಿ ಅನುಸರಿಸುವ ಮಹತ್ವವನ್ನು ತಿಳಿದುಕೊಳ್ಳಬೇಕಿದೆ ಎಂದರು.

ಟೊಯೋಟಾ ಇವರ ಸಾಮಾಜಿಕ ಬದ್ಧತೆ ಹಾಗೂ ಯುವಕರಿಗೆ ವಿಶ್ವಮಟ್ಟದ ಕೈಗಾರಿಕಾ ತಾಂತ್ರಿಕ ಕೌಶಲ್ಯ, ಶಿಸ್ತು ಮತ್ತು ಪರಿಸರದ ಕಾಳಜಿ ಬಗ್ಗೆ ಪ್ರಶಂಶಿಸಿ ನೂತನವಾಗಿ ನಿರ್ಮಿಸಿದ ಪ್ರಯೋಗಾಲಯದ ಸದುಪಯೋಗಪಡಿಸಿಕೊಂಡಲ್ಲಿ ಯುವಕರು ಯಾವುದೇ ಕ್ಷೇತ್ರಗಳಲ್ಲಿ ಜೀವನೋಪಾಯ ಪಡೆಯಬಹುದಾಗಿದೆ ಎಂದರು.

ಟೊಯೊಟಾ ವತಿಯಿಂದ ಮ್ಯಾನೇಜರ್ ಆರ್.ಮುಕುಂದ ಮಾತನಾಡಿ, ಕರ್ನಾಟಕದಲ್ಲಿ 80 ಕ್ಕೂ ಹೆಚ್ಚು ತಾಂತ್ರಿಕ ಸಂಸ್ಥೆಗಳಲ್ಲಿ ಈ ರೀತಿಯ ಪ್ರಯೋಗಾಲಯುಗಳನ್ನು ನಿರ್ಮಿಸಿದ್ದು, ಕೈಗಾರಿಕೆಗಳಿಗೆ ಅವಶ್ಯಕತೆ ಇರುವ ಕೌಶಲ್ಯಗಳನ್ನು ಪಡೆದಲ್ಲಿ, ವಿಶ್ವಮಟ್ಟದಲ್ಲಿ ನಮ್ಮ ಯುವಕರು ತಮ್ಮ ಸಾಮರ್ಥ್ಯವನ್ನು ಪ್ರಚುರಪಡಸಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಐಟಿಐನ ಪ್ರಾಚಾರ್ಯ ವಿ.ಎಸ್.ಹಿರೇಮಠ. ನೂತನ ಪ್ರಯೋಗಾಲಯ ಸ್ಥಾಪಿಸಿ ತರಬೇತಿ ನೀಡಿದ ಟೊಯೋಟಾ ಪ್ರತಿನಿಧಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಪದ್ಮಶ್ರೀ ಪುರಸ್ಕೃತ ಡಾ.ವೆಂಕಪ್ಪ ಸುಗತೆ-ೕಕರ ಅವರನ್ನು ಟೊಯೋಟಾ ಹಾಗೂ ಐಟಿಐ ವತಿಯಿಂದ ಸನ್ಮಾನಿಸಲಾಯಿತು.

ಟೊಯೋಟಾ ಸಂಪನ್ಮೂಲ ವ್ಯಕ್ತಿಗಳಾಗಿದ್ದ ಎಂ.ಎನ್.ಮಧು ಮತ್ತು ಬಿ.ಸುರೇಶ ಎರಡು ವಾರಗಳ ತರಬೇತಿಯನ್ನು ನೀಡಿದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಗುರುಪಾದಯ್ಯ ಹಿರೇಮಠ, ಪ್ರಾಚಾರ್ಯ ಮುದ್ದೇಬಿಹಾಳ ವೇದಿಕೆ ಮೇಲೆ ಉಪಸ್ಥಿತರಿದ್ದರು. ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯವರು ಭಾಗವಹಿಸಿದ್ದರು. ಸಂತೋಷ ಕಿತ್ತಲಿ ನಿರೂಪಿಸಿದರು.

## ಪದವೀಧರ, ಶಿಕ್ಷಕರ ಕ್ಷೇತ್ರದ ಹುರಿಯಾಳು

**ಬೆಂಗಳೂರು:** ಕರ್ನಾಟಕ ವಿಧಾನ ಪರಿಷತ್ತಿನ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಗೆ ನವೆಂಬರ್ 2026 ರಲ್ಲಿ ನಡೆಯಲಿರುವ ಚುನಾವಣೆಗೆ ಎಐಸಿಸಿ ತನ್ನ ಅಭ್ಯರ್ಥಿಗಳನ್ನು ಪ್ರಕಟಿಸಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯ ಪ್ರಕಾರ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಾಲ್ಕು ಅಭ್ಯರ್ಥಿಗಳ ಹೆಸರನ್ನು ಅನುಮೋದಿಸಿದ್ದಾರೆ.

ಶರಣಪ್ಪ ಮತ್ತೂರ್ ಅವರನ್ನು ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಕಣಕ್ಕಿಳಿಸಲಾಗಿದ್ದು, ಪುಟ್ಟಣ್ಣ ಅವರನ್ನು ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗಿದೆ.

ಪಕ್ಷವು ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಮೋಹನ್ ಲಿಂಬಿಕಾಯಿ ಮತ್ತು ಆಗ್ನೇಯ ಪದವೀಧರ ಕ್ಷೇತ್ರಕ್ಕೆ ಶಶಿ ಹುಲಿಕುಂಟೆಮಠ್ ಅವರನ್ನು ನಾಮನಿರ್ದೇಶನ ಮಾಡಿದೆ ಎಂದು ಪ್ರಕಟಣೆ ತಿಳಿಸಿದೆ.

### ಬಹುಮತ ಸಾಧಿಸಲು ತಂತ್ರ

**ಪ್ರಸ್ತುತ 75 ಸದಸ್ಯ ಬಲದ ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್ 37 ಸ್ಥಾನಗಳನ್ನು ಹೊಂದುವ ಮೂಲಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದರೆ, ಯಾವುದೇ ಮಸೂದೆ ಅಥವಾ ಕಾಯಿದೆಗಳಿಗೆ ತಡೆರಹಿತವಾಗಿ ಅನುಮೋದನೆ ಪಡೆಯಲು ಪಕ್ಷಕ್ಕೆ ಸಂಖ್ಯಾಬಲದ ಅಗತ್ಯವಿದೆ.**

## ಹಣ ಡಬಲಿಂಗ್ ಮಾಡೋದಾಗಿ ಹೇಳಿ ಲಕ್ಷ ಲಕ್ಷ ವಂಚನೆ

**ಬೆಂಗಳೂರು:** ಹಣ ಡಬಲಿಂಗ್ ಮಾಡೋದಾಗಿ ಲಕ್ಷ ಲಕ್ಷ ಪಂಗನಾಮ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಗರದಲ್ಲಿ ನಡೆದಿದೆ. ಬೆಂಗಳೂರಿನ ನಾಗರಭಾವಿ ನಿವಾಸಿ ಹರೀಶ್



ಎಂಬುವರು ಸ್ನೇಹಿತನನ್ನೇ ಯಾಮಾರಿಸಿ 86 ಲಕ್ಷ ವಂಚನೆ ಮಾಡಿದ್ದಾರೆ. ಎಂಜೆಲ್ ಬ್ರೋಕಿಂಗ್ ಟ್ರೇಡಿಂಗ್ ಕಂಪನಿಯಲಿ ಕೆಲಸ ಮಾಡ್ತಿರೋದಾಗಿ ಹೇಳಿ ವಂಚಕ ಹರೀಶ್ ಹೇಳಿದ್ದಾರೆ. ಈ ಕಂಪನಿಯಲ್ಲಿ ಹಣ ಹೂಡಿಕೆ ಮಾಡಿದ್ರೆ ಡಬಲ್ ಹಣ ಕೊಡೊದಾಗಿ ಪುಂಗಿ ಬಿಟ್ಟಿದ್ದ. ಸ್ನೇಹಿತನ ಮಾತು ನಂಬಿ ಮೊದಲಿಗೆ 2 ಲಕ್ಷ ಹಣ ಹೂಡಿಕೆ ಮಾಡಿದ್ದ ಚಂದ್ರಶೇಖರ್.. ಕಳೆದ ಎರಡು ವರ್ಷದ ಹಿಂದೆ ಸತತ ಮೂರು ತಿಂಗಳು ಆರು ಲಕ್ಷ ಹೂಡಿಕೆ ಮಾಡಿದ್ದ ಚಂದ್ರಶೇಖರ್. ನಂತರ ಹೂಡಿಕೆಯ ಹಣದ ಲಾಭಾಂಶ ನೀಡಿದ್ದ ವಂಚಕ ಹರೀಶ್. ಇದನ್ನ ನಂಬಿದ ಚಂದ್ರಶೇಖರ್, ತನ್ನ ಹೆಂಡತಿ ಹಾಗು ಸ್ನೇಹಿತರ ಬಳಿ ಸಾಲ ಮಾಡಿದ್ರು. ಬರೋಬ್ಬರಿ 66 ಲಕ್ಷ ಹಣ ಸಾಲ ಪಡೆದು ಎಂಜೆಲ್ ನ್ರೋಕಿಂಗ್ ಕಂಪನಿಗೆ ಹೂಡಿಕೆ ಮಾಡಿದ್ದಾರೆ. ಇನ್ನು ಆರ್.ಟಿ.ಜಿ.ಎಸ್ ಮೂಲಕ 35 ಲಕ್ಷ ಹಣ ವರ್ಗಾವಣೆ ಮಾಡಿದ್ದ ದೂರುದಾರ. ನಂತರ 31 ಲಕ್ಷ ಹಣವನ್ನ ಬ್ಯಾಂಕ್, ಫೋನ್ ಪೇ, ಗೂಗಲ್ ಪೇ ಮೂಲಕ ವರ್ಗಾವಣೆ. ಅಲ್ಲದೆ ನಗದು ರೂಪದಲ್ಲಿ ಬರೋಬ್ಬರಿ 20 ಲಕ್ಷ ಹಣ ನೀಡಿದ್ದ ಚಂದ್ರಶೇಖರ್. ಕೆಂಗೇರಿ ಬಳಿಯ ಅಂಚೆಪಾಳ್ಯದ ಶ್ರೀನಿಧಿ ಹೋಟೆಲ್‌ನಲ್ಲಿ 20 ಲಕ್ಷ ನಗದು ಹಣ ನೀಡಿದ್ದ ದೂರುದಾರ. ಜೂನ್ 2024 ರಲ್ಲಿ ಹಂತ ಹಂತವಾಗಿ 86 ಲಕ್ಷ ಹಣವನ್ನು ಕೊಟ್ಟಿದ್ದು ದೂರುದಾರ. ಅದರ ಲಾಭಾಂಶ ಸೇರಿ 1.15 ಕೋಟಿ ಕೊಡೊದಾಗಿ ಹೇಳಿದ್ದ ವಂಚಕ ಹರೀಶ್. ಕೆಲ ದಿನದ ನಂತರ ಅಸಲಿ ಆಟ ಶುರುಮಾಟಿದ್ದ ಐನಾತಿ ಹರೀಶ್. ಕಮಿಷನ್ ವಿಷಯದಲ್ಲಿ ಸ್ವಲ್ಪ ಪ್ರಾಂ ಇದೆ ಸ್ವಲ್ಪ ಸಮಯ ಕೊಡಿ ಅಂತ ಪುಂಗಿದ್ದ. ಹಣ ಕೇಳಿದಾಗ ಸಬೂಬು ಹೇಳಿಕೊಂಡು ಮುಂದಕ್ಕೆ ಹಾಕುತ್ತಿದ್ದ ವಂಚಕ. ನಂತರ ತನ್ನ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು ಮನೆಕಾಲಿ ಮಾಡಿಕೊಂಡು ಪರಾರಿಯಾಗಿದ್ದ. ಮೋಸ ಹೋದ ವಿಚಾರ ಗೊತ್ತಾಗ್ತಿದ್ದಂತೆ ಪೊಲೀಸ್ ಠಾಣೆಗೆ ದೂರು ನೀಡಿದ್ದ ಚಂದ್ರಶೇಖರ್. ಕುಂಬಳಗೋಡು ಪೊಲೀಸ್ ಠಾಣೆಯಲ್ಲಿ ಹರೀಶ್ ವಿರುದ್ದ ಎಫ್ ಐ ಆರ್ ದಾಖಲು. ಸದ್ಯ ಆರೋಪಿಯನ್ನ ಬಂಧಿಸಿರೋ ಕುಂಬಳಗೋಡು ಪೊಲೀಸರು. ಪೊಲೀಸ್ ಕಸ್ಟಡಿಗೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ತನಿಖೆ ಮುಂದುವರಿಕೆ ಎಂದು ದೂರು ದಾರಿ ಚಂದ್ರಶೇಖರ್ ತಿಳಿಸಿದರು.

## ಯುವ ಕಾಂಗ್ರೆಸ್ ಸಾಮಾಜಿಕ ಮಾಧ್ಯಮ ವಿಭಾಗದ ರಾಜ್ಯ ಸಂಯೋಜಕರಾಗಿ ಅರುಣ್ ಕುಮಾರ್ ಮುಂಡ್ರಿಗಿ ನೇಮಕ

**ಬಳ್ಳಾರಿ:** ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್‌ನ ಸಾಮಾಜಿಕ ಮಾಧ್ಯಮ ವಿಭಾಗದ ರಾಜ್ಯ ಸಂಯೋಜಕರಾಗಿ ಲಿಡ್ಕರ್ ನಿಗಮದ ಅಧ್ಯಕ್ಷ



ಮುಂಡ್ರಿಗಿ ನಾಗರಾಜ್ ಅವರ ಸಹೋದರನ ಮಗ ಅರುಣ್ ಕುಮಾರ್ ಮುಂಡ್ರಿಗಿ ಅವರನ್ನು ನೇಮಕ ಮಾಡಲಾಗಿದೆ. ಯುವ ಕಾಂಗ್ರೆಸ್‌ನ ಕರ್ನಾಟಕ ಉಸ್ತುವಾರಿಗಳಾದ ನಿಗಮ್ ಭಂಡಾರಿ, ರಾಜ್ಯಾಧ್ಯಕ್ಷರಾದ ಮಂಜುನಾಥ್ ಗೌಡ, ರಾಷ್ಟ್ರೀಯ ಸಂಯೋಜಕರು ಹಾಗೂ ಸಾಮಾಜಿಕ ಮಾಧ್ಯಮ ವಿಭಾಗದ ಉಸ್ತುವಾರಿಗಳಾದ ಶ್ವೇತಾ ಸೋನಿ ಹಾಗೂ ಸಾಮಾಜಿಕ ಮಾಧ್ಯಮ ವಿಭಾಗದ ರಾಜ್ಯಾಧ್ಯಕ್ಷರಾದ ಸಿದ್ದು ಹಳ್ಳೇಗೌಡರ ನೇತೃತ್ವದಲ್ಲಿ ಅರುಣ್ ಕುಮಾರ್ ಮುಂಡ್ರಿಗಿ ಅವರನ್ನು ರಾಜ್ಯ ಸಂಯೋಜಕರಾಗಿ ನೇಮಕ ಮಾಡಲಾಗಿದೆ. ಒಟ್ಟು ಇಪ್ಪತ್ತೊಂದು ಜನರ ಪೈಕಿ ರಾಜ್ಯಾದ್ಯಂತ ಆರು ಜನ ರಾಜ್ಯ ಸಂಯೋಜಕರು ಹಾಗೂ ಹದಿನೈದು ಜನ ಸಹ ಸಂಯೋಜಕರನ್ನಾಗಿ ನೇಮಕ ಮಾಡಲಾಗಿದ್ದು, ಆರು ಜನರ ಪೈಕಿ ಬಳ್ಳಾರಿಯ ಅರುಣ್ ಕುಮಾರ್ ಮುಂಡ್ರಿಗಿ ಹಾಗೂ ನರೇಂದ್ರ ಬಿ ಅವರನ್ನು ರಾಜ್ಯ ಸಂಯೋಜಕರನ್ನಾಗಿ ನೇಮಕ ಮಾಡಲಾಗಿದೆ. ಇದೇ ವೇಳೆ ಮಾತನಾಡಿದ ಅರುಣ್ ಕುಮಾರ್ ಕುಮಾರ್ ಮುಂಡ್ರಿಗಿ ಅವರು ನಮ್ಮನ್ನು ಗುರುತಿಸಿ, ರಾಜ್ಯ ಮಟ್ಟದ ಹುದ್ದೆ ನೀಡಿರುವುದು ಸಂತಸ ತಂದಿದ್ದು, ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಹಾಗೂ ಕಾಂಗ್ರೆಸ್ ಸರ್ಕಾರದ ಯೋಜನೆಗಳ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಚಾರ ಪಡಿಸಲು ಹೆಚ್ಚಿನ ಶ್ರಮ ವಹಿಸುವುದಾಗಿ ತಿಳಿಸಿದರು ಮತ್ತು ವಿರೋಧ ಪಕ್ಷದ ವೈಫಲ್ಯಗಳನ್ನು ಜನರ ಮುಂದಿಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು. ಇದೇ ವೇಳೆ ತಮಗೆ ಈ ಜವಾಬ್ದಾರಿಯನ್ನು ನೀಡಿದ ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷರಾದ ಮಂಜುನಾಥ್ ಗೌಡ ಹಾಗೂ ಸಾಮಾಜಿಕ ಮಾಧ್ಯಮ ವಿಭಾಗದ ರಾಜ್ಯಾಧ್ಯಕ್ಷರಾದ ಸಿದ್ದು ಹಳ್ಳೇಗೌಡ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

## ವಿಜಯಲಕ್ಷ್ಮೀ ಶಿಬರೂರು: ತನಿಖಾ ಪತ್ರಿಕೋದ್ಯಮದ ನಿರ್ಭೀತ ಧ್ವನಿ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಪತ್ರಿಕೋದ್ಯಮವು ಹೆಚ್ಚುತ್ತಿರುವ ವಾಣಿಜ್ಯ ಒತ್ತಡ ಮತ್ತು ಬೆದರಿಕೆಗಳೊಂದಿಗೆ ಹೋರಾಡುತ್ತಿರುವ ಈ ಯುಗದಲ್ಲಿ, ತನಿಖಾ ಪತ್ರಕರ್ತೆ ವಿಜಯಲಕ್ಷ್ಮೀ ಶಿಬರೂರು ಸತ್ಯ, ಜವಾಬ್ದಾರಿ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಬದ್ಧಳಾದ ನಿರ್ಣಾಯಕ ಧ್ವನಿಯಾಗಿ ಎದ್ದು ಕಾಣುತ್ತಾರೆ. ಮುದ್ರಣ, ರೇಡಿಯೊ, ದೂರದರ್ಶನ ಮತ್ತು ಡಿಜಿಟಲ್ ಮಾಧ್ಯಮಗಳಲ್ಲಿ ಎರಡು ದಶಕಗಳಿಗೂ ಹೆಚ್ಚು ಅನುಭವ ಹೊಂದಿರುವ ಅವರು, ಕರ್ನಾಟಕದಲ್ಲಿ ಸ್ವತಂತ್ರ ತನಿಖಾ ಪತ್ರಿಕೋದ್ಯಮಕ್ಕೆ ಬಲವಾದ ಜಾಗವನ್ನು ರಚಿಸಿದ್ದಾರೆ.

ಮಂಗಳೂರಿನ ಹತ್ತಿರದ ಶಿಬರೂರು ಗ್ರಾಮದಲ್ಲಿ 1979ರ ಏಪ್ರಿಲ್ 3ರಂದು ಜನಿಸಿದ ವಿಜಯಲಕ್ಷ್ಮೀ ಅವರ ಪತ್ರಿಕೋದ್ಯಮದ ಪಯಣವು ವಿನಯಶೀಲ ಆರಂಭ ಮತ್ತು ಆಳವಾದ ಸಾಮಾಜಿಕ ಜವಾಬ್ದಾರಿಯಿಂದ ರೂಪಿತವಾಗಿದೆ. ಮಂಗಳೂರು ವಿಶ್ವವಿದ್ಯಾಲಯದಲ್ಲಿ ಸಮೂಹ ಸಂನಾದ ಮತ್ತು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ ನಂತರ, ಕೇಳದವರಿಗೆ ಧ್ವನಿ ನೀಡುವ ಮತ್ತು ವ್ಯವಸ್ಥಿತ ತಪ್ಪುಗಳನ್ನು ಬಯಲುಮಾಡುವ ಉದ್ದೇಶದಿಂದ ಅವರು ಮಾಧ್ಯಮ ಕ್ಷೇತ್ರಕ್ಕೆ ಪ್ರವೇಶಿಸಿದರು.

ಅವರ ವೃತ್ತಿಜೀವನವು ಜನವಾಹಿನಿಯಲ್ಲಿ ಮುದ್ರಣ



ಪತ್ರಿಕೋದ್ಯಮದಿಂದ ಆರಂಭವಾಯಿತು, ನಂತರ ಆಕಾಶವಾಣಿಯಲ್ಲಿ ಕಾರ್ಯಕ್ರಮ ನಿರ್ಮಾಪಕಿಯಾಗಿ ಕೆಲಸ ಮಾಡಿದರು. ಬಳಿಕ ಸಂಯುಕ್ತ ಕರ್ನಾಟಕದಲ್ಲಿ ಸಾಪ್ತಾಹಿಕ ಪೂರಕವನ್ನು ನಿರ್ವಹಿಸಿದರು. ಆದರೆ ದೂರದರ್ಶನ ಪತ್ರಿಕೋದ್ಯಮಕ್ಕೆ ಪರಿವರ್ತನೆಯೇ ಅವರ ಕೆಲಸಕ್ಕೆ ವ್ಯಾಪಕ ಗುರುತಿಸುವಿಕೆ ತಂದಿತು. ಟಿವಿ9 ಕನ್ನಡ, ಇಟಿವಿ ಕನ್ನಡ ಮತ್ತು ನಂತರ ಸುವರ್ಣ ನ್ಯೂಸ್ 24ಥ7ನಲ್ಲಿ ಹಿರಿಯ ವರದಿಗಾರ್ತಿ ಮತ್ತು ನಿರೂಪಕಿಯಾಗಿ, ವಿಜಯಲಕ್ಷ್ಮೀ ಅವರು ತಮ್ಮ ಅವಿಭಾಜ್ಯ ತನಿಖಾ ವರದಿಗಳಿಂದ ಪ್ರಸಿದ್ಧಿಗೆ ಬಂದರು.

ಅವರು ಹೆಚ್ಚು ಪ್ರಸಿದ್ಧರಾದದ್ದು ತಮ್ಮ ತನಿಖಾ ಕಾರ್ಯಕ್ರಮ 'ಕವರ್ ಸ್ಟೋರಿ'ಗಾಗಿ, ಇದು ಅನೇಕ ಭ್ರಷ್ಟಾಚಾರ, ಅಕ್ರಮ ಚಟುವಟಿಕೆಗಳು ಮತ್ತು ಸಾಮಾಜಿಕ ಶೋಷಣೆಯ ಪ್ರಕರಣಗಳನ್ನು ಬಯಲುಮಾಡಿತು. ಅವರ ವರದಿಗಳು ಆಹಾರದಲ್ಲಿ ಮಿಶ್ರಣ, ಅಕ್ರಮ ನೀರು ಸಂಪರ್ಕಗಳು ಮತ್ತು ರಿಯಲ್ ಎಸ್ಟೇಟ್ ಹಗರಣಗಳಿಂದ ಹಿಡಿದು ಪರಿಸರ ಹಾಳಾಗಿಸುವಿಕೆ, ಬಾಲಕಾರ್ಮಿಕತೆ ಮತ್ತು ಕಲ್ಯಾಣ ಯೋಜನೆಗಳಲ್ಲಿ ಉಲ್ಲಂಘನೆಗಳವರೆಗಿನ ಸಮಸ್ಯೆಗಳನ್ನು ಎತ್ತಿ ತೋರಿಸಿವೆ. ಈ ತನಿಖೆಗಳಲ್ಲಿ ಕೆಲವು ಅಧಿಕೃತ ಕ್ರಮಕ್ಕೆ ಕಾರಣವಾದವು ಎಂದು ಹೇಳಲಾಗುತ್ತದೆ, ಪತ್ರಿಕೋದ್ಯಮದ ಕಾವಲುಗಾರನಾಗಿ ಅದರ ಶಕ್ತಿಯನ್ನು ಬಲಪಡಿಸಿತು.

ವಿಜಯಲಕ್ಷ್ಮೀ ಅವರ ಕೆಲಸಕ್ಕೆ ಅಪಾಯಗಳಿಲ್ಲದಿರಲಿಲ್ಲ. ಸೂಕ್ಷ್ಮ ವಿಷಯಗಳ ಮೇಲೆ ವರದಿ ಮಾಡುವಾಗ ಅವರು ಬೆದರಿಕೆಗಳು, ಧಾಕೆಗಳು ಮತ್ತು ದೈಹಿಕ ದಾಳಿಗಳನ್ನು ಎದುರಿಸಿದ್ದಾರೆ, ಭಾರತದಲ್ಲಿ ತನಿಖಾ ಪತ್ರಿಕೋದ್ಯಮಕ್ಕೆ ಸಂಬಂಧಿಸಿದ ಅಪಾಯಗಳನ್ನು ಒತ್ತಿಹೇಳುತ್ತದೆ. ಈ ಸವಾಲುಗಳ ಹೊರತಾಗಿಯೂ ಅವರು ಸ್ಥಿರವಾಗಿ ನಿಂತಿದ್ದು, ತಮ್ಮ ಧೈರ್ಯ ಮತ್ತು ಸಮಗ್ರತೆಗಾಗಿ ವ್ಯಾಪಕ ಗೌರವ ಗಳಿಸಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ, ಅವರು ಸ್ವತಂತ್ರ ಡಿಜಿಟಲ್ ಪತ್ರಿಕೋದ್ಯಮದಲ್ಲಿ ಮುಂಚೂಣಿಯಲ್ಲಿದ್ದು, ವಿಜಯ ಟೈಮ್ಸ್ ಎಂಬ ಕನ್ನಡ ಡಿಜಿಟಲ್ ಸುದ್ದಿ ವೇದಿಕೆಯ ವ್ಯವಸ್ಥಾಪಕ ನಿರ್ದೇಶಕಿಯಾಗಿದ್ದಾರೆ. ಈ ಉದ್ಯಮದ ಮೂಲಕ ಅವರು ನೈತಿಕ ವರದಿಗಾರಿಕೆ, ಗಂಭೀರ ತನಿಖಾ ಕೆಲಸ ಮತ್ತು ಸಾರ್ವಜನಿಕ ಹಿತಾಸಕ್ತಿಯ ಪತ್ರಿಕೋದ್ಯಮವನ್ನು ಮುಖ್ಯವಾಹಿನಿ ಮಾಧ್ಯಮದ ನಿರ್ಬಂಧಗಳಿಂದ ಮೀರಿ ಉತ್ತೇಜಿಸುವ ಗುರಿ ಹೊಂದಿದ್ದಾರೆ.

ಅವರ ಕೊಡುಗೆಗಳು ಹಲವು ರಾಜ್ಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಶಸ್ತಿಗಳಿಂದ ಗುರುತಿಸಲ್ಪಟ್ಟಿವೆ, ಪರಿಸರ ಮತ್ತು ತನಿಖಾ ಪತ್ರಿಕೋದ್ಯಮಕ್ಕಾಗಿ ಗೌರವಗಳು ಸೇರಿದಂತೆ. ಮಹಿಳಾ ಪತ್ರಕರ್ತೆಯರಿಗೆ ಮಾದರಿಯಾಗಿ ಅವರನ್ನು ಗುರುತಿಸಲಾಗಿದೆ, ಅನೇಕರನ್ನು ನಿರ್ಭೀತ ಮತ್ತು ನೈತಿಕ ವರದಿಗಾರಿಕೆಯನ್ನು ಅನುಸರಿಸಲು ಪ್ರೇರೇಪಿಸಿದ್ದಾರೆ.

ವಿಜಯಲಕ್ಷ್ಮೀ ಶಿಬರೂರು ಅವರ ವೃತ್ತಿಜೀವನವು ಪತ್ರಿಕೋದ್ಯಮದ ನಿಜವಾದ ಚೈತನ್ಯವನ್ನು ಪ್ರತಿಬಿಂಬಿಸುತ್ತದೆ. ಅಧಿಕಾರವನ್ನು ಪ್ರಶ್ನಿಸುವುದು, ಅಂಚಿನಲ್ಲಿರುವ ಧ್ವನಿಗಳನ್ನು ಉನ್ನತೀಕರಿಸುವುದು ಮತ್ತು ವೈಯಕ್ತಿಕ ಸುರಕ್ಷತೆ ಅಥವಾ ಲಾಭಕ್ಕಿಂತ ಸಾರ್ವಜನಿಕ ಹಿತಾಸಕ್ತಿಗೆ ಆದ್ಯತೆ ನೀಡುವುದು. ಸತ್ಯವೇ ಸವಾಲುಗೊಳ್ಳುತ್ತಿರುವ ಈ ಸಮಯದಲ್ಲಿ, ಅವರ ಕೆಲಸವು ಸಮಾಜಕ್ಕೆ ಪತ್ರಿಕೋದ್ಯಮದ ಮೂಲಭೂತ ಕರ್ತವ್ಯವನ್ನು ನೆನಪಿಸುತ್ತದೆ: ಮಾಹಿತಿ ನೀಡುವುದು, ಬಯಲುಮಾಡುವುದು ಮತ್ತು ಪ್ರಜಾಪ್ರಭುತ್ವಕ್ಕೆ ಸೇವೆ ಸಲ್ಲಿಸುವುದು.

## ಓದುಗರ ಮೆಚ್ಚುಗೆ ಪಡೆಯುವ ಕೃತಿ



• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಇತ್ತೀಚೆಗೆ ಅನೇಕ ಯುವ ಬರಹಗಾರಿಂದ ರಚನೆಗೊಂಡ ಮೌಲ್ಯಯುತ ಕೃತಿಗಳು ಕನ್ನಡ ಸಾರಸ್ವತಕ್ಕೆ ಸೇರುತ್ತಿರುವುದು ಕನ್ನಡ ಸಾಹಿತ್ಯ ಸಿರಿತನಕ್ಕೆ ಸಾಕ್ಷಿಯಾಗಿದೆ ಎಂದು ಯಾಳಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಬ್ಯಾಂಕಿನ ಮುಖ್ಯ ಕಾರ್ಯನಿರ್ವಾಹಕ ರಾಜಶೇಖರಯ್ಯಸ್ವಾಮಿ ಹಿರೇಮಠ ಹೇಳಿದರು.

ಪಟ್ಟಣದಲ್ಲಿ ಮಂಗಳವಾರ ವಚನ ಸಾಹಿತಿ ಪತ್ರಕರ್ತ ವೀರಣ್ಣ ಕಲಿಕೇರಿ ರವರ ರಚನೆಯ 'ಜ್ಞಾನೋಜ' ಮತ್ತು 'ಅಸ್ತಿತ್ವದ ಅನ್ವೇಷಣೆ' 20, ಕೃತಿಗಳನ್ನು ಖರೀದಿಸುವುದರ ಮೂಲಕ ಮಾತನಾಡಿದ ಅವರು ಅಸ್ತಿತ್ವದ ಅನ್ವೇಷಣೆ ಮತ್ತು ಜ್ಞಾನೋಜಾ ಕೃತಿಗಳು ಅತಿ ಹೆಚ್ಚು ಓದುಗರಿಂದ ಜನಮನ್ನಣೆ ಗಳಿಸಿವೆ, ಕಲಕೇರಿಯವರ ಕೃತಿಗಳಿಗೆ ಸಾಗರದಾಚೆಗೂ ಕನ್ನಡಿಗ ಓದುಗರಿಂದ ಆಭಿಮಾನದ ಬೇಡಿಕೆ ಬಂದಿರುವುದು ಅತೀವ ಸಂತಸ ತಂದಿದೆ ಎಂದ ಅವರು ನಮ್ಮ ಭಾಗದಿಂದ ಸಾಹಿತಿ ಕಲಕೇರಿಯವರು ನಾಡಿನ ಪ್ರತಿಭೆಯಾಗಿ ಗುರುತಿಸಿಕೊಳ್ಳುತ್ತಿರುವುದು ನಮಗೆಲ್ಲ ಸಂಭ್ರಮ ತರುವಂತಹುದಾಗಿದೆ, ಪುಸ್ತಕಗಳನ್ನು ಖರೀದಿಸಿ ಓದುವ ಮತ್ತು ಸಂಗ್ರಹಿಸುವ ಹವ್ಯಾಸವನ್ನು ರೂಡಿಸಿಕೊಳ್ಳೋಣ ಪುಸ್ತಕಗಳನ್ನು ಪ್ರೀತಿಸೋಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ನಿಟಪೂರ್ವ ಅಧ್ಯಕ್ಷ ರಾಮನಗೌಡ ವಂದಗನೂರು, ಸಿಬ್ಬಂದಿಗಳಾದ ದೇವಿಸಿಂಗ್ , ಪ್ರಭುಗೌಡ, ಶರಣು ಬಿದರಿ, ರವಿ ಬಿಂಗೇರಿ, ರಾಚಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅದ್ದೂರಿ ವೈಕುಂಠ ಏಕಾದಶಿ ಮಹೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಪೀಣ್ಯ, ದಾಸರಹಳ್ಳಿ**

ಜೆ .ಡಿ .ಎನ್ ಸೇವಾ ಟ್ರಸ್ಟ್ ನ ಸಹೋದರರಾದ ಬಿ. ದೇವೇಂದ್ರಕುಮಾರ್ ಹಾಗೂ ಬಿ ಜಗದೀಶ್ ಕುಮಾರ್ ಪ್ರತಿವರ್ಷದಂತೆ ಈ ವರ್ಷವೂ ರಾಜಗೋಪಾಲನಗರ ವಾರ್ಡ್ ಜನತೆಯ ಕಲ್ಯಾಣಕ್ಕಾಗಿ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ಹಾಗೂ ಗೊರವನಹಳ್ಳಿ ಲಕ್ಷ್ಮೀ ಮೂರ್ತಿಯನ್ನು ಪ್ರತಿಷ್ಠಾಪಸಿ ದೇವರು ಹಾಗೂ ಜನತೆಯ ಕೃಪೆಗೆ ಪಾತ್ರರಾಗಿದ್ದಾರೆ. ಇವರಿಗೆ ಆ ದೇವರು ಸಕಲ ಇಷ್ಟಾರ್ಥಗಳನ್ನು ನೇರೆವೇರಿಸಲಿ ಎಂದು ಟಿ ಬಿ ಜಯಚಂದ್ರ ಹೇಳಿದರು.

ಪೀಣ್ಯ 2ನೇ ಹಂತ, ರಾಜಗೋಪಾಲನಗರ ವಾರ್ಡ್ನ ಜೆ.ಡಿ.ಎನ್ ಸರ್ಕಲ್ ನಲ್ಲಿ ಜೆ. ಡಿ .ಎನ್ .ಸೇವಾ ಟ್ರಸ್ಟ್ ನ ಸಹೋದರರಾದ ಬಿ. ದೇವೇಂದ್ರ ಕುಮಾರ್ ಹಾಗೂ ಬಿ ಜಗದೀಶ್ ಕುಮಾರ್ ಅಯೋಜಿಸಿದ್ದ ಅದ್ದೂರಿ ವೈಕುಂಠ ಏಕಾದಶಿಯಲ್ಲಿ ಶಿರಾ ಕ್ಷೇತ್ರದ ಶಾಸಕ ಹಾಗೂ ನವದೆಹಲಿಯಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ ಅಗಮಿಸಿ ದೇವರ ದರ್ಶನ ಪಡೆದು ಶುಭಕೋರಿದರು

ಜೆ ಡಿ.ಎನ್ ಸೇವಾ ಟ್ರಸ್ಟ್ ಹಾಗೂ ಜೆ.ಡಿ.ಎನ್ ಎಂಟರ್‌ಪ್ರೈಸಸ್ ಶ್ರೀ ವಿನಾಯಕ ಟ್ರಾನ್ಸ್‌ಪೋರ್ಟ್,

ಬಿ. ನಟರಾಜ್‌ಕುಮಾರ್ ರವರ ಸ್ಮರಣಾರ್ಥ ಅಯೋಜಿಸಿದ್ದ ವೈಕುಂಠ ಏಕಾದಶಿ ಮಹೋತ್ಸವದಲ್ಲಿ ಮುಂಜಾನೆ 5.00 ಗಂಟೆಯಿಂದ ರಾತ್ರಿ 12.00



ಗಂಟೆಯವರೆಗೂ ಜೆ.ಡಿ.ಎನ್ ಕುಟುಂಬಸ್ಥರ ಸಂಯುಕ್ತಾಶ್ರಯದಲ್ಲಿ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ಹಾಗೂ ಗೊರವನಹಳ್ಳಿ ಲಕ್ಷ್ಮೀ ಮೂರ್ತಿಯ ದರ್ಶನ ದೊಂದಿಗೆ ತಿರುಪತಿ ಲಾಡು ಹಾಗೂ ಪ್ರಸಾದ ವಿತರಿಸಲಾಯಿತು. ಈ ಸಂಧರ್ಭದಲ್ಲಿ ಭೈರವ ,ಕಿಶೋರ್, ಕೃಷ್ಣ, ಮಂಜುನಾಥ್, ಕೃಷ್ಣಯ್ಯ ಶೆಟ್ಟಿ, ಸಂತೋಷ್, ಸೋಮಶೇಖರ್, ಜೆ .ಡಿ.ಎನ್ .ಕುಟುಂಬಸ್ಥರು ಪುನೀತ್ ಗೌಡ, ಪ್ರಶಾಂತ್ ಗೌಡ ಇದ್ದರು.

## ಅಭಿವೃದ್ಧಿ ಕಾರ್ಯಕ್ಕೆ ಅನುದಾನ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ತಾಲೂಕಿನ ಮಸೀದಿ ಅಭಿವೃದ್ಧಿಗಾಗಿ ಕುಂಠಿತವಾಗಿರುವ ಕರ್ಯಕ್ಕೆ ಅನುದಾನ ನೀಡಬೇಕೆಂದು ತಾಲೂಕಿನ ಮುಸ್ಲಿಂ ಸಮುದಾಯ ಮುಖಂಡರು ಮಾಜಿ ಶಾಸಕ ಎಚ್ ಪಿ ಮಂಜುನಾಥ್ ಹಾಗೂ ಜಿಲ್ಲಾ ವಕ್ ಬರ್ಡ್ ಸಲಹಾ ಸಮಿತಿ ಅಧ್ಯಕ್ಷರಾದ. ಹಜೀಜ್ ಉಲ್ಲಾ. ಅಜ್ಜು ಹಾಗೂ ಸದಸ್ಯರಾದ ಅಜ್ಗರ್ ಪಾಷಾ. ರವರಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ನಗರದ ಸೇತುವೆ ಬ್ರಿಡ್ಜ್ ಮೊಹಲ್ಲಾ ಜಾಮಿಯಾ ಮಸೀದಿ. ಹಾಗೂ ಮುಸ್ಲಿಂ. ಬ್ಲಾಕ್ ಅಲೆ ಹದೀಸ್ ಮಸೀದಿ ಮದೀನಾ ಮಸೀದಿ ಬಜಾರ್ ರಸ್ತೆ ಜಾಮಿಯಾ ಮಸೀದಿ ಅನುದಾನ ಕರ್ಯಗಳು ಹಾಗೂ ಗುರುಗಳ ವಸತಿ ಗ್ರಹಗಳಿಗೆ ಕಾಂಪೌಂಡ್ ಶೌಚಾಲಯಗಳಿಗೆ ಅನುದಾನ ನೀಡಬೇಕೆಂದು ನಾವು ಮನವಿ ಸಲ್ಲಿಸಿದ್ದೇವೆ ಎಂದು ತಾಲೂಕಿನ ಮುಸ್ಲಿಂ ಮುಖಂಡರು ತಿಳಿಸಿದ್ದಾರೆ.

ಮನವಿನ ಸ್ವೀಕರಿಸಿ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ಮಾತನಾಡಿ ನಾನು ತಾಲೂಕಿನಲ್ಲಿ ಶಾಸಕನಾಗಿದ್ದ ಪ್ರಾರಂಭದಿಂದ ಈಗಿನವರೆಗೂ ಕೂಡ ಅಧಿಕಾರ . ಇರಲಿ ಬಿಡಲಿ ತಾಲೂಕಿನ ಅಭಿವೃದ್ಧಿಗಾಗಿ ಯಾವುದೇ ಸಮುದಾಯಗಳಿಗೆ ತಾರತಮ್ಯ ಮಾಡದೆ ಧರ್ಮಿಕ ಕರ್ಯಗಳಿಗೆ ಮಸೀದಿ ದೇವಸ್ಥಾನ ರ್‍ಗೆ ಅನುದಾನದ ಕೊರತೆ ನಾನು ಮಾಡಿಲ್ಲ ಮಾಡುವುದಿಲ್ಲ ನನ್ನ ತಾಯಿಯ ಹೆಸರಿನಲ್ಲಿ ಹಾಗೂ ವೈಯಕ್ತಿಕ ನನ್ನ ಕೈಯಿಂದ ಸಹಾಯ ಕೂಡ ನಾನು ಮಾಡಿದ್ದೇನೆ ಹಾಗೂ ನೂತನವಾಗಿ ಈಗ



ಸೇತುವೆಯ ಮಸೀದಿಗೆ ಎರಡುವರೆ ಲಕ್ಷ ಹಾಗೂ ಮದೀನಾ ಮಸೀದಿ 2 ಲಕ್ಷ.ಅನುದಾನವನ್ನು ಹಾಗೂ ನೀಡಿದ್ದೇನೆ ಹಾಗೂ ಉಳಿದಂತ ಮಸೀದಿಯ ಅಭಿವೃದ್ಧಿ ಕರ್ಯಗಳಿಗೆ ನನ್ನ ವಯಕ್ತಿಕ. ಸಹಾಯ ಹಾಗೂ. ರ್‍ಕಾರದ ಮುಂದೆ ಗಮನಕ್ಕೆ ತಂದು ಹಾಗೂ ಸಚಿವರಾದ ಬಿಜೆಡ್ ಜಮೀರ್ ಅಹ್ಮದ್ ಖಾನ್ ರವರಿಗೆ ಭೇಟಿ ಮಾಡಿ ಅನುದಾನ ಒದಗಿಸಲು ಗಮನಕ್ಕೆ ತಂದು ಸಂಪರ್ಣ ಶಕ್ತಿಮೀರಿ ಕೆಲಸವನ್ನು ನಾನು ಮಾಡುತ್ತೇನೆ ಎಂದು ತಿಳಿಸಿದರು

ಜಿಲ್ಲಾ ಬರ್ಡ್ ವಕ್ ಬರ್ಡ್ ಸಲಾ ಸಮಿತಿ ಅಧ್ಯಕ್ಷರಾದ ಆಝೀಝುಲ್ಲಾ ಅಜ್ಜು ಮಾತನಾಡಿ ತಾಲೂಕಿನ ಅಣ್ಣ ನಮ್ಮ ಅಣ್ಣ. ಎಚ್. ಪಿ ಮಂಜುನಾಥ್ ಅಣ್ಣ. ಅಧಿಕಾರ ಇರಲಿ ಬಿಡಲಿ. ತಾಲೂಕಿನ ಅಭಿವೃದ್ಧಿಗೆ ಕರ್ಯಕ್ಕೆ ಸದಾ ಸಿದ್ಧ ಎಂದು ತಪ್ಪಾಗಲಾರದು ಹಾಗೂ ಮಾಜಿ ಅಣ್ಣ ಹೇಳಕ್ಕೆ ನಾನು ಆಗುವುದಿಲ್ಲ ಅಂತ ಹೇಳಕ್ಕೆ ನಾನು. ಬಯಸುವುದಿಲ್ಲ ಈಗಲೂ ಕೂಡ ಹಾಲಿ. ಅಂದರೆ ನಮ್ಮ ಮಂಜಣ್ಣ ನಾನು ಬಯಸುತ್ತೇನೆ. ಎಂದರು.

ತಾಲೂಕಿನ ಮಸೀದಿಯ ಅಭಿವೃದ್ಧಿ ಕರ್ಯಗಳ ಬಹಳಷ್ಟು ಮನವಿಗಳನ್ನು ಮಸೀದಿಯ ಮುಖಂಡರುಗಳು ನೀಡಿದ್ದಾರೆ. . ಹಂತ ಹಂತವಾಗಿ ಅನುದಾನವನ್ನು ಬಿಡುಗಡೆ ಗೊಳಿಸಲು ನಮ್ಮ ಸಚಿವರ ಜೊತೆ ರ್‍ಚಿಸಿ ಅಭಿವೃದ್ಧಿ ಕರ್ಯಕ್ಕೆ ಅನುದಾನವನ್ನು ಬಿಡುಗಡೆ ಮಾಡುತ್ತೇನೆ ಎಂದು ತಿಳಿಸಿದರು..

ತಾಲೂಕಿನ ಆಡಳಿತದಲ್ಲಿರು. ಚುನಾಯಿತಿ ಪ್ರತಿನಿಧಿಗಳು ಯಾರೂ ಕೂಡ ಅಭಿವೃದ್ಧಿ. ಕರ್ಯಗಳು ಕುಂಠಿತವಾಗಿದೆ ಎಂದು ವಕ್ ಬರ್ಡ್ ಒಂದು.ರ್‍ಚಿ. ಕೂಡ. ನೀಡಿಲ್ಲ ಎಂದರು ಸಮಸ್ಯೆ ರ್‍ಚಿ ನೀಡುತ್ತಿದ್ದಾರೆ ಇನ್ನೂವರೆಗೆ ಅಭಿವೃದ್ಧಿ ಕರ್ಯಗಳು ಇನ್ನುವರೆಗೆ ಪ್ರಾರಂಭವಾಗುತ್ತಿತ್ತು ಅಂತ ನಾನು ತಿಳಿದುಕೊಳ್ಳುತ್ತಿದ್ದೆ.

ತಾಲೂಕಿನ ವಕ್ ಬರ್ಡ್ ಸಲಾ ಸಮಿತಿ. ಸದಸ್ಯರಾದ ಅಜ್ಗರ್ ಪಾಷಾ ಮಾತನಾಡಿ. ವಕ್ ಬರ್ಡ್ ರಾಜ್ಯದ ಉಪಾಧ್ಯಕ್ಷರಾದ ಶಾಫಿ ಅಸಾದಿ ಸೂಚನೆ ಮೇರೆಗೆ ಯಾರು ಕರ್ಷಿಯಲ್ ಸಾಲವನ್ನು ಪಡೆದಿದ್ದಾರೆ. ವಕ್ ಬರ್ಡ್ ಸಾಲ ಪಡೆದಿದ್ದಾರೆ ಅವರು ಸಸ್ಸನ್ನು ತೆರವಗೊಳಿಸಿ

ತರ್‍ಾಗಿ ಹಣವನ್ನು ಕಟ್ಟಬೇಕೆಂದು ಸೂಚನೆ ನೀಡಿದ್ದಾರೆ ಮತ್ತೊಮ್ಮೆ ಸಾಲವನ್ನು ಪಡೆದುಕೊಳ್ಳಲು ಅವಕಾಶ ಸದುಪಯೋಗ ಮಾಡಿಕೊಳ್ಳಬೇಕೆಂದರು ಎಂದರು. ಈ ಸಂರ್‍ಭದಲ್ಲಿ ವಕ್ ಬರ್ಡ್ ಸದಸ್ಯರಾದ ಅಮ್ಜದ್ ಅಧಿಕಾರಿ ಮುಸ್ತಾಕ್

ಸೇತುವೆ ಮಸೀದಿ ಅಧ್ಯಕ್ಷರಾದ ಅಸ್ಲಾಂ ಪಾಷಾ ಅಲೆ ಹದೀಸ್ ಮಸೀದಿ ಅಧ್ಯಕ್ಷರು ಸಲೀಮುದ್ದೀನ್ ಕರ್‍ರ್ತಿ ಮಜೀದ್ ಅಹ್ಮದ್ ಸದಸ್ಯರಾದ ಅಲ್ತಾಫ್ ಅಹ್ಮದ್ ಲುತ್ಫುಲ್ ಶರೀಫ್ ಅಸ್ಲಾಂ ಉದ್ದಿನ್ ಖಾನ್ ಸುಹೇಲ್ ಜಾಕಿರ್ ಹುಸೇನ್ ಆಶ್ರಯ ಸಮಿತಿ ಸದಸ್ಯರಾದ ಮಹಮ್ಮದ. ಸಲಾವದ್ದೀನ್ ಅಮೀನ್ ಯಾಸಿಫ್ ಖಾನ್ ಸ್ವಾಮಿ ಗೌಡ ಹರೀಶ್ ಆಟೋ ಶಿಲ್ಪಿ ಫಾಝಿಲ್ ಫೈಸೆಲ್ ಮನು ಹಾಗು ಇನ್ನಿತರ ಹಾಜರಿದ್ದರು.

## ನಿಮ್ಮ ಹಣ ನಿಮ್ಮ ಹಕ್ಕು ಅಭಿಯಾನಕ್ಕೆ ಜಿಲ್ಲಾಧಿಕಾರಿ, ಜಿಪಂ ಸಿಇಒ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಜಿಲ್ಲೆಯಲ್ಲಿ ವಾರಸುದಾರರು ಇಲ್ಲದ ಬ್ಯಾಂಕ್ ಠೇವಣಿಗಳ ಖಾತೆಗಳಲ್ಲಿ ಉಳಿದಿರುವ ಹಣವನ್ನು ಮೂಲ ಠೇವಣಿದಾರರಿಗೆ ಅಥವಾ ನಾಮನಿರ್ದೇಶಿತರಿಗೆ ಮರುಪಾವತಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ 'ನಿಮ್ಮ ಹಣ ನಿಮ್ಮ ಹಕ್ಕು' ಅಭಿಯಾನಕ್ಕೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ ನೇಗಿ ಅವರು ಸೋಮವಾರ ಜಿಲ್ಲಾಡಳಿತ ಭವನದಲ್ಲಿರುವ ಕೆಸ್ವಾನ್ ಸಭಾಂಗಣದಲ್ಲಿ ಚಾಲನೆ ನೀಡಿದರು.

ಇದೇ ವೇಳೆ ಭಾರತೀಯ ರಿಸರ್ವ್ ಬ್ಯಾಂಕ್ ಸಹಾಯಕ ಮಹಾಪ್ರಬಂಧಕ ಮೋನಿರಾಜ ಬೃಹ್ಮಾ ಅವರು ಮಾತನಾಡಿ, ವಾರಸುದಾರರು ಇಲ್ಲದ




ಬ್ಯಾಂಕ್‌ಗಳಲ್ಲಿರುವ ಠೇವಣಿಗಳನ್ನು ಪತ್ತೆಹಚ್ಚಿ, ಸಂಬಂಧಿಸಿದ ಬ್ಯಾಂಕ್ ಖಾತೆಗಳ ಮೂಲಕ ಮೊತ್ತವನ್ನು ಮೂಲ ಠೇವಣಿದಾರರು ಅಥವಾ ನಾಮನಿರ್ದೇಶಿತರಿಗೆ ಮರುಪಾವತಿಸಲು ಸಂಬಂಧಿಸಿದ ಬ್ಯಾಂಕ್ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಡಿಇಎಫ್ (ಠೇವಣಿದಾರರ ಶಿಕ್ಷಣ ಮತ್ತು ಜಾಗೃತಿ ನಿಧಿ)ಗೆ ವರ್ಗಾಯಿಸಲಾದ ಠೇವಣಿಗಳನ್ನು ಮರು ಮುಖ್ಯವಾಹಿನಿಗೆ ತಂದು ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಅಗತ್ಯವಿದೆ. ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 2,59,476 ಡಿಇಎಫ್ ಖಾತೆಗಳು ಬಾಕಿ ಉಳಿದಿದ್ದು, ರೂ. 53.35 ಕೋಟಿ ಮೊತ್ತ ವಾರಸುದಾರರು ಇಲ್ಲದೆ ಠೇವಣಿಯಾಗಿ ಉಳಿದುಕೊಂಡಿದೆ. ಇದುವರೆಗೆ 211 ಖಾತೆಗಳಲ್ಲಿರುವ ರೂ. 1.27 ಕೋಟಿ ಮೊತ್ತವನ್ನು ಗುರುತಿಸಿ ಪರಿಹಾರ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ಮಾರುತಿ ಕರ್ಪಾನಿ ಸೇರಿದಂತೆ ಕರ್ನಾಟಕ ಗ್ರಾಮೀಣ ಬ್ಯಾಂಕ್, ಕೆನರಾ ಬ್ಯಾಂಕ್, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕ್ ಆಫ್ ಇಂಡಿಯಾ ಸೇರಿದಂತೆ ವಿವಿಧ ಬ್ಯಾಂಕ್‌ಗಳ ಪ್ರತಿನಿಧಿಗಳು ಹಾಗೂ ಮತ್ತಿತರರು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)